

Volume : 9 | Issue : 134 | August : 09 : 2026 : Sunday
ಸಂಪುಟ : 9 | ಸಂಚಿಕೆ : 134 | ಆಗಸ್ಟ್ : 09 : 2026 : ಭಾನುವಾರ

www.VIKRAMAVAHINI.com

— ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ —

# ವಿಕ್ರಮ ವಾಹಿನಿ

ಪುಟ 4 ₹2 || ಕನ್ನಡ ದಿನಪತ್ರಿಕೆ ||

VIKRAMA VAHINI
PRGI NO: KARKAN/2018/78481



ಯಶ್‌ಗಾಗಿ 'ರೂಲ್ ಬ್ರೇಕ್' ಮಾಡಿದ ನಯನತಾರಾ; 'ಟಾಕ್ಸಿಕ್' ಟ್ರೈಲರ್ ಬಿಡುಗಡೆ ಸಮಾರಂಭದಲ್ಲಿ ನಟನನ್ನು ಮುಕ್ತಕಂಠದಿಂದ ಶ್ಲಾಘಿಸಿದರು.

ಬಿಡದಿ – ನೈಸ್ ಒಂದೇ ನಾಣ್ಯದ ಎರಡು ಮುಖಗಳಿದ್ದಂತೆ : ಹೆಚ್.ಡಿ.ಕೆ ಪುಟ 3

"ಅಯೋಧ್ಯೆ: ಇದು ಶ್ರೀರಾಮನ ಜನ್ಮಭೂಮಿ" ಪುಟ 3

# ಕೈಕಮಾಂಡ್ ಮಡಿಲಿಗೆ ಕೈ ಕ್ಯಾತೆ

● ವಿಕ್ರಮ ವಾಹಿನಿ । ಬೆಂಗಳೂರು

ಸಚಿವ ಸಂಪುಟ ವಿಸ್ತರಣೆ ಬಳಿಕ ಕಾಂಗ್ರೆಸ್‌ನಲ್ಲಿ ಮುಂದುವರಿದಿರುವ ಅಸಮಾಧಾನ ಶಮನಕ್ಕೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ದೆಹಲಿಗೆ ತೆರಳಲು ಸಜ್ಜಾಗಿದ್ದಾರೆ. ವಿಸ್ತರಿತ ಸಂಪುಟದಲ್ಲಿ ಸಣ್ಣಪುಟ್ಟ ಬದಲಾವಣೆ ಮಾಡಿ ಅತೃಪ್ತ ಹಿರಿಯ ಶಾಸಕರಿಗೆ ಅವಕಾಶ ಕಲ್ಪಿಸುವ ಕುರಿತು ಹೈಕಮಾಂಡ್ ಜತೆ ಚರ್ಚೆ ನಡೆಯುವ ಸಾಧ್ಯತೆ ಇದೆ. ಖಾತೆ ಹಂಚಿಕೆಯೂ ಈ ಚರ್ಚೆಯ ಬಳಿಕವೇ ಅಂತಿಮಗೊಳ್ಳುವ ನಿರೀಕ್ಷೆ ಇದೆ.

ಸಚಿವ ಸ್ಥಾನ ಸಿಗದಿರುವುದಕ್ಕೆ ಕೆಲ ಹಿರಿಯ ಶಾಸಕರು ಬಹಿರಂಗವಾಗಿಯೇ ಅಸಮಾಧಾನ ವ್ಯಕ್ತಪಡಿಸುತ್ತಿದ್ದಾರೆ. ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ, ಸಿಎಂ ಡಿ.ಕೆ.ಶಿವಕುಮಾರ್ ಸೇರಿದಂತೆ ಪಕ್ಷದ ಪ್ರಮುಖ ನಾಯಕರು ಅತೃಪ್ತರೊಂದಿಗೆ ಪ್ರತ್ಯೇಕವಾಗಿ ಮಾತುಕತೆ ನಡೆಸಿ ಮನವೊಲಿಸುವ ಪ್ರಯತ್ನ ಮುಂದುವರಿಸಿದ್ದಾರೆ. ಕೆಲವರ ಅಸಮಾಧಾನ ಶಮನವಾಗಿದ್ದರೂ, ಇನ್ನೂ ಕೆಲವರು ಸಚಿವ ಸ್ಥಾನಕ್ಕೆ ಪಟ್ಟು ಹಿಡಿದಿದ್ದಾರೆ.



ಅತೃಪ್ತ ಹಿರಿಯ ಶಾಸಕರಿಗೆ ಸಂಪುಟದಲ್ಲಿ ಅವಕಾಶ ಕಲ್ಪಿಸುವ ಉದ್ದೇಶದಿಂದ 2–3 ಸಚಿವರನ್ನು ಬದಲಿಸುವ ಸಾಧ್ಯತೆಯ ಕುರಿತು ಪಕ್ಷದ ವಲಯದಲ್ಲಿ ಚರ್ಚೆ ನಡೆದಿದೆ. ಕಳಂಕದ ಆರೋಪ ಎದುರಿಸುತ್ತಿರುವ ಸಚಿವರು ಅಥವಾ ಸಚಿವ ಸ್ಥಾನ ತ್ಯಾಗಕ್ಕೆ ಮುಂದಾಗಿರುವವರ ಬದಲಿಗೆ ಹಿರಿಯರಿಗೆ ಅವಕಾಶ ನೀಡುವ ಸಾಧ್ಯತೆಯೂ ಇದೆ ಎನ್ನಲಾಗಿದೆ. ಆದರೆ ಈ ಕುರಿತು ಅಂತಿಮ ನಿರ್ಧಾರ ಹೈಕಮಾಂಡ್ ಮಟ್ಟದಲ್ಲಿ ಕೈಗೊಳ್ಳಬೇಕಿದೆ.

ಸಂಪುಟದಲ್ಲಿ ಮಹಿಳಾ ಪ್ರಾತಿನಿಧ್ಯ ಹೆಚ್ಚಿಸುವ ಬಗ್ಗೆಯೂ ಚರ್ಚೆ ನಡೆಯುತ್ತಿದೆ. ಮಾಜಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್, ಅನ್ನಪೂರ್ಣ ತುಕಾರಾಂ, ನಯನಾ ಮೋಟಮ್ಮ, ಉಮಾಶ್ರೀ ಸೇರಿದಂತೆ ಹಲವರು ಸಚಿವ ಸ್ಥಾನದ ಆಕಾಂಕ್ಷಿಗಳಾಗಿದ್ದಾರೆ. ಪರಿಷತ್ ಸದಸ್ಯೆ ಗಾಯತ್ರಿ ಶಾಂತೇಗೌಡ ಅವರ ಹೆಸರೂ ಚರ್ಚೆಯಲ್ಲಿದೆ. ಮಹಿಳಾ ಸಚಿವರ ಆಯ್ಕೆ ಕುರಿತು ಪಕ್ಷದ ವರಿಷ್ಠರು ಅಂತಿಮ ತೀರ್ಮಾನ ಕೈಗೊಳ್ಳುವ ಸಾಧ್ಯತೆ ಇದೆ.

## ಸಂಪುಟ ಗೊಂದಲಕ್ಕೆ ಹೈಕಮಾಂಡ್ ಸೂತ್ರ?

- **ಸಂಪುಟದಲ್ಲಿ ಸಣ್ಣ ಬದಲಾವಣೆ ಸಾಧ್ಯತೆ:** ಅತೃಪ್ತ ಹಿರಿಯ ಶಾಸಕರಿಗೆ ಅವಕಾಶ ಕಲ್ಪಿಸಲು 2–3 ಸಚಿವರ ಬದಲಾವಣೆ ಕುರಿತು ಚರ್ಚೆ.
- **ದೆಹಲಿಗೆ ಸಿಎಂ ಡಿಕೆಶಿ:** ಕಾಂಗ್ರೆಸ್ ಹೈಕಮಾಂಡ್ ಜೊತೆ ಸಂಪುಟ ಪುನಾರಚನೆ ಹಾಗೂ ಖಾತೆ ಹಂಚಿಕೆ ಕುರಿತು ಚರ್ಚೆ.
- **ಮಹಿಳಾ ಕೋಟಿಗೆ ಒತ್ತು:** ಸಂಪುಟದಲ್ಲಿ ಮಹಿಳೆಗೆ ಸ್ಥಾನ ನೀಡುವ ಕುರಿತು ಹೈಕಮಾಂಡ್ ಮಟ್ಟದಲ್ಲಿ ಚರ್ಚೆ.
- **ಅತೃಪ್ತರ ಮನವೊಲಿಕೆ:** ಸಚಿವ ಸ್ಥಾನ ವಂಚಿತ ಶಾಸಕರನ್ನು ಸಿಎಂ, ಸುರ್ಜೇವಾಲ ಹಾಗೂ ಕೆಪಿಸಿಸಿ ನಾಯಕರು ಭೇಟಿ ಮಾಡಿ ಸಮಾಧಾನಪಡಿಸುವ ಪ್ರಯತ್ನ.
- **ಸೋಮವಾರ ಖಾತೆ ಹಂಚಿಕೆ?** ದೆಹಲಿ ಭೇಟಿಯ ಬಳಿಕ ಖಾತೆ ಹಂಚಿಕೆ ಅಂತಿಮಗೊಳ್ಳುವ ಸಾಧ್ಯತೆ.
- **ಅಧಿವೇಶನಕ್ಕೂ ಮುನ್ನ ತೀರ್ಮಾನ:** ಆ.13ರಂದು ವಿಧಾನಮಂಡಲ ಅಧಿವೇಶನ ಆರಂಭವಾಗುವ ಮುನ್ನ ಸಂಪುಟ ಗೊಂದಲಕ್ಕೆ ತೆರೆ ಎಳೆಯುವ ಅನಿವಾರ್ಯತೆ.

### ಹಿರಿಯರಿಗೆ ಸ್ಥಾನ; 2–3 ಸಚಿವರ ಬದಲಾವಣೆ?

ಸಂಪುಟ ವಿಸ್ತರಣೆ ಬಳಿಕ ಕಾಂಗ್ರೆಸ್‌ನಲ್ಲಿ ಮುಂದುವರಿದ ಅಸಮಾಧಾನದ ಬೆನ್ನಲ್ಲೇ ಸಿಎಂ ಡಿ.ಕೆ.ಶಿವಕುಮಾರ್ ದೆಹಲಿಗೆ ತೆರಳಲಿದ್ದು, ಹೈಕಮಾಂಡ್ ಜೊತೆ 2–3 ಸಚಿವರ ಬದಲಾವಣೆ, ಮಹಿಳಾ ಪ್ರಾತಿನಿಧ್ಯ ಹಾಗೂ ಅತೃಪ್ತ ಹಿರಿಯ ಶಾಸಕರಿಗೆ ಅವಕಾಶ ಕಲ್ಪಿಸುವ ಕುರಿತು ಚರ್ಚಿಸಲಿದ್ದಾರೆ. ದೆಹಲಿ ಭೇಟಿಯ ಬಳಿಕ ಸೋಮವಾರ ಖಾತೆ ಹಂಚಿಕೆ ಅಂತಿಮಗೊಳ್ಳುವ ಸಾಧ್ಯತೆ ಇದ್ದು, ಆ.13ರ ಅಧಿವೇಶನಕ್ಕೂ ಮುನ್ನ ಸಂಪುಟ ಗೊಂದಲಕ್ಕೆ ತೆರೆ ಎಳೆಯುವ ನಿರೀಕ್ಷೆ ಇದೆ.

## ■ ಸುದ್ದಿ ಚುಟುಕು

### ಕೆಪಿಎಸ್‌ಸಿ ಮಾಹಿತಿ ಸೋರಿಕೆ: ಇಬ್ಬರು ಸಿಬ್ಬಂದಿ ಬಂಧನ

● ವಿಕ್ರಮ ವಾಹಿನಿ । ಬೆಂಗಳೂರು

ಕರ್ನಾಟಕ ಲೋಕಸೇವಾ ಆಯೋಗ (ಕೆಪಿಎಸ್‌ಸಿ) ನೇಮಕಾತಿ ಪ್ರಕ್ರಿಯೆಯಲ್ಲಿ ಮತ್ತೊಂದು ಅಕ್ರಮ ಬೆಳಕಿಗೆ ಬಂದಿದೆ. ಸಂದರ್ಶನಕ್ಕೆ ಆಯ್ಕೆಯಾದ ಅಭ್ಯರ್ಥಿಗಳ ಮಾಹಿತಿ ಸೋರಿಕೆ ಮಾಡಿದ ಆರೋಪದ ಮೇಲೆ ಕೆಪಿಎಸ್‌ಸಿಯ ಇಬ್ಬರು ಸಿಬ್ಬಂದಿಯನ್ನು ವಿಧಾನಸೌಧ ಠಾಣೆ ಪೊಲೀಸರು ಬಂಧಿಸಿದ್ದಾರೆ.

ಜಲಸಂಪನ್ಮೂಲ ಇಲಾಖೆಯ ಕಿರಿಯ ಎಂಜಿನಿಯರ್ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ 1:3 ಅನುಪಾತದ ಅರ್ಹತಾ ಪಟ್ಟಿಯಲ್ಲಿದ್ದ ಅಭ್ಯರ್ಥಿಗಳ ಮೊಬೈಲ್ ಸಂಖ್ಯೆ ಹಾಗೂ ಇತರ ವಿವರಗಳನ್ನು ಆಯೋಗದ ಒಳಗಿನಿಂದಲೇ ಮಧ್ಯವರ್ತಿಗಳಿಗೆ ಒದಗಿಸಲಾಗಿದೆ ಎಂದು ತನಿಖೆಯಲ್ಲಿ ತಿಳಿದುಬಂದಿದೆ.

ಆರೋಪದ ಮೇರೆಗೆ ಕೆಪಿಎಸ್‌ಸಿಯ ತಾಂತ್ರಿಕ ಸಹಾಯಕ ಶರಣಪ್ಪ ಅಡವಳ್ಳಿ ಹಾಗೂ ಹಿರಿಯ ಸಹಾಯಕ ಸ್ವಾಮಿದಾಸ್ ಅವರನ್ನು ಪೊಲೀಸರು ಬಂಧಿಸಿ ವಿಚಾರಣೆ ನಡೆಸುತ್ತಿದ್ದಾರೆ.

ನೇಮಕಾತಿಯಲ್ಲಿ ಅಕ್ರಮ ನಡೆಯುತ್ತಿದೆ ಎಂದು ಅಭ್ಯರ್ಥಿಗಳು ನೀಡಿದ್ದ ದೂರಿನ ಆಧಾರದ ಮೇಲೆ ಪೊಲೀಸರು ತನಿಖೆ ಆರಂಭಿಸಿದ್ದರು. ಮಧ್ಯವರ್ತಿಗಳು ಅಭ್ಯರ್ಥಿಗಳಿಗೆ ಕರೆ ಮಾಡಿ ಹಣ ನೀಡಿದರೆ ಉದ್ಯೋಗ ಕೊಡಿಸುವುದಾಗಿ ಭರವಸೆ ನೀಡಿದ್ದ ಆಡಿಯೋ ಹಾಗೂ ವಾಟ್ಸ್‌ಆಪ್ ದಾಖಲೆಗಳು ಪೊಲೀಸರಿಗೆ ಲಭ್ಯವಾಗಿದ್ದವು.

ಕೆಪಿಎಸ್‌ಸಿ ಸಹಾಯಕ ಕಾರ್ಯದರ್ಶಿ ಬಿ.ಎನ್. ಶೋಭಾ ನೀಡಿದ ದೂರಿನ ಮೇರೆಗೆ ವಿಧಾನಸೌಧ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ತನಿಖೆಯ ಆರಂಭಿಕ ಹಂತದಲ್ಲಿ ಮೂವರು ಮಧ್ಯವರ್ತಿಗಳನ್ನು ಬಂಧಿಸಲಾಗಿತ್ತು. ಅವರ ವಿಚಾರಣೆ ವೇಳೆ ಮತ್ತೊಬ್ಬ ಆರೋಪಿಯ ಮಾಹಿತಿ ಲಭ್ಯವಾಗಿದ್ದು, ಆತನನ್ನೂ ವಶಕ್ಕೆ ಪಡೆಯಲಾಗಿತ್ತು.

ಮಧ್ಯವರ್ತಿಗಳ ವಿಚಾರಣೆಯಿಂದ ಅಭ್ಯರ್ಥಿಗಳ ಮಾಹಿತಿ ಆಯೋಗದ ಒಳಗಿನಿಂದಲೇ ಸೋರಿಕೆಯಾಗಿರುವುದು ಬೆಳಕಿಗೆ ಬಂದ ಹಿನ್ನೆಲೆಯಲ್ಲಿ ಇಬ್ಬರು ಸಿಬ್ಬಂದಿಯನ್ನು ಬಂಧಿಸಲಾಗಿದೆ. ನೇಮಕಾತಿ ಅಕ್ರಮದ ಹಿಂದೆ ಇನ್ನಷ್ಟು ಮಂದಿ ಭಾಗಿಯಾಗಿದ್ದಾರೆಯೇ ಎಂಬ ಬಗ್ಗೆ ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

## ಕರಾವಳಿಗೆ ಯೆಲ್ಲೋ ಅಲರ್ಟ್

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದ ಕರಾವಳಿ ಹಾಗೂ ಮಲೆನಾಡು ಭಾಗಗಳಲ್ಲಿ ಮುಂಗಾರು ಚುರುಕುಗೊಂಡಿದ್ದು, ಮುಂದಿನ ದಿನಗಳಲ್ಲಿ ಹಲವು ಜಿಲ್ಲೆಗಳಲ್ಲಿ ಭಾರಿ ಮಳೆಯಾಗುವ ಸಾಧ್ಯತೆ ಇದೆ. ಈ ಹಿನ್ನೆಲೆಯಲ್ಲಿ ಉಡುಪಿ, ದಕ್ಷಿಣ ಕನ್ನಡ, ಉತ್ತರ ಕನ್ನಡ, ಶಿವಮೊಗ್ಗ, ಚಿಕ್ಕಮಗಳೂರು ಹಾಗೂ ಕೊಡಗು ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ.



ಈ ಜಿಲ್ಲೆಗಳಲ್ಲಿ 64.5ರಿಂದ 115.4 ಮಿ.ಮೀ.ವರೆಗೆ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಕರಾವಳಿ ಮತ್ತು ಮಲೆನಾಡಿನ ಕೆಲವೆಡೆ ಧಾರಾಕಾರ ಮಳೆಯೊಂದಿಗೆ ಬಿರುಗಾಳಿ ಬೀಸುವ ಸಾಧ್ಯತೆಯೂ ಇದ್ದು, ಸಾರ್ವಜನಿಕರು ಮುನ್ನೆಚ್ಚರಿಕೆ ವಹಿಸುವಂತೆ ಸೂಚಿಸಲಾಗಿದೆ. ರಾಜ್ಯದ ಉಳಿದ ಜಿಲ್ಲೆಗಳಲ್ಲಿ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ.

ರಾಜಧಾನಿ ಬೆಂಗಳೂರಿನಲ್ಲಿ ಶುಕ್ರವಾರ ಸಂಜೆ ಹಲವು ಪ್ರದೇಶಗಳಲ್ಲಿ ಸಾಧಾರಣ ಮಳೆಯಾಗಿದ್ದು, ವಾತಾವರಣ ತಂಪಾಗಿದೆ. ಮಲ್ಲೇಶ್ವರಂ, ಮೆಜೆಸ್ಟಿಕ್, ಟೌನ್‌ಹಾಲ್, ಜಯನಗರ, ಶಿವಾಜಿನಗರ, ವಿಜಯನಗರ ಸೇರಿದಂತೆ ವಿವಿಧೆಡೆ ಮಳೆ ಸುರಿದಿದೆ.

ಭಾರಿ ಮಳೆಯ ಸಾಧ್ಯತೆ ಹಿನ್ನೆಲೆಯಲ್ಲಿ ಕರಾವಳಿ ಹಾಗೂ ಮಲೆನಾಡು ಜಿಲ್ಲೆಗಳ ಜನರು ಹವಾಮಾನ ಮುನ್ಸೂಚನೆ ಗಮನಿಸಿ ಎಚ್ಚರಿಕೆ ವಹಿಸುವಂತೆ ಸೂಚಿಸಲಾಗಿದೆ.

ಹವಾಮಾನ ಮುನ್ಸೂಚನೆಯಂತೆ ಬೆಂಗಳೂರಿನಲ್ಲಿ ಮುಂದಿನ ಮೂರು ದಿನಗಳ ಕಾಲ ಸಂಜೆ ವೇಳೆಯಲ್ಲಿ ಜಿಟಿಜಿಟಿ ಮಳೆಯಾಗುವ ಸಾಧ್ಯತೆಯಿದೆ.

ಮಳೆಯ ಹಿನ್ನೆಲೆಯಲ್ಲಿ ಕಚೇರಿಯಿಂದ ಮನೆಗೆ ತೆರಳುವ ಉದ್ಯೋಗಿಗಳು ಹಾಗೂ ವಾಹನ ಸವಾರರು ಕೆಲವೆಡೆ ಸಂಚಾರ ದಟ್ಟಣೆಯಿಂದ ತೊಂದರೆ ಅನುಭವಿಸುವ ಸಾಧ್ಯತೆಯಿದ್ದು, ಮುನ್ನೆಚ್ಚರಿಕೆ ವಹಿಸುವಂತೆ ಸೂಚಿಸಲಾಗಿದೆ.

## ಬಿಡದಿ ಟೌನ್‌ಶಿಪ್: ಅಭಿಪ್ರಾಯ ಪರಿಶೀಲನೆಗೆ ಸಮಿತಿ

● ವಿಕ್ರಮ ವಾಹಿನಿ । ಬೆಂಗಳೂರು

ಬಿಡದಿ ಟೌನ್ ಶಿಪ್ (ಗ್ರೇಟರ್ ಬೆಂಗಳೂರು ಸಮಗ್ರ ಉಪನಗರ) ಯೋಜನೆ ವಿಚಾರವಾಗಿ ವ್ಯಕ್ತವಾಗುತಿರುವ ವಿಭಿನ್ನ ಅಭಿಪ್ರಾಯಗಳನ್ನು ಪರಿಶೀಲಿಸಿ ವರದಿ ನೀಡಲು ನ್ಯಾಯಮೂರ್ತಿ ಗುಹನಾಥನ್ ನರೇಂದರ್ ನೇತೃತ್ವದ ಸಮಿತಿ ರಚಿಸಲು ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರು ಆದೇಶಿಸಿದ್ದಾರೆ.

ಈ ಸಮಿತಿಯಲ್ಲಿ ನಿವೃತ್ತ ಮುಖ್ಯಕಾರ್ಯದರ್ಶಿಗಳಾದ ಎಸ್ ವಿ ರಂಗನಾಥ್, ನಿವೃತ್ತ ಅಪರ ಮುಖ್ಯ ಕಾರ್ಯದರ್ಶಿ ಎಸ್.ಆರ್ ಉಮಾಶಂಕರ್, ನಿವೃತ್ತ ಐಎಎಸ್ ಅಧಿಕಾರಿ ಪ್ರಸನ್ನಕುಮಾರ್ ಅವರು ಸದಸ್ಯರಾಗಿದ್ದಾರೆ. ಈ ಸಮಿತಿಯು 30 ದಿನಗಳಲ್ಲಿ ವರದಿ ಸಲ್ಲಿಸಲಿದೆ. ಈ ಯೋಜನೆಗೆ ಯಾರಿಂದಲೂ ಬಲವಂತವಾಗಿ ಭೂಸ್ವಾಧೀನ ಮಾಡಿಕೊಳ್ಳುವುದಿಲ್ಲ ಎಂದು ಮುಖ್ಯಮಂತ್ರಿಗಳು ಈಗಾಗಲೇ ಸ್ಪಷ್ಟಪಡಿಸಿದ್ದಾರೆ.



ಸಮಿತಿಯು ಸದರಿ ಯೋಜನೆಯನ್ನು ಕಾನೂನಾತ್ಮಕ, ಮಾನವೀಯತೆ ಹಾಗೂ ಸಮಗ್ರ ಅಭಿವೃದ್ಧಿಯ ಚೌಕಟ್ಟಿನಲ್ಲಿ ವಿಶ್ಲೇಷಣೆಗೊಳಪಡಿಸಿ ತನ್ನ ಶಿಫಾರಸ್ಸನ್ನು ನೀಡಲಿದೆ.

2006ನೇ ಸಾಲಿನಲ್ಲಿ ಬಿಡದಿ ಬಳಿ ಸಮಗ್ರ ಉಪ ನಗರವನ್ನು ಅಭಿವೃದ್ಧಪಡಿಸಲು ತೀರ್ಮಾನಿಸಲಾಗಿತ್ತು. ಇತ್ತೀಚೆಗೆ ಬೆಂಗಳೂರಿನ ಸಮೀಪ ಬಂಡವಾಳ ಹೂಡಿಕೆಗೆ ಬೇಡಿಕೆ ಹೆಚ್ಚಾಗಿದ್ದು, ನನೆಗುದಿಗೆ ಬಿದ್ದಿದ್ದ ಬಿಡದಿ ಸಮಗ್ರ ಉಪನಗರ ಯೋಜನೆಯನ್ನು ಜನವಸತಿ ಪ್ರದೇಶಗಳ ಕನಿಷ್ಠ ಸ್ಥಳಾಂತರ ಮತ್ತು ಭೂಮಾಲೀಕರಿಗೆ ಉತ್ತಮ ಮೌಲ್ಯ ಒದಗಿಸುವ ಆಶಯದೊಂದಿಗೆ ಗ್ರೇಟರ್ ಬೆಂಗಳೂರು ಸಮಗ್ರ ಉಪನಗರ ಯೋಜನೆಯನ್ನು ಮುಂದುವರೆಸಲು ಸರ್ಕಾರವು ತೀರ್ಮಾನಿಸಿದೆ.

ಯೋಜನೆಯನ್ನು ಜನಸ್ನೇಹಿಯಾಗಿ ಜಾರಿಗೊಳಿಸಲು ಸಾರ್ವಜನಿಕರ ಸಲಹೆ, ಸೂಚನೆ ಮತ್ತು ಅಭಿಪ್ರಾಯಗಳಿಗೆ ಮನ್ನಣೆ ನೀಡುವುದಾಗಿ ಸರಕಾರ ಈಗಾಗಲೇ ಸ್ಪಷ್ಟಪಡಿಸಿದೆ.


ಜನರ ಆಶೋತ್ತರಗಳನ್ನು ಗೌರವಿಸಿ, ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಈ ಯೋಜನೆಯನ್ನು ಮತ್ತಷ್ಟು ಉತ್ತಮವಾಗಿ ರೂಪಿಸುವುದು ಸರ್ಕಾರದ ಆಶಯವಾಗಿದ್ದು, ಈ ಹಿನ್ನೆಲೆಯಲ್ಲಿ ಸಮಿತಿ ರಚನೆಯನ್ನು ಮಾಡಿದೆ.

## 40 ಕೋಟಿ ಯುವಶಕ್ತಿ, ನಿರುದ್ಯೋಗದ ಸವಾಲು: ರಾಹುಲ್

● ವಿಕ್ರಮ ವಾಹಿನಿ । ಪ್ರಯಾಗ್‌ರಾಜ್

ಭಾರತದ 40 ಕೋಟಿ ಯುವಕರು ದೇಶದ ನಿಜವಾದ ಶಕ್ತಿಯಾಗಿದ್ದು, ಅಪಾರ ಪ್ರತಿಭೆ ಮತ್ತು ಸಾಮರ್ಥ್ಯ ಹೊಂದಿದ್ದಾರೆ. ಆದರೆ ಸರ್ಕಾರದ ತಪ್ಪು ನೀತಿಗಳಿಂದ ಯುವಕರಿಗೆ ಉದ್ಯೋಗಾವಕಾಶಗಳು ಕಡಿಮೆಯಾಗಿವೆ ಎಂದು ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಆರೋಪಿಸಿದರು.

ಪ್ರಯಾಗ್‌ರಾಜ್‌ನ ಕೆಪಿ ಮೈದಾನದಲ್ಲಿ ನಡೆದ 'ಛಾತ್ರೋನ್ ಕಿ ಗೂಂಜ್' ಕಾರ್ಯಕ್ರಮದಲ್ಲಿ ಸಾವಿರಾರು ವಿದ್ಯಾರ್ಥಿಗಳು ಹಾಗೂ ಯುವಕರನ್ನುದ್ದೇಶಿಸಿ ಮಾತನಾಡಿದ ಅವರು, ಅಮೆರಿಕ, ಚೀನಾ ಮತ್ತು ರಷ್ಯಾದಂತಹ ಜಾಗತಿಕ ಶಕ್ತಿಗಳಿಗೆ ಹೋಲಿಸಿದರೆ ಭಾರತದ ಯುವಜನರಲ್ಲಿ ಅಪಾರ ಸಾಮರ್ಥ್ಯವಿದೆ ಎಂದರು.



**ಯುವಶಕ್ತಿಯೇ ಭಾರತದ ಬಲ**

"ಭಾರತದ 40 ಕೋಟಿ ಯುವಕರು ದೇಶದ ಭವಿಷ್ಯ ರೂಪಿಸುವ ಶಕ್ತಿ. ಅವರ ಬುದ್ಧಿವಂತಿಕೆ, ಸೃಜನಶೀಲತೆ ಮತ್ತು ಪ್ರತಿಭೆಯನ್ನು ಸರಿಯಾಗಿ ಬಳಸಿಕೊಂಡರೆ ಭಾರತ ಜಗತ್ತಿನ ಪ್ರಮುಖ ಆರ್ಥಿಕ ಶಕ್ತಿಯಾಗಬಹುದು" ಎಂದು ರಾಹುಲ್ ಗಾಂಧಿ ಹೇಳಿದರು.

21ನೇ ಶತಮಾನದಲ್ಲಿ ಭಾರತಕ್ಕೆ ಎರಡು ಪ್ರಮುಖ ಶಕ್ತಿಗಳಿವೆ. ಒಂದು, ವಿಶ್ವದ ಅತಿದೊಡ್ಡ ಯುವ ಜನಸಂಖ್ಯೆ; ಮತ್ತೊಂದು, ದೇಶದ ಅಪಾರ ಡೇಟಾ ಬಳಕೆ. ಈ ಎರಡನ್ನೂ ಪರಿಣಾಮಕಾರಿಯಾಗಿ ಬಳಸಿಕೊಳ್ಳುವ ಅಗತ್ಯವಿದೆ ಎಂದು ಅವರು ಹೇಳಿದರು.

**ಯುವಕರಿಗೆ ಉದ್ಯೋಗ ಸೃಷ್ಟಿಸಬೇಕು**

ಯುವಕರಿಗೆ ಶಿಕ್ಷಣದ ಜತೆಗೆ ಗುಣಮಟ್ಟದ ಉದ್ಯೋಗಾವಕಾಶಗಳನ್ನು ಸೃಷ್ಟಿಸುವುದು ಸರ್ಕಾರಗಳ ಆದ್ಯತೆಯಾಗಬೇಕು. ದೇಶದ ಯುವಶಕ್ತಿಯನ್ನು ನಿರುದ್ಯೋಗದತ್ತ ತಳ್ಳದೆ, ಅವರ ಕೌಶಲ್ಯ ಮತ್ತು ಪ್ರತಿಭೆಯನ್ನು ಆರ್ಥಿಕ ಅಭಿವೃದ್ಧಿಗೆ ಬಳಸಿಕೊಳ್ಳಬೇಕು ಎಂದು ರಾಹುಲ್ ಗಾಂಧಿ ಒತ್ತಾಯಿಸಿದರು. ಕಾರ್ಯಕ್ರಮಕ್ಕೂ ಮುನ್ನ ಆನಂದ್ ಭವನ–ಸ್ವರಾಜ್ ಭವನದಲ್ಲಿ ಕಾಂಗ್ರೆಸ್ ಕಾರ್ಯಕರ್ತರೊಂದಿಗೆ ಸಭೆ ನಡೆಸಿದ ಅವರು, ಪಕ್ಷದ ಸಂಘಟನೆ ಹಾಗೂ ಯುವ ಚಳವಳಿಗಳ ಕುರಿತು ಚರ್ಚಿಸಿದರು. ದೇಶದ ಆರ್ಥಿಕ ಪ್ರಗತಿಗೆ ಯುವಕರ ಕೌಶಲ್ಯಾಭಿವೃದ್ಧಿ, ಗುಣಮಟ್ಟದ ಶಿಕ್ಷಣ ಹಾಗೂ ಉದ್ಯೋಗ ಸೃಷ್ಟಿಗೆ ಹೆಚ್ಚಿನ ಒತ್ತು ನೀಡಬೇಕು. ಯುವಶಕ್ತಿಯನ್ನು ಸಮರ್ಪಕವಾಗಿ ಬಳಸಿಕೊಂಡರೆ ಭಾರತ ಜಾಗತಿಕ ಮಟ್ಟದಲ್ಲಿ ಮತ್ತಷ್ಟು ಬಲಿಷ್ಠ ಆರ್ಥಿಕತೆಯಾಗಿ ಹೊರಹೊಮ್ಮಲಿದೆ ಎಂದು ರಾಹುಲ್ ಗಾಂಧಿ ಹೇಳಿದರು.

ಸರ್ಕಾರದ ನೀತಿಗಳ ವಿರುದ್ಧ ಟೀಕೆ: ಉದ್ಯೋಗ ಸೃಷ್ಟಿಯಲ್ಲಿ ಸರ್ಕಾರಗಳು ವಿಫಲವಾಗಿವೆ ಎಂದು ಆರೋಪಿಸಿದ ಅವರು, ಯುವಕರ ಸಾಮರ್ಥ್ಯಕ್ಕೆ ತಕ್ಕ ಅವಕಾಶಗಳನ್ನು ಕಲ್ಪಿಸುವ ಅಗತ್ಯವಿದೆ ಎಂದು ಹೇಳಿದರು.

## ಅಸಮಾಧಾನಿತ ಕಾಂಗ್ರೆಸ್ ಶಾಸಕರಿಗೆ ಹೆಚ್.ಡಿ.ಕೆ ಆಫರ್

● ವಿಕ್ರಮ ವಾಹಿನಿ । ಹಾಸನ

ರಾಜ್ಯ ಕಾಂಗ್ರೆಸ್‌ನಲ್ಲಿ ಸಚಿವ ಸಂಪುಟ ವಿಸ್ತರಣೆ ಬಳಿಕ ಭುಗಿಲೆದ್ದಿರುವ ಅಸಮಾಧಾನದ ನಡುವೆಯೇ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರು ಅಸಮಾಧಾನಿತ ಶಾಸಕರಿಗೆ ಜೆಡಿಎಸ್ ಸೇರುವಂತೆ ಬಹಿರಂಗ ಆಹ್ವಾನ ನೀಡಿದ್ದಾರೆ.

ಸಚಿವ ಸ್ಥಾನ ಕೈತಪ್ಪಿದ್ದರಿಂದ ಅಸಮಾಧಾನಗೊಂಡಿರುವ ಕಾಂಗ್ರೆಸ್ ಶಾಸಕರನ್ನು ಮುಖ್ಯಮಂತ್ರಿ ಡಿ.ಕೆ.ಶಿವ ಕುಮಾರ್ ಹಾಗೂ ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಅವರು ಭೇಟಿಯಾಗಿ ಮನವೊಲಿಸುವ ಪ್ರಯತ್ನ ನಡೆಸುತ್ತಿರುವ ಬೆನ್ನಲ್ಲೇ ಕುಮಾರಸ್ವಾಮಿ ಅವರ ಹೇಳಿಕೆ ರಾಜ್ಯ ರಾಜಕಾರಣದಲ್ಲಿ ಕುತೂಹಲ ಮೂಡಿಸಿದೆ. 'ನೊಂದವರಿಗೆ ಜೆಡಿಎಸ್ ಬಾಗಿಲು ತೆರೆದಿದೆ': ಹಾಸನದ ಹರದನಹಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಕುಮಾರಸ್ವಾಮಿ, "ಜೆಡಿಎಸ್ ನೊಂದವರಿಗೆ, ನೋವಿನಲ್ಲಿರುವವರಿಗೆ ಹಾಗೂ ಸಮಸ್ಯೆಯಲ್ಲಿರುವವರಿಗೆ ಪರಿಹಾರ ನೀಡುವ ಪಕ್ಷ. ನೋವಿನಲ್ಲಿರುವವರಿಗೆ ಜೆಡಿಎಸ್ ಪಕ್ಷದ ಬಾಗಿಲು ತೆರೆದಿರುತ್ತದೆ" ಎಂದು ಹೇಳಿದರು.



ಸಚಿವ ಸಂಪುಟ ವಿಸ್ತರಣೆಯ ಬಳಿಕ ಕಾಂಗ್ರೆಸ್‌ನಲ್ಲಿ ಉಂಟಾಗಿರುವ ಆಂತರಿಕ ಅಸಮಾಧಾನವನ್ನು ರಾಜಕೀಯವಾಗಿ ಬಳಸಿಕೊಳ್ಳಲು ಜೆಡಿಎಸ್ ಮುಂದಾಗಿದೆ ಎಂಬ ಚರ್ಚೆಗೂ ಕುಮಾರಸ್ವಾಮಿ ಅವರ ಹೇಳಿಕೆ ಕಾರಣವಾಗಿದೆ.

ಕಾಂಗ್ರೆಸ್‌ಗೆ ಹೊಸ ತಲೆನೋವು: ಸಚಿವ ಸ್ಥಾನ ಸಿಗದಿರುವುದಕ್ಕೆ ಹಲವು ಶಾಸಕರು ಬಹಿರಂಗವಾಗಿಯೇ ಅಸಮಾಧಾನ ವ್ಯಕ್ತಪಡಿಸುತ್ತಿರುವ ಹಿನ್ನೆಲೆಯಲ್ಲಿ ಕಾಂಗ್ರೆಸ್ ನಾಯಕತ್ವ ಅವರಿಗೆ ಸಮಾಧಾನ ಹೇಳುವ ಪ್ರಯತ್ನದಲ್ಲಿದೆ. ಈ ನಡುವೆ ಕುಮಾರಸ್ವಾಮಿ ಅವರ ಬಹಿರಂಗ ಆಫರ್ ಕಾಂಗ್ರೆಸ್‌ಗೆ ಮತ್ತೊಂದು ರಾಜಕೀಯ ಸವಾಲಾಗಿ ಪರಿಣಮಿಸಿದೆ. ಕುಮಾರಸ್ವಾಮಿ ಅವರ ಈ ಹೇಳಿಕೆ ಕಾಂಗ್ರೆಸ್‌ನ ಅಸಮಾಧಾನಿತ ಶಾಸಕರನ್ನು ಸೆಳೆಯುವ ಜೆಡಿಎಸ್‌ನ ರಾಜಕೀಯ ತಂತ್ರಕ್ಕೆ ಮತ್ತಷ್ಟು ಬಲ ನೀಡಿದೆ.

ಅಸಮಾಧಾನಿತ ಶಾಸಕರ ಪೈಕಿ ಯಾರಾದರೂ ಜೆಡಿಎಸ್‌ನತ್ತ ಹೆಜ್ಜೆ ಹಾಕುತ್ತಾರೆಯೇ ಎಂಬುದು ಸದ್ಯ ರಾಜ್ಯ ರಾಜಕೀಯದಲ್ಲಿ ಕುತೂಹಲ ಮೂಡಿಸಿದೆ.

## ಬಲೂನ್ ಗ್ಯಾಸ್ ಸಿಲಿಂಡರ್ ಸ್ಫೋಟ; ನಾಲ್ವರಿಗೆ ಗಾಯ

● ವಿಕ್ರಮ ವಾಹಿನಿ । ಹೈದರಾಬಾದ್

ನಗರದ ಮಿಯಾಪುರ ಪ್ರದೇಶದಲ್ಲಿ ಬಲೂನ್‌ಗಳಿಗೆ ಗ್ಯಾಸ್ ತುಂಬಲು ಬಳಸುತ್ತಿದ್ದ ಸಣ್ಣ ಸಿಲಿಂಡರ್‌ವೊಂದು ದಿಢೀರ್ ಸ್ಫೋಟಗೊಂಡು ನಾಲ್ವರು ಗಂಭೀರವಾಗಿ ಗಾಯಗೊಂಡಿರುವ ಘಟನೆ ಶನಿವಾರ ಸಂಜೆ ನಡೆದಿದೆ.

ಜಿಎಸ್‌ಎಂ ಮಾಲ್ ಸಮೀಪದ ರಸ್ತೆಯಲ್ಲಿ ಘಟನೆ ನಡೆದಿದ್ದು, ಸ್ಫೋಟದ ತೀವ್ರತೆಗೆ ಸ್ಥಳದಲ್ಲಿ ಕೆಲಕಾಲ ಆತಂಕದ ವಾತಾವರಣ ನಿರ್ಮಾಣವಾಗಿತ್ತು. ರಸ್ತೆ ಬದಿಯಲ್ಲಿ ಬಲೂನ್‌ಗಳಿಗೆ ಗ್ಯಾಸ್ ತುಂಬುವ ಕೆಲಸ ನಡೆಯುತ್ತಿದ್ದ ಸಂದರ್ಭದಲ್ಲಿ ಸಿಲಿಂಡರ್‌ನಲ್ಲಿ ಏಕಾಏಕಿ ಸ್ಫೋಟ ಸಂಭವಿಸಿದೆ ಎನ್ನಲಾಗಿದೆ.

ಸ್ಫೋಟದಲ್ಲಿ ನಾಲ್ವರು ಗಂಭೀರವಾಗಿ ಗಾಯಗೊಂಡಿದ್ದು, ಸ್ಥಳದಲ್ಲಿದ್ದವರು ತಕ್ಷಣ ನೆರವಿಗೆ ಧಾವಿಸಿದ್ದಾರೆ. ಗಾಯಾಳುಗಳನ್ನು ಸಮೀಪದ ಆಸ್ಪತ್ರೆಗೆ ಕರೆದೊಯ್ದು ಚಿಕಿತ್ಸೆ ನೀಡಲಾಗುತ್ತಿದೆ. ಗಾಯಗೊಂಡವರ ಗುರುತು ಹಾಗೂ ಅವರ ಆರೋಗ್ಯ ಸ್ಥಿತಿಗೆ ಸಂಬಂಧಿಸಿದ ಹೆಚ್ಚಿನ ವಿವರಗಳನ್ನು ಅಧಿಕಾರಿಗಳು ಇನ್ನಷ್ಟೇ ದೃಢಪಡಿಸಬೇಕಿದೆ.

ಘಟನೆಯ ಮಾಹಿತಿ ತಿಳಿಯುತ್ತಿದ್ದಂತೆ ಪೊಲೀಸರು ಸ್ಥಳಕ್ಕೆ ಆಗಮಿಸಿ ಪರಿಶೀಲನೆ ನಡೆಸಿದರು. ಸ್ಫೋಟಕ್ಕೆ ನಿಖರ ಕಾರಣವೇನು ಎಂಬುದನ್ನು ಪತ್ತೆಹಚ್ಚಲು ಸ್ಥಳ ಪರಿಶೀಲನೆ ಹಾಗೂ ತನಿಖೆ ಆರಂಭಿಸಲಾಗಿದೆ.

## 'ಭಾರತದಲ್ಲಿ ಸ್ವಾವಲಂಬನೆಯ ನವಯುಗ'

● ವಿಕ್ರಮ ವಾಹಿನಿ । ನವದೆಹಲಿ

ಯುವ ಸಮುದಾಯವೇ ವಿಕಸಿತ ಭಾರತದ ಭವಿಷ್ಯದ ವಾಸ್ತುಶಿಲ್ಪಿಗಳು. ಪ್ರಧಾನಿ ನರೇಂದ್ರ ಮೋದಿ ಅವರು ಯುವಶಕ್ತಿಯ ಸಾಮರ್ಥ್ಯದ ಮೇಲೆ ಅಪಾರ ವಿಶ್ವಾಸವಿರಿಸಿ, ಉನ್ನತ ಶಿಕ್ಷಣ ಕ್ಷೇತ್ರಕ್ಕೆ ಹೆಚ್ಚಿನ ಆದ್ಯತೆ ನೀಡುತ್ತಿದ್ದಾರೆ ಎಂದು ಕೇಂದ್ರ ಶಿಕ್ಷಣ ಸಚಿವ ಪ್ರಲ್ಹಾದ ಜೋಶಿ ಹೇಳಿದರು.

ದೆಹಲಿಯಲ್ಲಿ ಶನಿವಾರ ನಡೆದ ಐಐಟಿ 57ನೇ ಘಟಿಕೋತ್ಸವ ಸಮಾರಂಭದಲ್ಲಿ ಮಾತನಾಡಿದ ಅವರು, ದೇಶದಲ್ಲಿ ಪ್ರಸ್ತುತ 4.5 ಕೋಟಿಗೂ ಅಧಿಕ ವಿದ್ಯಾರ್ಥಿಗಳು ಉನ್ನತ ಶಿಕ್ಷಣ ಪಡೆಯುತ್ತಿದ್ದಾರೆ. 2014ರ ಬಳಿಕ ದೇಶದಲ್ಲಿ ವಿಶ್ವವಿದ್ಯಾಲಯಗಳ ಸಂಖ್ಯೆ ಶೇ.70ರಷ್ಟು ಹೆಚ್ಚಾಗಿದೆ ಎಂದು ತಿಳಿಸಿದರು. ದೇಶದಲ್ಲಿ 650ಕ್ಕೂ ಹೆಚ್ಚು ಹೊಸ ವಿಶ್ವವಿದ್ಯಾಲಯಗಳು ಹಾಗೂ 14 ಸಾವಿರಕ್ಕೂ ಅಧಿಕ ಹೊಸ ಕಾಲೇಜುಗಳು ಆರಂಭವಾಗಿವೆ. ಇದರ ಜತೆಗೆ ಹೊಸ ಐಐಟಿಗಳು, ಐಐಎಂಗಳು ಮತ್ತು ಏಮ್ಸ್‌ಗಳ ಸ್ಥಾಪನೆಯ ಮೂಲಕ ಉನ್ನತ ಶಿಕ್ಷಣದ ಅವಕಾಶಗಳನ್ನು ವಿಸ್ತರಿಸಲಾಗಿದೆ ಎಂದು ಜೋಶಿ ಹೇಳಿದರು.




ಹೊಸ ರಾಷ್ಟ್ರೀಯ ಶಿಕ್ಷಣ ನೀತಿಯ ಮೂಲಕ ಶಿಕ್ಷಣ ವ್ಯವಸ್ಥೆಯಲ್ಲಿ ಮಹತ್ವದ ಸುಧಾರಣೆಗಳನ್ನು ತರಲಾಗಿದ್ದು, ವಿದ್ಯಾರ್ಥಿಗಳನ್ನು ಜ್ಞಾನ, ತಂತ್ರಜ್ಞಾನ, ಕೌಶಲ್ಯ ಮತ್ತು ಸಂಶೋಧನೆಗೆ ಸಜ್ಜುಗೊಳಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲಾಗಿದೆ ಎಂದರು.

ಐಐಟಿಗಳು ಭವಿಷ್ಯದ ಸಂಶೋಧಕರು, ನಾವೀನ್ಯಕಾರರು, ಉದ್ಯಮಿಗಳು ಹಾಗೂ ರಾಷ್ಟ್ರ ನಿರ್ಮಾತೃಗಳನ್ನು ರೂಪಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತಿವೆ. ಭಾರತದ ಶಿಕ್ಷಣ ವ್ಯವಸ್ಥೆ ಸಂಶೋಧನಾ ಆಧಾರಿತ ಹಾಗೂ ಭವಿಷ್ಯದ ಸವಾಲುಗಳಿಗೆ ಸಿದ್ಧವಾಗುವ ರೀತಿಯಲ್ಲಿ ರೂಪುಗೊಳ್ಳುತ್ತಿದೆ ಎಂದು ಅವರು ಹೇಳಿದರು.

ಪದವಿ ಪಡೆಯುತ್ತಿರುವ ವಿದ್ಯಾರ್ಥಿಗಳು ಕೇವಲ ಶೈಕ್ಷಣಿಕ ಸಾಧನೆಗೆ ಸೀಮಿತವಾಗದೆ, ನಾವೀನ್ಯತೆ, ಪ್ರಾಮಾಣಿಕ ನಾಯಕತ್ವ ಮತ್ತು ಸಾಮಾಜಿಕ ಹೊಣೆಗಾರಿಕೆಗೆ ಆದ್ಯತೆ ನೀಡಬೇಕು. ವಿಕಸಿತ ಭಾರತ ನಿರ್ಮಾಣಕ್ಕೆ ತಮ್ಮದೇ ಆದ ಕೊಡುಗೆ ನೀಡುವ ಸಂಕಲ್ಪದೊಂದಿಗೆ ಮುನ್ನಡೆಯಬೇಕು ಎಂದು ಪ್ರಲ್ಹಾದ ಜೋಶಿ ಕರೆ ನೀಡಿದರು.

ಶಿಕ್ಷಣದ ಜತೆಗೆ ಕೌಶಲ್ಯಾಭಿವೃದ್ಧಿ ಮತ್ತು ಉದ್ಯೋಗಾಧಾರಿತ ತರಬೇತಿಗೆ ಒತ್ತು ನೀಡುವ ಮೂಲಕ ಯುವಕರ ಸಾಮರ್ಥ್ಯವನ್ನು ದೇಶದ ಅಭಿವೃದ್ಧಿಗೆ ಬಳಸಿಕೊಳ್ಳಲಾಗುತ್ತಿದೆ. ತಂತ್ರಜ್ಞಾನ ಹಾಗೂ ನವೀನ ಆವಿಷ್ಕಾರಗಳ ಮೂಲಕ ಜಾಗತಿಕ ಮಟ್ಟದಲ್ಲಿ ಭಾರತವನ್ನು ಮುನ್ನಡೆಸುವ ಜವಾಬ್ದಾರಿ ಯುವಜನರ ಮೇಲಿದೆ ಎಂದು ಜೋಶಿ ಹೇಳಿದರು. ಶಿಕ್ಷಣವು ಜ್ಞಾನಾರ್ಜನೆಯ ಜತೆಗೆ ತಂತ್ರಜ್ಞಾನ, ಕೃಷಿ, ಕೌಶಲ್ಯ, ಉದ್ಯಮ, ಉದ್ಯೋಗ ಹಾಗೂ ದೇಶದ ಸಂಸ್ಕೃತಿ ಮತ್ತು ಪರಂಪರೆಯೊಂದಿಗೆ ಯುವಕರ ಭವಿಷ್ಯ ರೂಪಿಸುವ ಸಾಧನವಾಗಬೇಕು ಎಂದು ಅವರು ಅಭಿಪ್ರಾಯಪಟ್ಟರು.

www.VIKRAMAVAHINI.com
|| ಕನ್ನಡ ದಿನಪತ್ರಿಕೆ ||
PRGI NO: KARKAN/2018/78481
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ

### ಸವಿ ವಾಹಿನಿ

ತಟ್ಟೆಯಲ್ಲಿನ ಅನ್ನವನ್ನು ತಿನ್ನುವಾಗ ಯಾರಿಂದಲೂ ಕಸಿದ್ದಿಲ್ಲಾ ಎಂಬ ಖಾತರಿ ಇರಬೇಕು . ದಿಂಬಿಗೆ ತಲೆ ಒರಗಿ ಮಲಗುವಾಗ ಯಾರಿಗೂ ಅನ್ಯಾಯ ಮಾಡಿಲ್ಲಾ ಎಂಬ ನೆಮ್ಮದಿ ಇರಬೇಕು....!

### ದಿನ ಪಂಚಾಂಗ

ಆಗಸ್ಟ್, 9-2026 ಗ್ರೀಷ್ಮ ಋತು, ಆಷಾಢ ಮಾಸ, ಬಹುಳ ಪಕ್ಷ. ಏಕಾದಶಿ ತಿಥಿ ಬೆ-8:52
ಮೃಗಶಿರ ನಕ್ಷತ್ರ ಮ-1:43
ರಾಹುಕಾಲ ಸಾ-5:08-6:43
ಸರ್ವತ್ರ ಏಕಾದಶಿ, ಕಾಮಿಕಾ ಏಕಾದಶಿ, ಕ್ವಿಟ್ ಇಂಡಿಯಾ ಡೇ/ನಾಗಾಸಾಕಿ ದಿನ/ ಅಂತರರಾಷ್ಟ್ರೀಯ ಸ್ವದೇಶೀಯರ ದಿನ, ನಾಗಾಸಾಕಿ ದಿನ , ಮೇಲುಕೋಟೆ ತಿರುವಾಡಿಪ್ಪುರಂ, ಬೊಂಬಾಯಿ ಗಣೇಶಪುರಿ ಸದ್ಗುರು ನಿತ್ಯಾನಂದ ಪುಣ್ಯದಿನ, ವಿದ್ಯಾನಿಧಿತೀರ್ಥ ಆರಾಧನೆ, ಆಳಂದಿ ನಿರ್ಮಳ ಯಾತ್ರಾ


### ಆರೋಗ್ಯ

## ಯಾವ ಬೆರ್ರಿ ಹಣ್ಣು ಯಾವ ಆರೋಗ್ಯಕ್ಕೆ?

ಆರೋಗ್ಯಕರ ಜೀವನಶೈಲಿಯ ಬಗ್ಗೆ ಜನರಲ್ಲಿ ಜಾಗೃತಿ ಹೆಚ್ಚುತ್ತಿರುವ ಬೆನ್ನಲ್ಲೇ, ಪೋಷಕಾಂಶಗಳಿಂದ ಸಮೃದ್ಧವಾಗಿರುವ ಬೆರ್ರಿ ಹಣ್ಣುಗಳಿಗೂ ಬೇಡಿಕೆ ಹೆಚ್ಚಾಗಿದೆ. ಬ್ಲೂಬೆರಿ, ಸ್ಟ್ರಾಬೆರಿ, ರಾಸ್ಪ್‌ಬೆರಿ, ಬ್ಲ್ಯಾಕ್‌ಬೆರಿ ಹಾಗೂ ಕ್ರ್ಯಾನ್‌ಬೆರಿ ಹಣ್ಣುಗಳಲ್ಲಿ ಫೈಬರ್, ವಿಟಮಿನ್‌ಗಳು ಮತ್ತು ಆಂಟಿಆಕ್ಸಿಡೆಂಟ್‌ಗಳು ಸಮೃದ್ಧವಾಗಿದ್ದು, ಸಮತೋಲನ ಆಹಾರದ ಭಾಗವಾಗಿ ಸೇವಿಸಿದರೆ ಒಟ್ಟಾರೆ ಆರೋಗ್ಯಕ್ಕೆ ನೆರವಾಗಬಹುದು.

ಯಾವುದೇ ಒಂದು ಹಣ್ಣು ಅಥವಾ ಆಹಾರವೇ ಎಲ್ಲ ಆರೋಗ್ಯ ಸಮಸ್ಯೆಗಳಿಗೆ ಪರಿಹಾರವಲ್ಲ. ಆದರೆ ನಿಯಮಿತ ವ್ಯಾಯಾಮ, ಉತ್ತಮ ನಿದ್ರೆ ಹಾಗೂ ಪೌಷ್ಟಿಕಾಂಶಯುಕ್ತ ಆಹಾರದೊಂದಿಗೆ ಬೆರ್ರಿ ಹಣ್ಣುಗಳನ್ನು ಮಿತವಾಗಿ ಸೇವಿಸುವುದು ಆರೋಗ್ಯಕರ ಆಯ್ಕೆಯಾಗಬಹುದು.

**ಬ್ಲೂಬೆರಿ: ಮೆದುಳು ಮತ್ತು ಹೃದಯಕ್ಕೆ:** ಬ್ಲೂಬೆರಿಯಲ್ಲಿ ಆಂಥೋಸಯಾನಿನ್ ಸೇರಿದಂತೆ ವಿವಿಧ ಆಂಟಿಆಕ್ಸಿಡೆಂಟ್‌ಗಳು ಕಂಡುಬರುತ್ತವೆ. ಇವು ದೇಹದ ಕೋಶಗಳನ್ನು ಆಕ್ಸಿಡೇಟಿವ್ ಒತ್ತಡದಿಂದ ರಕ್ಷಿಸಲು ನೆರವಾಗುತ್ತವೆ. ನಿಯಮಿತವಾಗಿ ಸೇವಿಸುವುದರಿಂದ ಹೃದಯದ ಆರೋಗ್ಯಕ್ಕೆ ಬೆಂಬಲ ದೊರೆಯಬಹುದು. ಜ್ಞಾಪಕಶಕ್ತಿ ಹಾಗೂ ಮೆದುಳಿನ ಕಾರ್ಯಕ್ಷಮತೆಯನ್ನೂ ಬೆಂಬಲಿಸುವ ಸಾಧ್ಯತೆಯಿದೆ.



**ಸ್ಟ್ರಾಬೆರಿ:** ವಿಟಮಿನ್ ಸಿಯ ಉತ್ತಮ ಮೂಲ: ರುಚಿಕರವಾಗಿರುವ ಸ್ಟ್ರಾಬೆರಿಯಲ್ಲಿ ವಿಟಮಿನ್ ಸಿ, ಫೋಲೇಟ್ ಮತ್ತು ಫೈಬರ್ ಉತ್ತಮ ಪ್ರಮಾಣದಲ್ಲಿವೆ. ವಿಟಮಿನ್ ಸಿ ರೋಗನಿರೋಧಕ ವ್ಯವಸ್ಥೆಯ ಸಾಮಾನ್ಯ ಕಾರ್ಯಕ್ಕೆ ಅಗತ್ಯವಾಗಿದ್ದು, ಚರ್ಮದ ಆರೋಗ್ಯಕ್ಕೂ ನೆರವಾಗುತ್ತದೆ. ಫೈಬರ್ ಜೀರ್ಣಕ್ರಿಯೆ ಮತ್ತು ಹೃದಯದ ಆರೋಗ್ಯಕ್ಕೆ ಸಹಕಾರಿಯಾಗಬಹುದು.

**ರಾಸ್ಪ್‌ಬೆರಿ:** ಜೀರ್ಣಕ್ರಿಯೆಗೆ ಸಹಕಾರಿ: ರಾಸ್ಪ್‌ಬೆರಿಯಲ್ಲಿ ಫೈಬರ್ ಸಮೃದ್ಧವಾಗಿರುವುದರಿಂದ ಜೀರ್ಣಕ್ರಿಯೆ ಸುಗಮವಾಗಲು ನೆರವಾಗುತ್ತದೆ. ಫೈಬರ್ ಹೆಚ್ಚು ಹೊತ್ತು ಹೊಟ್ಟೆ ತುಂಬಿದ ಅನುಭವ ನೀಡುವುದರಿಂದ ತೂಕ ನಿಯಂತ್ರಣಕ್ಕೆ ಸಹಾಯಕವಾಗಬಹುದು. ಕರುಳಿನಲ್ಲಿರುವ ಉತ್ತಮ ಬ್ಯಾಕ್ಟೀರಿಯಾಗಳ ಬೆಳವಣಿಗೆಗೂ ಫೈಬರ್ ನೆರವಾಗುತ್ತದೆ.

**ಬ್ಲ್ಯಾಕ್‌ಬೆರಿ:** ಮೂಳೆ ಮತ್ತು ಕರುಳಿನ ಆರೋಗ್ಯಕ್ಕೆ: ಬ್ಲ್ಯಾಕ್‌ಬೆರಿಯಲ್ಲಿ ವಿಟಮಿನ್ ಸಿ, ವಿಟಮಿನ್ ಕೆ ಮತ್ತು ಫೈಬರ್ ಸೇರಿದಂತೆ ಹಲವು ಪೋಷಕಾಂಶಗಳಿವೆ. ವಿಟಮಿನ್ ಕೆ ಮೂಳೆಗಳ ಸಾಮಾನ್ಯ ಆರೋಗ್ಯಕ್ಕೆ ಅಗತ್ಯವಾಗಿದ್ದು, ಫೈಬರ್ ಜೀರ್ಣಕ್ರಿಯೆ ಉತ್ತಮವಾಗಲು ನೆರವಾಗುತ್ತದೆ. ಇದರಲ್ಲಿರುವ ಆಂಟಿಆಕ್ಸಿಡೆಂಟ್‌ಗಳು ಕೋಶಗಳನ್ನು ಹಾನಿಕಾರಕ ಆಕ್ಸಿಡೇಟಿವ್ ಒತ್ತಡದಿಂದ ರಕ್ಷಿಸಲು ಸಹಾಯ ಮಾಡಬಹುದು.

**ಕ್ರ್ಯಾನ್‌ಬೆರಿ:** ಮೂತ್ರನಾಳದ ಆರೋಗ್ಯ: ಕ್ರ್ಯಾನ್‌ಬೆರಿ ಮೂತ್ರನಾಳದ ಆರೋಗ್ಯದೊಂದಿಗೆ ಹೆಚ್ಚು ಸಂಬಂಧ ಹೊಂದಿರುವ ಹಣ್ಣಾಗಿದೆ. ಕೆಲವು ಅಧ್ಯಯನಗಳ ಪ್ರಕಾರ, ಕ್ರ್ಯಾನ್‌ಬೆರಿಯಲ್ಲಿರುವ ಕೆಲವು ಸಸ್ಯ ಸಂಯುಕ್ತಗಳು ಮೂತ್ರನಾಳದಲ್ಲಿ ನಿರ್ದಿಷ್ಟ ಬ್ಯಾಕ್ಟೀರಿಯಾಗಳು ಅಂಟಿಕೊಳ್ಳುವುದನ್ನು ತಡೆಯಲು ನೆರವಾಗಬಹುದು. ಆದರೆ ಇದು ಮೂತ್ರನಾಳದ ಸೋಂಕಿಗೆ ಔಷಧಿಯ ಪರ್ಯಾಯವಲ್ಲ ಎಂಬುದನ್ನು ಗಮನಿಸಬೇಕು.

**ಹೇಗೆ ಸೇವಿಸಬೇಕು?:** ತಾಜಾ ಬೆರ್ರಿ ಹಣ್ಣುಗಳನ್ನು ಚೆನ್ನಾಗಿ ತೊಳೆದು ನೇರವಾಗಿ ಸೇವಿಸಬಹುದು. ಓಟ್ಸ್, ಸಲಾಡ್ ಅಥವಾ ಬ್ರೇಕ್‌ಫಾಸ್ಟ್ ಬೌಲ್‌ಗೆ ಸೇರಿಸಬಹುದು. ಸಕ್ಕರೆ ಸೇರಿಸದ ಫ್ರೋಜನ್ ಬೆರ್ರಿಗಳನ್ನೂ ಬಳಸಬಹುದು. ಜ್ಯಾಂ, ಸಿರಪ್ ಮತ್ತು ಹೆಚ್ಚು ಸಕ್ಕರೆ ಹೊಂದಿರುವ ಸಂಸ್ಕರಿತ ಉತ್ಪನ್ನಗಳಿಗಿಂತ ನೈಸರ್ಗಿಕ ಹಣ್ಣುಗಳಿಗೆ ಆದ್ಯತೆ ನೀಡುವುದು ಉತ್ತಮ.

# “ಅಯೋಧ್ಯೆ: ಇದು ಶ್ರೀರಾಮನ ಜನ್ಮಭೂಮಿ”

ಅಯೋಧ್ಯೆಯು ಭಾರತದ ಅತ್ಯಂತ ಪವಿತ್ರ ನಗರಗಳಲ್ಲಿ ಒಂದಾಗಿದೆ. ಇದು ಅಯೋಧ್ಯ ನಗರವಾಗಿದ್ದು, ಶ್ರೀಮನ್ನಾರಾಯಣನ ಏಳನೇ ಅವತಾರರಾದ ಐಒಡಿಜ ಖಚಿಟಚಿ ಅವರ ಜನ್ಮಸ್ಥಳವೆಂದು ಸಾವಿರಾರು ವರ್ಷಗಳಿಂದ ಹಿಂದೂ ಸಂಪ್ರದಾಯದಲ್ಲಿ ಪೂಜಿಸಲ್ಪಡುತ್ತಿದೆ.

ಅಯೋಧ್ಯೆಯು ಕೇವಲ ಒಂದು ಐತಿಹಾಸಿಕ ನಗರವಲ್ಲ; ಅದು ವೈದಿಕ ಪರಂಪರೆ, ರಾಮಭಕ್ತಿ, ಧರ್ಮ, ಪಿತೃಸ್ಮರಣೆ ಮತ್ತು ಮೋಕ್ಷಸಾಧನೆಯ ಮಹಾಕ್ಷೇತ್ರವಾಗಿದೆ. ಶ್ರೀರಾಮ ದರ್ಶನ, ಸರಯೂ ಸ್ನಾನ, ಪಿತೃಕಾರ್ಯ, ರಾಮನಾಮ ಜಪ ಮತ್ತು ಧಾರ್ಮಿಕ ಕ್ಷೇತ್ರಗಳ ಸಂದರ್ಶನ-ಇವೆಲ್ಲವೂ ಭಕ್ತರ ಆಧ್ಯಾತ್ಮಿಕ ಜೀವನವನ್ನು ಸಮೃದ್ಧಗೊಳಿಸುವ ಸಾಧನೆಗಳೆಂದು ಹಿಂದೂ ಸಂಪ್ರದಾಯದಲ್ಲಿ ಗೌರವಿಸಲ್ಪಟ್ಟಿವೆ.





## ಅಯೋಧ್ಯೆಯಲ್ಲಿ ಶ್ರೀರಾಮ ದರ್ಶನದ ಫಲ

ಶಾಸ್ತ್ರಗಳಲ್ಲಿ ತಿಳಿಸಿದಂತೆ: ಜನ್ಮಜನ್ಮಾಂತರದ ಪಾಪಕ್ಷಯ, ವಿಷ್ಣುಲೋಕ ಪ್ರಾಪ್ತಿಗೆ ಅರ್ಹತೆ, ಕುಟುಂಬ ಕಲ್ಯಾಣ, ಸಂತಾನ, ಆಯುಷ್ಯ, ಐಶ್ವರ್ಯ, ಮನಃಶಾಂತಿ, ಭಕ್ತಿ ವೃದ್ಧಿ, ರಾಮನಾಮದ ಮೇಲೆ ದೃಢ ಭಾವನೆ

## ನೂತನ ರಾಮಮಂದಿರ

ಭೂಮಿಪೂಜೆ: 2020
ಪ್ರಾಣಪ್ರತಿಷ್ಠೆ: 22 ಜನವರಿ 2024
ಪ್ರತಿದಿನ ಲಕ್ಷಾಂತರ ಭಕ್ತರು ದರ್ಶನ ಪಡೆಯುತ್ತಿದ್ದಾರೆ.

**"ಅಯೋಧ್ಯೆ" ಎಂಬ ಪದದ ಅರ್ಥ**

ಅಯೋಧ್ಯಾ = ಅ + ಯುದ್ಧ
ಅಂದರೆ ಯಾರಿಂದಲೂ ಜಯಿಸಲಾಗದ, ಅಜೇಯ ನಗರ ಎಂಬ ಅರ್ಥ.

ಈ ನಗರವನ್ನು ಸ್ವತಃ ಮನು ಮಹಾರಾಜರು ಸ್ಥಾಪಿಸಿದರು ಎಂದು ಪುರಾಣಗಳು ಹೇಳುತ್ತವೆ. ನಂತರ ಇಕ್ಷ್ವಾಕು ವಂಶದ ರಾಜಧಾನಿಯಾಯಿತು.

**ವೇದಗಳಲ್ಲಿ ಅಯೋಧ್ಯೆಯ ಮಹತ್ವ**

ಅಥರ್ವವೇದ (10.2.31)
"ಅಷ್ಟಚಕ್ರಾ ನವದ್ವಾರಾ ದೇವಾನಾಂ ಪುರಯೋಧ್ಯಾ" ಅರ್ಥ:
"ಎಂಟು ಚಕ್ರಗಳು, ಒಂಬತ್ತು ದ್ವಾರಗಳನ್ನು ಹೊಂದಿದ ದೇವರ ಪವಿತ್ರ ನಗರವೇ ಅಯೋಧ್ಯೆ."

ಇದನ್ನು ಆಧ್ಯಾತ್ಮಿಕವಾಗಿ ಮಾನವ ದೇಹಕ್ಕೂ ಹಾಗೂ ಪರಮಪವಿತ್ರ ಕ್ಷೇತ್ರಕ್ಕೂ ಹೋಲಿಸಲಾಗಿದೆ.

ವಾಲ್ಮೀಕಿ ರಾಮಾಯಣದ ಬಾಲಕಾಂಡದಲ್ಲಿ ಅಯೋಧ್ಯೆಯ ಅದ್ಭುತ ವರ್ಣನೆ ಇದೆ.

**ಸುಮಾರು 12 ಯೋಜನ ಉದ್ದ**

ಯೋಜನ ಅಗಲ
ವಿಶಾಲ ರಾಜಮಾರ್ಗಗಳು
ಸುಂದರ ಅರಮನೆಗಳು
ವೇದಪಾರಂಗತ ಬ್ರಾಹ್ಮಣರು
ಧರ್ಮನಿಷ್ಠ ಪ್ರಜೆಗಳು
ಸಮೃದ್ಧ ರಾಜ್ಯ

**ಪುರಾಣಗಳಲ್ಲಿ ಅಯೋಧ್ಯೆ**

ಅಯೋಧ್ಯೆಯ ಮಹಿಮೆಯನ್ನು ಅನೇಕ ಪುರಾಣಗಳು ವರ್ಣಿಸುತ್ತವೆ.
ಸ್ಕಂದ ಪುರಾಣ
ಪದ್ಮ ಪುರಾಣ
ವಿಷ್ಣು ಪುರಾಣ
ಬ್ರಹ್ಮಾಂಡ ಪುರಾಣ

ಈ ಗ್ರಂಥಗಳಲ್ಲಿ ಅಯೋಧ್ಯಾ ದರ್ಶನ, ಸರಯೂ ಸ್ನಾನ, ರಾಮನಾಮ ಜಪ, ಪಿತೃಕಾರ್ಯ ಮತ್ತು ಮೋಕ್ಷಫಲಗಳ ಮಹಿಮೆ ವಿವರಿಸಲಾಗಿದೆ.

### ಸರಯೂ ನದಿಯ ಮಹತ್ವ

ಸರಯೂ ನದಿಯು ಅತ್ಯಂತ ಪವಿತ್ರ ನದಿಗಳಲ್ಲಿ ಒಂದು. ಇಲ್ಲಿ, ಸ್ನಾನ, ಸಂಧ್ಯಾವಂದನೆ, ಗಾಯತ್ರಿ ಜಪ, ತರ್ಪಣ, ಪಿತೃಕಾಯ,ಮಾಡುವುದು ಮಹಾಪುಣ್ಯಕರವೆಂದು ಪರಿಗಣಿಸಲಾಗಿದೆ.

## ಅಯೋಧ್ಯೆಯಲ್ಲಿ ಪಿತೃಕಾರ್ಯದ ಮಹತ್ವ

ಅಯೋಧ್ಯೆ ಪಿತೃಕಾರ್ಯಕ್ಕೆ ಅತ್ಯಂತ ಶ್ರೇಷ್ಠ ಕ್ಷೇತ್ರಗಳಲ್ಲಿ ಒಂದೆಂದು ಪರಿಗಣಿಸಲಾಗಿದೆ. ಇಲ್ಲಿ ಮಾಡುವ ವಿಧಿಗಳು: ತಿಲತರ್ಪಣ, ಪಿತೃತರ್ಪಣ, ಪಿಂಡಪ್ರದಾನ, ಬ್ರಾಹ್ಮಣ ಭೋಜನ, ದಾನ, ಗೋದಾನ (ಸಾಧ್ಯವಾದಲ್ಲಿ), ಅನ್ನದಾನ, ಫಲ, ಪಿತೃದೋಷ ಶಮನ, ಪಿತೃಪ್ರಸನ್ನತೆ, ವಂಶಾಭಿವೃದ್ಧಿ, ಸಂತಾನ ಸುಖ, ಕುಟುಂಬದ ಶಾಂತಿ, ಪಿತೃಗಳಿಗೆ ಸದ್ಗತಿ

## ಶ್ರೀರಾಮ ಜನ್ಮಭೂಮಿ ದೇವಸ್ಥಾನ

ನೂತನ ರಾಮಮಂದಿರವು ನಾಗರ ಶೈಲಿಯ ಅದ್ಭುತ ಕಲ್ಲಿನ ದೇವಾಲಯವಾಗಿದೆ.

**ಮುಖ್ಯ ವೈಶಿಷ್ಟ್ಯಗಳು:** ಗುಲಾಬಿ ಬಣ್ಣದ ಮರಳುಗಲ್ಲಿನಿಂದ ನಿರ್ಮಾಣ, ಬಹುಮಹಡಿ ವಿನ್ಯಾಸ, ನೂರಾರು ಸುಂದರ ಶಿಲ್ಪಿತ ಸ್ತಂಭಗಳು, ರಾಮಾಯಣದ ದೃಶ್ಯಗಳ ಶಿಲ್ಪಗಳು, ವಿಶಾಲ ಪ್ರದಕ್ಷಿಣಾ ಮಾರ್ಗ, ಯಜ್ಞಮಂಟಪಗಳು, ಸಭಾಮಂಟಪಗಳು, ಸುಂದರ ಉದ್ಯಾನಗಳು, ಗರ್ಭಗುಡಿ, ಗರ್ಭಗುಡಿಯಲ್ಲಿ ಬಾಲರೂಪದ ಶ್ರೀ ರಾಮಲಲ್ಲಾ ವಿರಾಜಮಾನರಾಗಿದ್ದಾರೆ. ದರ್ಶನ ಸಮಯದಲ್ಲಿ ಭಕ್ತರಿಗೆ ಅತ್ಯಂತ ಆಧ್ಯಾತ್ಮಿಕ ಅನುಭವವಾಗುತ್ತದೆ.

**ಸಂಪೂರ್ಣ ವೈದಿಕ, ಪೌರಾಣಿಕ, ಐತಿಹಾಸಿಕ ಮತ್ತು ಧಾರ್ಮಿಕ ಮಾಹಿತಿ**

### ದರ್ಶನಕ್ಕೆ ಬೇಕಾಗುವ ಸಮಯ

ಸಾಮಾನ್ಯವಾಗಿ: ಕೇವಲ ದರ್ಶನ-30 ರಿಂದ 60 ನಿಮಿಷ, ಸಂಪೂರ್ಣ ಆವರಣ ವೀಕ್ಷಣೆ-2 ರಿಂದ 3 ಗಂಟೆ, ಹಬ್ಬದ ದಿನಗಳಲ್ಲಿ ಹೆಚ್ಚು ಸಮಯ ಬೇಕಾಗಬಹುದು.

### ದೇವಾಲಯದೊಳಗೆ ಏನು ನೋಡಬಹುದು?

ರಾಮಲಲ್ಲಾ ದರ್ಶನ, ಗರ್ಭಗುಡಿ, ನೃತ್ಯಮಂಟಪ, ರಂಗಮಂಟಪ, ಸಭಾಮಂಟಪ, ಕೀರ್ತಿಮಂಟಪ, ಪ್ರದಕ್ಷಿಣೆ ಮಾರ್ಗ, ಸುಂದರ ಶಿಲ್ಪಕಲೆ, ರಾಮಾಯಣ ಶಿಲ್ಪಚಿತ್ರಗಳು

### ಅಯೋಧ್ಯೆಯಲ್ಲಿ ಪ್ರಮುಖ ಉತ್ಸವಗಳು

ಶ್ರೀರಾಮನವಮಿ, ದೀಪೋತ್ಸವ (ದೀಪಾವಳಿ ಸಂದರ್ಭದಲ್ಲಿ), ವಿಜಯದಶಮಿ, ಕಾರ್ತಿಕ ಪೂರ್ಣಿಮೆ, ಮಕರ ಸಂಕ್ರಾಂತಿ, ವೈಕುಂಠ ಏಕಾದಶಿ

## ರಾಮಜನ್ಮಭೂಮಿ ವಿವಾದ: ಸಂಕ್ಷಿಪ್ತ ಇತಿಹಾಸ

ಈ ಸ್ಥಳದ ಕುರಿತು ಹಲವು ಶತಮಾನಗಳಿಂದ ಭಿನ್ನಾಭಿಪ್ರಾಯಗಳು ಇದ್ದವು.

**ಮುಖ್ಯ ಹಂತಗಳು:** 16ನೇ ಶತಮಾನದಲ್ಲಿ ಅಲ್ಲಿ ಮಸೀದಿ ನಿರ್ಮಾಣವಾಯಿತು ಎಂದು ಐತಿಹಾಸಿಕ ದಾಖಲೆಗಳಲ್ಲಿ ಉಲ್ಲೇಖಗಳಿವೆ.

ನಂತರ ಹಲವು ದಶಕಗಳು ಮತ್ತು ಶತಮಾನಗಳ ಕಾಲ ಪೂಜಾ ಹಕ್ಕು ಮತ್ತು ಸ್ವಾಮ್ಯ ಕುರಿತು ವಿವಾದಗಳು ಮುಂದುವರಿದವು.

1949ರಲ್ಲಿ ರಾಮಲಲ್ಲಾ ಮೂರ್ತಿಗಳು ಸ್ಥಳದಲ್ಲಿ ಕಾಣಿಸಿಕೊಂಡ ನಂತರ ಆಡಳಿತವು ಪ್ರದೇಶವನ್ನು ನಿಯಂತ್ರಿತ ಸ್ಥಿತಿಗೆ ತಂದಿತು.

1992ರಲ್ಲಿ ಆ ಕಟ್ಟಡ ಧ್ವಂಸಗೊಂಡಿತು; ಈ ಘಟನೆ ದೇಶವ್ಯಾಪಿ ಉದ್ವಿಗ್ನತೆಗೆ ಕಾರಣವಾಯಿತು. ಬಳಿಕ ನಾಗರಿಕ ಹಕ್ಕು, ಭೂಸ್ವಾಮ್ಯ ಮತ್ತು ಧಾರ್ಮಿಕ ಹಕ್ಕುಗಳ ಕುರಿತು ನ್ಯಾಯಾಲಯಗಳಲ್ಲಿ ದೀರ್ಘಕಾಲ ವಿಚಾರಣೆ ನಡೆಯಿತು. 2019ರಲ್ಲಿ ಸರ್ವಾನುಮತ ಸರ್ವೋಚ್ಚ ನ್ಯಾಯಾಲಯದ ತೀರ್ಪಿನಲ್ಲಿ ವಿವಾದಿತ ಭೂಮಿಯನ್ನು ರಾಮಮಂದಿರ ನಿರ್ಮಾಣಕ್ಕೆ ನೀಡುವಂತೆ ಹಾಗೂ ಮಸೀದಿ ನಿರ್ಮಾಣಕ್ಕಾಗಿ ಬೇರೆ ಸೂಕ್ತ ಭೂಮಿಯನ್ನು ನೀಡುವಂತೆ ನಿರ್ದೇಶಿಸಿತು. ಈ ತೀರ್ಪಿನ ನಂತರ ಕಾನೂನುಬದ್ಧವಾಗಿ ದೇವಾಲಯ ನಿರ್ಮಾಣ ಪ್ರಾರಂಭವಾಗಿ, ಇಂದು ಆ ಪ್ರದೇಶದಲ್ಲಿ ರಾಮಮಂದಿರದಲ್ಲಿ ನಿಯಮಿತ ಪೂಜೆ ನಡೆಯುತ್ತಿದೆ.

### ಅಯೋಧ್ಯೆಯ ಐತಿಹಾಸಿಕ ಬೆಳವಣಿಗೆ

ಮನು ಮಹಾರಾಜರಿಂದ ಸ್ಥಾಪನೆಯಾಗಿದೆ ಎಂಬ ಪುರಾಣ ಪರಂಪರೆ. ಇಕ್ಷ್ವಾಕು ವಂಶದ ರಾಜಧಾನಿ. ದಶರಥ ಮಹಾರಾಜರ ರಾಜ್ಯ. ಶ್ರೀರಾಮನ ಜನ್ಮಸ್ಥಳ. ನಂತರ ಅನೇಕ ರಾಜವಂಶಗಳ ಆಳ್ವಿಕೆ. ಮಧ್ಯಯುಗದಲ್ಲಿ ಅನೇಕ ರಾಜಕೀಯ ಬದಲಾವಣೆಗಳು. ಬ್ರಿಟಿಷ್ ಕಾಲದಲ್ಲಿಯೂ ಸ್ಥಳದ ಕುರಿತು ಆಡಳಿತಾತ್ಮಕ ದಾಖಲೆಗಳು ನಿರ್ಮಾಣವಾದವು. ಮುಂದಿನ ಕಾಲಘಟ್ಟಗಳಲ್ಲಿಯೂ ಅಯೋಧ್ಯೆ ಧಾರ್ಮಿಕ ಹಾಗೂ ಐತಿಹಾಸಿಕ ಮಹತ್ವವನ್ನು ಉಳಿಸಿಕೊಂಡು ಪ್ರಮುಖ ಯಾತ್ರಾಕ್ಷೇತ್ರವಾಗಿ ಬೆಳೆದಿತು.

### ಯಾತ್ರಿಕರಿಗೆ ಸಲಹೆಗಳು

ಬೆಳಗ್ಗೆ ಸರಯೂ ಸ್ನಾನದಿಂದ ಯಾತ್ರೆ ಆರಂಭಿಸುವುದು ಉತ್ತಮ. ಸಂಧ್ಯಾವಂದನೆ, ಗಾಯತ್ರಿ ಜಪ, ರಾಮನಾಮ ಜಪ ಮಾಡುವುದು ಶ್ರೇಷ್ಠ. ಸಾಧ್ಯವಾದರೆ ಪಿತೃತರ್ಪಣ ಮತ್ತು ಅನ್ನದಾನ ಮಾಡಬಹುದು. ಸ್ಥಳೀಯ ದೇವಾಲಯಗಳ ನಿಯಮಗಳನ್ನು ಪಾಲಿಸಿ. ಹಬ್ಬದ ದಿನಗಳಲ್ಲಿ ಹೆಚ್ಚಿನ ಜನಸಂದಣಿ ಇರುವುದರಿಂದ ಸಮಯವನ್ನು ಮುಂಚಿತವಾಗಿ ಯೋಜಿಸಿಕೊಳ್ಳಿ. ಅಯೋಧ್ಯೆಗೆ ತೆರಳುವ ಭಕ್ತರು ಪ್ರಮುಖ ದೇವಾಲಯಗಳು ಹಾಗೂ ಧಾರ್ಮಿಕ ಸ್ಥಳಗಳ ದರ್ಶನಕ್ಕೆ ಮುನ್ನ ಅಗತ್ಯ ಮಾಹಿತಿ ಪಡೆದುಕೊಳ್ಳುವುದು ಉತ್ತಮ. ದೇವಾಲಯದ ಭದ್ರತಾ ನಿಯಮಗಳು, ದರ್ಶನದ ಸಮಯ ಮತ್ತು ಸ್ಥಳೀಯ ಆಡಳಿತದ ಸೂಚನೆಗಳನ್ನು ಪಾಲಿಸುವ ಮೂಲಕ ಯಾತ್ರೆಯನ್ನು ಸುಗಮವಾಗಿ ಕೈಗೊಳ್ಳಬಹುದು.

ವೇದ ಬ್ರಹ್ಮ ಶ್ರೀ ಡಾ. ಪಿ. ಎಸ್. ಅಂಜನ್ ಕುಮಾರ್ ಶರ್ಮಾ (ಮಾಲೂರು)
ಪ್ರಧಾನ ಪುರೋಹಿತರು, ಜ್ಯೋತಿಷ್ಯರು, ವಾಸ್ತು ತಜ್ಞರು, ಆಧ್ಯಾತ್ಮಿಕ ಚಿಂತಕರು



# ಮಳೆಗೆ ಕುಸಿದ ಎಕ್ಸ್‌ಪ್ರೆಸ್‌ವೇ; ಫ್ಯಾನ್ ಬಳಕೆ

● ವಿಕ್ರಮ ವಾಹಿನಿ | ಲಕ್ನೋ

ರೂ4,700 ಕೋಟಿ ವೆಚ್ಚದಲ್ಲಿ ನಿರ್ಮಿಸಲಾಗಿರುವ ಲಕ್ನೋ-ಕಾನ್ಪುರ ಎಕ್ಸ್‌ಪ್ರೆಸ್‌ವೇ ಸಾರ್ವಜನಿಕ ಸಂಚಾರಕ್ಕೆ ಮುಕ್ತಗೊಂಡ ಕೆಲವೇ ದಿನಗಳಲ್ಲಿ ಹಾನಿಗೊಳಗಾದ ಘಟನೆ ಚರ್ಚೆಗೆ ಗ್ರಾಸವಾಗಿದೆ. ಭಾರಿ ಮಳೆಯಿಂದ ಎಕ್ಸ್‌ಪ್ರೆಸ್‌ವೇಯ ಸುಮಾರು 200 ಮೀಟರ್ ಭಾಗ ಕುಸಿದಿದ್ದು, ರಸ್ತೆ ದುರಸ್ತಿ ಕಾರ್ಯಕ್ಕೆ ಮುಂದಾಗಿರುವ ಅಧಿಕಾರಿಗಳ ಕ್ರಮದ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ.


ಹಾನಿಗೊಳಗಾದ ರಸ್ತೆಗೆ ದುರಸ್ತಿ ಕಾಮಗಾರಿ ಕೈಗೊಳ್ಳುವ ಮುನ್ನ ನೀರು ಒಣಗಿಸಲು ಸ್ಥಳದಲ್ಲಿ ಸುಮಾರು 10 ಫ್ಯಾನ್‌ಗಳನ್ನು ಬಳಸಿರುವುದು ವಿಡಿಯೋದಲ್ಲಿ ಕಂಡುಬಂದಿದೆ. ರಸ್ತೆ ನಿರ್ಮಾಣದ ಗುಣಮಟ್ಟದ ಬಗ್ಗೆ ಇದರಿಂದಾಗಿ ಸಾರ್ವಜನಿಕರಲ್ಲಿ ಹಲವು ಪ್ರಶ್ನೆಗಳು ಮೂಡಿವೆ.

ಸಾರ್ವಜನಿಕ ಸಂಚಾರಕ್ಕೆ ಮುಕ್ತಗೊಂಡ ಮೂರು ವಾರಗಳೊಳಗೇ ಎಕ್ಸ್‌ಪ್ರೆಸ್‌ವೇಯ ಹಲವು ಕಡೆಗಳಲ್ಲಿ ಬಿರುಕು ಹಾಗೂ ಹಾನಿ ಕಾಣಿಸಿಕೊಂಡಿತ್ತು ಎನ್ನಲಾಗಿದೆ. ಹಾನಿಗೊಳಗಾದ ಭಾಗಗಳನ್ನು ಅಗೆದು ಮರುನಿರ್ಮಿಸುವ ಕಾರ್ಯವನ್ನೂ ಕೈಗೊಳ್ಳಲಾಗಿದೆ.

ಎಕ್ಸ್‌ಪ್ರೆಸ್‌ವೇಯಲ್ಲಿ ಪದೇಪದೇ ಕಳಪೆ ಕಾಮಗಾರಿ ಆರೋಪಗಳು ಕೇಳಿಬಂದ ಹಿನ್ನೆಲೆಯಲ್ಲಿ ಸಂಬಂಧಪಟ್ಟ ಸಂಸ್ಥೆಯ ವಿರುದ್ಧ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಕ್ರಮ ಕೈಗೊಂಡಿದೆ ಎನ್ನಲಾಗಿದ್ದು, ಸಂಸ್ಥೆಯನ್ನು ಕಳಪೆ ಕಾಮಗಾರಿ ನಡೆಸಿದ ಸಂಸ್ಥೆಗಳ ಪಟ್ಟಿಗೆ ಸೇರಿಸುವ ಪ್ರಕ್ರಿಯೆಯೂ ನಡೆಯುತ್ತಿದೆ ಎಂದು ವರದಿಯಾಗಿದೆ.

# ಟ್ರಾಫಿಕ್ ಸಿಗ್ನಲ್: ಜೀವ ರಕ್ಷಿಸುವ ಶಿಸ್ತಿನ ಸಂಕೇತ

● ವಿಕ್ರಮ ವಾಹಿನಿ | ವಿಶೇಷ



**ಅಂತರರಾಷ್ಟ್ರೀಯ ಟ್ರಾಫಿಕ್ ಲೈಟ್ ದಿನದ ಹಿನ್ನೆಲೆಯಲ್ಲಿ ರಸ್ತೆ ಸುರಕ್ಷತೆ ಹಾಗೂ ಸಂಚಾರ ಶಿಸ್ತಿನ ಮಹತ್ವವನ್ನು ಸಾರಲಾಗಿದೆ. 1963ರಲ್ಲಿ ಬೆಂಗಳೂರಿನ ಎನ್.ಆರ್. ಜಂಕ್ಷನ್‌ನಲ್ಲಿ ಆರಂಭವಾದ ಮೊದಲ ಟ್ರಾಫಿಕ್ ಸಿಗ್ನಲ್ ವ್ಯವಸ್ಥೆ ಇಂದು ಸ್ಮಾರ್ಟ್ ಸಿಗ್ನಲ್, ಸಿಸಿಟಿವಿ ಹಾಗೂ ಎಐ ಆಧಾರಿತ ಸಂಚಾರ ನಿರ್ವಹಣೆಯಾಗಿ ವಿಸ್ತರಿಸಿದ್ದು, ನಿಯಮ ಪಾಲನೆಯೇ ಅಪಘಾತ ತಡೆಗೆ ಪ್ರಮುಖ ಮಾರ್ಗವಾಗಿದೆ. ವಾಹನ ಸವಾರರು ಕೆಂಪು, ಹಳದಿ ಹಾಗೂ ಹಸಿರು ದೀಪಗಳ ಸೂಚನೆಗಳನ್ನು ಕಡ್ಡಾಯವಾಗಿ ಪಾಲಿಸಿ, ಅತಿವೇಗ ಹಾಗೂ ಮೊಬೈಲ್ ಬಳಕೆಯಂತಹ ಅಪಾಯಕಾರಿ ಚಟುವಟಿಕೆಗಳಿಂದ ದೂರವಿರಬೇಕು.ಪಾದಚಾರಿಗಳ ಸುರಕ್ಷತೆಗೂ ಆದ್ಯತೆ ನೀಡುವ ಮೂಲಕ ಪ್ರತಿಯೊಬ್ಬರೂ ಜವಾಬ್ದಾರಿಯುತವಾಗಿ ಸಂಚಾರ ನಿಯಮಗಳನ್ನು ಪಾಲಿಸಿದರೆ ಅಪಘಾತಗಳನ್ನು ಗಣನೀಯವಾಗಿ ತಗ್ಗಿಸಬಹುದು.**

ರಸ್ತೆ ಸುರಕ್ಷತೆ, ಸಂಚಾರ ಶಿಸ್ತು ಹಾಗೂ ಅಪಘಾತ ನಿಯಂತ್ರಣದ ಮಹತ್ವವನ್ನು ಸಾರುವ ಉದ್ದೇಶದಿಂದ ಪ್ರತಿವರ್ಷ ಆಗಸ್ಟ್ 5ರಂದು ಅಂತರರಾಷ್ಟ್ರೀಯ ಟ್ರಾಫಿಕ್ ಲೈಟ್ ದಿನವನ್ನು ಆಚರಿಸಲಾಗುತ್ತದೆ. 1914ರ ಆಗಸ್ಟ್ 5ರಂದು ಅಮೆರಿಕದ ಓಹಿಯೊ ರಾಜ್ಯದ ಕ್ಲೀವ್‌ಲ್ಯಾಂಡ್ ನಗರದಲ್ಲಿ ಮೊದಲ ಆಧುನಿಕ ವಿದ್ಯುತ್ ಚಾಲಿತ ಟ್ರಾಫಿಕ್ ಸಿಗ್ನಲ್ ಕಾರ್ಯಾರಂಭ ಮಾಡಿದ ನೆನಪಿಗಾಗಿ ಈ ದಿನವನ್ನು ಆಚರಿಸಲಾಗುತ್ತಿದೆ.

ನಗರೀಕರಣ ಮತ್ತು ವಾಹನಗಳ ಸಂಖ್ಯೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಸಂಚಾರ ನಿಯಂತ್ರಣದಲ್ಲಿ ಟ್ರಾಫಿಕ್ ಸಿಗ್ನಲ್‌ಗಳು ಪ್ರಮುಖ ಪಾತ್ರ ವಹಿಸುತ್ತಿವೆ. ವಾಹನ ಸವಾರರು, ಪಾದಚಾರಿಗಳು ಹಾಗೂ ಇತರ ರಸ್ತೆ ಬಳಕೆದಾರರ ಸುರಕ್ಷತೆ ಖಚಿತಪಡಿಸುವುದರ ಜತೆಗೆ, ಸಂಚಾರ ದಟ್ಟಣೆ ನಿಯಂತ್ರಿಸಲು ಮತ್ತು ಅಪಘಾತಗಳನ್ನು ತಗ್ಗಿಸಲು ಸಿಗ್ನಲ್ ವ್ಯವಸ್ಥೆ ಸಹಕಾರಿಯಾಗಿದೆ.

ಟ್ರಾಫಿಕ್ ಸಿಗ್ನಲ್‌ನ ಕೆಂಪು, ಹಳದಿ ಹಾಗೂ ಹಸಿರು ಬಣ್ಣಗಳು ಸ್ಪಷ್ಟ ಸಂದೇಶ ನೀಡುತ್ತವೆ. ಕೆಂಪು ದೀಪ ನಿಲ್ಲುವಂತೆ, ಹಳದಿ ದೀಪ ಎಚ್ಚರಿಕೆಯಿಂದ ಸಿದ್ಧರಾಗುವಂತೆ ಹಾಗೂ ಹಸಿರು ದೀಪ ಸುರಕ್ಷಿತವಾಗಿ ಮುಂದುವರಿಯುವಂತೆ ಸೂಚಿಸುತ್ತದೆ. ಈ ಸರಳ ನಿಯಮಗಳನ್ನು ಪಾಲಿಸುವುದರಿಂದ ಅನೇಕ ಅಪಘಾತಗಳನ್ನು ತಪ್ಪಿಸಬಹುದು.

ಟ್ರಾಫಿಕ್ ಸಿಗ್ನಲ್ ಉಲ್ಲಂಘನೆ, ಅತಿವೇಗ, ವಾಹನ ಚಲಾಯಿಸುವಾಗ ಮೊಬೈಲ್ ಬಳಕೆ ಹಾಗೂ ಪೀಕ್ ಅವರ್‌ಗಳಲ್ಲಿ ನಿಯಮಬಾಹಿರ ಚಾಲನೆ ರಸ್ತೆ ಅಪಘಾತಗಳಿಗೆ ಪ್ರಮುಖ ಕಾರಣಗಳಾಗಿವೆ. ಹೀಗಾಗಿ ಸಿಗ್ನಲ್‌ಗಳನ್ನು ಪಾಲಿಸುವುದು ಕೇವಲ ಕಾನೂನುಬದ್ಧ ಕರ್ತವ್ಯವಲ್ಲ, ಪ್ರತಿಯೊಬ್ಬರ ಜೀವ ರಕ್ಷಣೆಯ ಜವಾಬ್ದಾರಿಯೂ ಆಗಿದೆ.

ಬೆಂಗಳೂರು ಸಂಚಾರ ಇತಿಹಾಸದಲ್ಲೂ ಆಗಸ್ಟ್ 5ಕ್ಕೆ ವಿಶೇಷ ಮಹತ್ವವಿದೆ. 1963ರ ಆಗಸ್ಟ್ 5ರಂದು ನಗರದ ಮೊದಲ ಟ್ರಾಫಿಕ್ ಸಿಗ್ನಲ್‌ನ್ನು ಟೌನ್‌ಹಾಲ್ ಸಮೀಪದ ಎನ್.ಆರ್. ಜಂಕ್ಷನ್‌ನಲ್ಲಿ (ಇಂದಿನ ಎನ್.ಆರ್. ಸ್ಕ್ವೇರ್) ಅಂದಿನ ಬೆಂಗಳೂರು ನಗರ ಪೊಲೀಸ್ ಆಯುಕ್ತ ಸಿ. ಚಾಂಡಿ ಉದ್ಘಾಟಿಸಿದ್ದರು. ಸಂಚಾರ ವಿಭಾಗದ ಉಪ ಪೊಲೀಸ್ ಆಯುಕ್ತ ಬಿ.ಎನ್. ಗರುಡಾಚಾರ್ ಅವರ ಮಾರ್ಗದರ್ಶನದಲ್ಲಿ ಈ ವ್ಯವಸ್ಥೆ ಜಾರಿಗೊಂಡಿತ್ತು.

ಆರಂಭದಲ್ಲಿ ಸಿಗ್ನಲ್ ಕೈಚಾಲಿತವಾಗಿದ್ದು, ಕರ್ತವ್ಯದಲ್ಲಿದ್ದ ಸಂಚಾರ ಪೊಲೀಸರು ದೀಪಗಳನ್ನು ನಿಯಂತ್ರಿಸುತ್ತಿದ್ದರು. ನಂತರ ವಿದ್ಯುತ್ ಆಧಾರಿತ ಸ್ವಯಂಚಾಲಿತ ವ್ಯವಸ್ಥೆಗೆ ಪರಿವರ್ತನೆಯಾಗಿ, ತಂತ್ರಜ್ಞಾನದ ಬೆಳವಣಿಗೆಯೊಂದಿಗೆ ಸ್ಮಾರ್ಟ್ ಸಿಗ್ನಲ್‌ಗಳು, ಸಿಸಿಟಿವಿ ನಿಗಾ ಹಾಗೂ ಸಮಗ್ರ ಸಂಚಾರ ನಿರ್ವಹಣಾ ವ್ಯವಸ್ಥೆಗಳಾಗಿ ವಿಸ್ತರಿಸಿವೆ.

ಬೆಂಗಳೂರಿನಲ್ಲಿ ಆಧುನಿಕ ತಂತ್ರಜ್ಞಾನ ಆಧಾರಿತ ಸಂಚಾರ ನಿರ್ವಹಣೆಗೆ ಹೆಚ್ಚಿನ ಒತ್ತು ನೀಡಲಾಗುತ್ತಿದೆ. ಎಐ ಆಧಾರಿತ ಸ್ಮಾರ್ಟ್ ಟ್ರಾಫಿಕ್ ಸಿಗ್ನಲ್‌ಗಳು, ಸಮನ್ವಯಿತ ಜಂಕ್ಷನ್‌ಗಳು ಹಾಗೂ ತುರ್ತು ಸೇವೆಗಳ ವಾಹನಗಳಿಗೆ ಆದ್ಯತೆ ನೀಡುವ ವ್ಯವಸ್ಥೆಗಳು ಸಂಚಾರ ಸುಗಮಗೊಳಿಸುವಲ್ಲಿ ನೆರವಾಗುತ್ತಿವೆ.

ಸಿಗ್ನಲ್‌ಗಳಲ್ಲಿ ಅಳವಡಿಸಿರುವ ಕ್ಯಾಮೆರಾಗಳು ಹಾಗೂ ಸ್ವಯಂಚಾಲಿತ ವ್ಯವಸ್ಥೆಗಳು ನಿಯಮ ಉಲ್ಲಂಘನೆಗಳನ್ನು ಪತ್ತೆಹಚ್ಚಲು ಮತ್ತು ಸಂಚಾರ ನಿಯಂತ್ರಣವನ್ನು ಸುಧಾರಿಸಲು ಸಹಕಾರಿಯಾಗುತ್ತಿವೆ.

ರಸ್ತೆ ಸುರಕ್ಷತೆ ಕೇವಲ ಸಂಚಾರ ಪೊಲೀಸರ ಜವಾಬ್ದಾರಿಯಲ್ಲ. ಪ್ರತಿಯೊಬ್ಬ ವಾಹನ ಸವಾರ, ಪಾದಚಾರಿ ಹಾಗೂ ಸಾರ್ವಜನಿಕರು ಸಂಚಾರ ನಿಯಮಗಳನ್ನು ಗೌರವಿಸಿ, ಇತರ ರಸ್ತೆ ಬಳಕೆದಾರರ ಸುರಕ್ಷತೆಯನ್ನೂ ಗಮನದಲ್ಲಿಟ್ಟುಕೊಂಡು ನಡೆದುಕೊಳ್ಳಬೇಕು. ಸಣ್ಣ ಪ್ರಮಾಣದ ಎಚ್ಚರಿಕೆಯೇ ಅಮೂಲ್ಯ ಜೀವಗಳನ್ನು ಉಳಿಸಬಲ್ಲದು.

1963ರಲ್ಲಿ ಎನ್.ಆರ್. ಜಂಕ್ಷನ್‌ನಲ್ಲಿ ಆರಂಭವಾದ ಸಿಗ್ನಲ್ ವ್ಯವಸ್ಥೆಯ ಪ್ರಯಾಣ ಇಂದು ನಗರದ ನೂರಾರು ಜಂಕ್ಷನ್‌ಗಳವರೆಗೆ ವಿಸ್ತರಿಸಿದೆ. ಟ್ರಾಫಿಕ್ ಸಿಗ್ನಲ್ ಕೇವಲ ದೀಪವಲ್ಲ; ಅದು ರಸ್ತೆ ಸುರಕ್ಷತೆ ಮತ್ತು ನಾಗರಿಕ ಶಿಸ್ತಿನ ಸಂಕೇತ. ಅಂತರರಾಷ್ಟ್ರೀಯ ಟ್ರಾಫಿಕ್ ಲೈಟ್ ದಿನದ ಸಂದರ್ಭದಲ್ಲಿ ಪ್ರತಿಯೊಬ್ಬರೂ ಸಂಚಾರ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವ ಮೂಲಕ ಸುರಕ್ಷಿತ ರಸ್ತೆ ಸಂಚಾರಕ್ಕೆ ಕೈಜೋಡಿಸುವ ಅಗತ್ಯವಿದೆ.

## ಅಡುಗೆ ಅನಿಲ ಸಂಪರ್ಕಕ್ಕೆ ಗುರುತು ಪರಿಶೀಲನೆ ಕಡ್ಡಾಯ; ಆ.15 ಗಡುವು

● ವಿಕ್ರಮ ವಾಹಿನಿ | ಬೆಂಗಳೂರು

ಗೃಹಬಳಕೆಯ ಅಡುಗೆ ಅನಿಲ ಸಂಪರ್ಕ ಹೊಂದಿರುವ ಗ್ರಾಹಕರು ಆ.15ರೊಳಗೆ ಗುರುತು ಪರಿಶೀಲನೆ ಪ್ರಕ್ರಿಯೆ ಪೂರ್ಣಗೊಳಿಸುವಂತೆ ತೈಲ ಕಂಪನಿಗಳು ಹಾಗೂ ಅನಿಲ ವಿತರಕರು ಸೂಚಿಸಿದ್ದಾರೆ. ಗ್ರಾಹಕರ ಮಾಹಿತಿ ಮತ್ತು ದಾಖಲೆಗಳನ್ನು ನವೀಕರಿಸುವ ಉದ್ದೇಶದಿಂದ ಈ ಪ್ರಕ್ರಿಯೆ ಕೈಗೊಳ್ಳಲಾಗುತ್ತಿದೆ.




ಅಗತ್ಯವಿರುವ ಗ್ರಾಹಕರು ಸಮೀಪದ ಅನಿಲ ವಿತರಣಾ ಕೇಂದ್ರಕ್ಕೆ ಭೇಟಿ ನೀಡಿ ತಮ್ಮ ಗುರುತು ಪರಿಶೀಲನೆ ಸ್ಥಿತಿಯನ್ನು ಖಚಿತಪಡಿಸಿಕೊಳ್ಳಬಹುದು. ಸಂಬಂಧಪಟ್ಟ ಅನಿಲ ವಿತರಣಾ ಸಂಸ್ಥೆಯ ಅಧಿಕೃತ ಮೊಬೈಲ್ ಅನ್ವಯದ ಮೂಲಕವೂ ಮನೆಯಿಂದಲೇ ಪರಿಶೀಲನೆ ಪೂರ್ಣಗೊಳಿಸಬಹುದಾಗಿದೆ.

ಗ್ರಾಹಕರು ತಮ್ಮ ಸಂಪರ್ಕವು ತಮ್ಮ ಹೆಸರಿನಲ್ಲಿದೆಯೇ ಹಾಗೂ ಅಗತ್ಯ ದಾಖಲೆಗಳು ಸರಿಯಾಗಿವೆಯೇ ಎಂಬುದನ್ನು ಪರಿಶೀಲಿಸಿಕೊಳ್ಳಬೇಕು. ಕೊನೆಯ ಕ್ಷಣದಲ್ಲಿ ಉಂಟಾಗುವ ತೊಂದರೆ ತಪ್ಪಿಸಲು ನಿಗದಿತ ಗಡುವಿಗೂ ಮುನ್ನವೇ ಗುರುತು ಪರಿಶೀಲನೆ ಪೂರ್ಣಗೊಳಿಸುವಂತೆ ವಿತರಕರು ಮನವಿ ಮಾಡಿದ್ದಾರೆ.

ಗಡುವಿನೊಳಗೆ ಪರಿಶೀಲನೆ ಪೂರ್ಣಗೊಳಿಸುವ ಮೂಲಕ ಅನಿಲ ಪೂರೈಕೆಯಲ್ಲಿ ಉಂಟಾಗಬಹುದಾದ ಅಡಚಣೆಗಳನ್ನು ತಪ್ಪಿಸಿಕೊಳ್ಳಬಹುದು.

ನಿಗದಿತ ಅವಧಿಯೊಳಗೆ ಗುರುತು ಪರಿಶೀಲನೆ ಪೂರ್ಣಗೊಳಿಸದಿದ್ದರೆ ಅಡುಗೆ ಅನಿಲ ಪೂರೈಕೆಯಲ್ಲಿ ತೊಂದರೆ ಉಂಟಾಗುವ ಸಾಧ್ಯತೆ ಇರುವುದರಿಂದ ಗ್ರಾಹಕರು ಮುನ್ನೆಚ್ಚರಿಕೆ ವಹಿಸಿ ಪ್ರಕ್ರಿಯೆಯನ್ನು ಶೀಘ್ರ ಪೂರ್ಣಗೊಳಿಸುವಂತೆ ಸೂಚಿಸಲಾಗಿದೆ.

# ಬಿಡದಿ - ನೈಸ್ ಒಂದೇ ನಾಣ್ಯದ ಎರಡು ಮುಖಗಳಿದ್ದಂತೆ : ಹೆಚ್.ಡಿ.ಕೆ

● ವಿಕ್ರಮ ವಾಹಿನಿ । ಬೆಂಗಳೂರು

ಬಿಡದಿ ಟೌನ್ ಷಿಪ್ ಮತ್ತು ನೈಸ್ ರಸ್ತೆ ನೆಪದಲ್ಲಿ ರೈತರನ್ನು ಒಕ್ಕಲೆಬ್ಬಿಸುವ ಮತ್ತು ವಂಚಿಸುವ ಯೋಜನೆಗಳೆರಡೂ ಒಂದೇ ನಾಣ್ಯದ ಎರಡು ಮುಖಗಳಿದ್ದಂತೆ ಎಂದು ಕೇಂದ್ರ ಸಚಿವರಾದ ಹೆಚ್.ಡಿ.ಕುಮಾರಸ್ವಾಮಿ ಅವರು ಹರಿಯಾಯ್ದಿದ್ದಾರೆ.

ಜೆಪಿ ಭವನದಲ್ಲಿ ಇಂದು ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಹೆಚ್.ಡಿ.ದೇವೇಗೌಡರು ಮುಖ್ಯಮಂತ್ರಿಯಾಗಿದ್ದ ವೇಳೆ ಬೆಂಗಳೂರು–ಮೈಸೂರು ನಡುವೆ ಹೆದ್ದಾರಿ ನಿರ್ಮಾಣ ಮಾಡುವ ಸಲುವಾಗಿ ಒಪ್ಪಂದ ಆಗಿದೆ. ಆದರೆ ನೈಸ್ ಹೆದ್ದಾರಿ ನೆಪದಲ್ಲಿ ರೈತರಿಗೆ ಅನ್ಯಾಯ ಮಾಡಬೇಕೆಂದು ಹೇಳಿಲ್ಲ. ನೈಸ್ ದೇವೇಗೌಡರ ಕೂಸು ಇರಬಹುದು.

ಆ ಕೂಸಿನ ನೆಪದಲ್ಲಿ ರೈತರನ್ನು ಒಕ್ಕಲೆಬ್ಬಿಸಬಾರದು. ರೈತರ ಜಮೀನುಗಳನ್ನು ಅಭಿವೃದ್ಧಿಗೆ ಬಳಕೆ ಮಾಡಿಕೊಳ್ಳಬೇಕು. ಕೃಷಿಕರಿಗೆ ಸೂಕ್ತ ಪರಿಹಾರ ಕಲ್ಪಿಸಬೇಕು. ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಬಿಡದಿ ಟೌನ್ ಷಿಪ್ ಕೂಡ ಹೆಚ್.ಡಿ.ಕುಮಾರಸ್ವಾಮಿ ಕೂಸು ಎನ್ನುತ್ತಿದ್ದಾರೆ. ಬಿಡದಿ ಟೌನ್ ಷಿಪ್ ಮಾಡಲು, ರೈತರನ್ನು ಮೋಸ ಮಾಡುವಂತೆ ನಾನು ಹೇಳಿಲ್ಲ. ಕಾಂಗ್ರೆಸ್–ಜೆಡಿಎಸ್ ಸರ್ಕಾರದಲ್ಲಿ ನಾನು ಸಿಎಂ ಆಗಿದ್ದಾಗ ಇದನ್ನು ಸದನದಲ್ಲಿ ಪ್ರಸ್ತಾಪಿಸಿದ್ದೆ. ಆದರೆ, ಬೆಂಬಲ ಸಿಗಲಿಲ್ಲ.

ನೈಸ್ ಯೋಜನೆಗೆ 25 ವರ್ಷಗಳಾಗಿವೆ. 111 ಎಕರೆ ಜಮೀನು ಪಡೆದು ಕೇವಲ 5 ಎಕರೆಯಲ್ಲಿ ರಸ್ತೆ




ನಿರ್ಮಾಣವಾಗಿದೆ. ಇದುವರೆಗೆ ರೈತರಿಗೆ ಪರಿಹಾರ ನೀಡಿಲ್ಲ. ರಾಜ್ಯದ ಜನರು ನಿಮಗೆ ಕೊಟ್ಟಿರುವುದು 136 ಸ್ಥಾನಗಳನ್ನು. ಈ ರೀತಿ ದರೋಡೆ ಮಾಡಲು ಕೊಟ್ಟಿಲ್ಲ. ಕೃಷ್ಣ ಬೈರೇಗೌಡರು ಫುಟ್ ಪಾತ್ ನಲ್ಲಿ ಮಾರಾಟ ಮಾಡಿ ಜೀವನ ಮಾಡುವವರ ಬದುಕು ಬರ್ಬಾದ್ ಮಾಡುತ್ತಿದ್ದಾರೆ. ತಮ್ಮದೇ ಸರ್ಕಾರ 20 ಸಾವಿರ ಎಕರೆ ಪ್ರದೇಶದಲ್ಲಿ ಟೌನ್ ಷಿಪ್ ಮಾಡುವ ನೆಪದಲ್ಲಿ ರೈತರಿಗೆ ವಂಚಿಸುತ್ತಿದೆ. ಮೊದಲು ಇದನ್ನು ತಡೆಗಟ್ಟಿ ಎಂದು ಕೃಷ್ಣ ಬೈರೇಗೌಡರಿಗೆ ತಾಕೀತು ಮಾಡಿದರು. ಬೆಂಗಳೂರು–ಮೈಸೂರು ಟೋಲ್ ಅಕ್ರಮ ಸಂಗ್ರಹಣೆ ಮಾಡುತ್ತಿದ್ದು ಬೆಂಗಳೂರಿನ ಜನರು ಇಂದಿನಿಂದಲೇ ಟೋಲ್ ಕಟ್ಟುವುದನ್ನು ನಿಲ್ಲಿಸಬೇಕೆಂದರು.

ಅಕ್ರಮ ಟೋಲ್ ಸಂಗ್ರಹ ಮಾಡುತ್ತಿದ್ದು, ನೈಸಗಿರ್ಕ ಬಂಡೆಗಳ ನಾಶ ಮಾಡಲಾಗಿದೆ. ಜಲಮೂಲಗಳನ್ನು ಇಲ್ಲವಾಗಿಸಿ, ಕೆರೆ ಕಟ್ಟೆಗಳನ್ನು ರಿಯಲ್ ಎಸ್ಟೇಟ್ ಮಾಡಲು ಹವಣಿಸಲಾಗುತ್ತಿದೆ. ಭೂಮಿ ಲೂಟಿಕೋರರಿಗೆ ರೈತರ ಜಮೀನುಗಳು ಪರಭಾರೆ ಆಗುತ್ತಿದ್ದು, ನೈಸ್ ಕಂಪನಿಗೆ ಲಾಭ ಮಾಡಿಕೊಡಲು ಸರ್ಕಾರ ಹೊರಟಿದೆ.

ಅಧಿಕಾರಿಗಳ ಜೊತೆಗೆ ಗುಪ್ತ ವ್ಯವಹಾರ ನಡೆಸುತ್ತಿದ್ದು ನೈಸ್ ಭೂಮಿ ಲೂಟಿಕೋರರನ್ನು ಜೈಲಿಗೆ ಕಳುಹಿಸಬೇಕು. ಸ್ವತಂತ್ರ ತನಿಖೆ ನಡೆಸಿ ಫೋರೇನ್ಸಿಕ್ ಆಡಿಟ್ ಮಾಡಬೇಕು ಎಂದು ಒತ್ತಾಯಿಸಿದ ಅವರು, ಈ ಕುರಿತು 10 ದಿನಗಳ ಕಾಲ ನೋಡಿ ಜೆಡಿಎಸ್ ದೊಡ್ಡ ಮಟ್ಟದ ಹೋರಾಟ ನಡೆಸಲು ಅಣಿಯಾಗುತ್ತದೆ ಎಂದರು.

## ಬಿಡದಿ ಪಾದಯಾತ್ರೆ ಬಗ್ಗೆ ಬಿಜೆಪಿ ನಾಯಕರ ಜತೆ ಹೆಚ್.ಡಿ.ಕೆ ಚರ್ಚೆ

● ವಿಕ್ರಮ ವಾಹಿನಿ । ಬೆಂಗಳೂರು

ಜೆಡಿಎಸ್ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ನೇತೃತ್ವದಲ್ಲಿ ನಡೆಯುತ್ತಿರುವ ಬಿಡದಿ–ಬೆಂಗಳೂರು ಬೃಹತ್ ಪಾದಯಾತ್ರೆಗೆ ಬಿಜೆಪಿ ನೈತಿಕ ಬೆಂಬಲ ನೀಡಿದ್ದು, ಪಕ್ಷದ ಹಿರಿಯ ನಾಯಕರು ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ ಎಂದು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ತಿಳಿಸಿದರು.


ಬೆಂಗಳೂರಿನಲ್ಲಿ ಶನಿವಾರ ಜೆಡಿಎಸ್=ಬಿಜೆಪಿ ಹಿರಿಯ ನಾಯಕರ ಸಭೆಯ ಬಳಿಕ ಮಾತನಾಡಿದ ಅವರು, ಬಿಡದಿ ಟೌನ್‌ಶಿಪ್ ಯೋಜನೆ, ನೈಸ್ ಯೋಜನೆಯ ಅಕ್ರಮ ಸೇರಿದಂತೆ ಮುಂಬರುವ ವಿಧಾನಮಂಡಲ ಅಧಿವೇಶನದಲ್ಲಿ ಪ್ರಸ್ತಾಪಿಸಬೇಕಾದ ಹಲವು ವಿಷಯಗಳ ಕುರಿತು ಚರ್ಚಿಸಲಾಗಿದೆ ಎಂದರು.

ಬಿಡದಿ ಬೈರಮಂಗಲದಿಂದ ಬೆಂಗಳೂರಿನ ಫ್ರೀಡಂ ಪಾರ್ಕ್‌ವರೆಗೆ ಪಾದಯಾತ್ರೆ ನಡೆಯಲಿದ್ದು, ತಾವೇ ಚಾಲನೆ ನೀಡುವುದಾಗಿ ಕುಮಾರಸ್ವಾಮಿ ಹೇಳಿದರು. ಪ್ರತಿಪಕ್ಷ ನಾಯಕ ಆರ್. ಅಶೋಕ್, ವಿಧಾನ ಪರಿಷತ್ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಸೇರಿದಂತೆ ಬಿಜೆಪಿ



ಮುಖಂಡರು ಪಾದಯಾತ್ರೆಯ ಉದ್ಘಾಟನೆಯಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದರು. ಬಿಡದಿ ಟೌನ್‌ಶಿಪ್ ಯೋಜನೆಗೆ ರೈತರಿಂದ ವಿರೋಧವಿದ್ದು, ರೈತರ ಭೂಮಿ ಕಸಿದುಕೊಳ್ಳುವ ಪ್ರಯತ್ನ ನಡೆಯುತ್ತಿದೆ ಎಂದು ಆರೋಪಿಸಿದ ಅವರು, ಈ ವಿಚಾರವನ್ನು ಸದನದಲ್ಲೂ ಪ್ರಸ್ತಾಪಿಸಿ ಜೆಡಿಎಸ್–ಬಿಜೆಪಿ ಒಗ್ಗಟ್ಟಾಗಿ ಹೋರಾಟ ನಡೆಸಲಿದೆ ಎಂದರು. ರಾಜ್ಯ ಸರ್ಕಾರದ ಕಾರ್ಯವೈಖರಿ, ಬರ ಪರಿಸ್ಥಿತಿ, ವಾಲ್ಮೀಕಿ ಹಗರಣ, ಕಸ ವಿಲೇವಾರಿ, ಕೆಪಿಎಸ್‌ಸಿ ಹಾಗೂ ಪೊಲೀಸ್ ನೇಮಕಾತಿ ಅಕ್ರಮಗಳು ಮತ್ತು ಗೃಹಲಕ್ಷ್ಮಿ ಯೋಜನೆಗೆ ಸಂಬಂಧಿಸಿದ ಅಕ್ರಮಗಳ ಬಗ್ಗೆಯೂ ಅಧಿವೇಶನದಲ್ಲಿ ಧ್ವನಿ ಎತ್ತಲು ಸಭೆಯಲ್ಲಿ ನಿರ್ಧರಿಸಲಾಗಿದೆ ಎಂದು ತಿಳಿಸಿದರು.

## ಶ್ರೀಸುಜಯನಿಧಿ ತೀರ್ಥ ಶ್ರೀಪಾದರ ಚಾತುರ್ಮಾಸ್ಯ ಸಂಕಲ್ಪ ದೀಕ್ಷೆ



● ವಿಕ್ರಮ ವಾಹಿನಿ । ಬೆಂಗಳೂರು

ಮುಳಬಾಗಿಲು ಶ್ರೀಪಾದರಾಜ ಮಠದ ಶ್ರೀಸುಜಯನಿಧಿ ತೀರ್ಥ ಶ್ರೀಪಾದರ ಚಾತುರ್ಮಾಸ್ಯ ಸಂಕಲ್ಪವನ್ನು ಚಾಮರಾಜಪೇಟೆಯ ಶ್ರೀಪಾದರಾಜ ಮಠದಲ್ಲಿ ಕೈಗೊಂಡರು,

ಅವರು ರಾಘವೇಂದ್ರ ಕಾಲೋನಿಯಲ್ಲಿರುವ ಮಠದಲ್ಲಿ ಮೃತ್ತಿಕಾ ಸ್ಥಾಪನೆಯನ್ನು ಮಾಡಿ ಪೂಜಿಸಿ, ನಂತರ ಶ್ರೀವೇದವ್ಯಾಸರನ್ನು ಪ್ರತಿಷ್ಠಾಪಿಸಿ ಪೂಜಿಸಿ ಚತುರ್ಮಾಸ್ಯ ಸಂಕಲ್ಪವನ್ನು ಮಾಡಿ ಪಂಡಿತರಿಗೆ ಫಲಮಂತ್ರಕ್ಷತೆಯನ್ನು ನೀಡಿದರು.

ಚಾತುರ್ಮಾಸ್ಯ ಸಂಕಲ್ಪದ ಅಂಗವಾಗಿ ಮಠದಲ್ಲಿ ವಿಶೇಷ ಧಾರ್ಮಿಕ ಕಾರ್ಯಕ್ರಮಗಳು ನೆರವೇರಿದವು. ವೇದಘೋಷ, ಮಂತ್ರಪಠಣ ಹಾಗೂ ಪೂಜಾ ಕೈಂಕರ್ಯಗಳೊಂದಿಗೆ ನಡೆದ ಕಾರ್ಯಕ್ರಮದಲ್ಲಿ ಭಕ್ತರು ಭಕ್ತಿಭಾವದಿಂದ ಪಾಲ್ಗೊಂಡರು. ಚಾತುರ್ಮಾಸ್ಯದ ಅವಧಿಯಲ್ಲಿ ಲೋಕಕಲ್ಯಾಣ, ಧರ್ಮಪ್ರಚಾರ ಹಾಗೂ ಭಕ್ತರ ಆಧ್ಯಾತ್ಮಿಕ ಉನ್ನತಿಗಾಗಿ ವಿಶೇಷ ಪ್ರಾರ್ಥನೆ ಸಲ್ಲಿಸಲಾಯಿತು. ತಮ್ಮ ಆರಾಧ್ಯಮೂರ್ತಿ ರಂಗವಿಠ್ಠಲಾತ್ಮಕ ಶ್ರೀ ಗೋಪಿನಾಥ ದೇವರು ಸಹಿತ ಸಂಸ್ಥಾನ ಮುಖ್ಯ ಪ್ರತಿಮೆಗಳಿಗೆ ಪೂಜೆ ಸಲ್ಲಿಸಿದರು. ಈ ಸಂದರ್ಭದಲ್ಲಿ ನೂರಾರು ಭಕ್ತರು ಹಾಜರಿದ್ದು ತೀರ್ಥಪ್ರಸಾದ ಪಡೆದು ಭಗವಂತನ ಕೃಪಾಶಿರ್ವಾದಕ್ಕೆ ಪಾತ್ರರಾದರು.

## ತುಂಗಭದ್ರಾ ಜಲಾಶಯ ಭರ್ತಿಗಾಗಿ ಆಂಜನೇಯ ಸ್ವಾಮಿಗೆ ಪ್ರಾರ್ಥನೆ

● ವಿಕ್ರಮ ವಾಹಿನಿ । ವಿಜಯನಗರ

ನಾಡಿನ ಪ್ರಮುಖ ಜಲಾಶಯಗಳಲ್ಲಿ ಒಂದಾದ ತುಂಗಭದ್ರಾ ಜಲಾಶಯ ಆದಷ್ಟು ಬೇಗ ಮಳೆರಾಯನ ಕೃಪೆಯಿಂದ ಭರ್ತಿ ಆಗಲಿ. ರೈತರ ಮುಂದಿನ ಜೀವನ ಸುಖಮಯವಾಗಿರಲಿ ಎನ್ನುವ ಆಶಯದಿಂದ ಇಂದು ಬಳ್ಳಾರಿ ನಗರ ವಿಧಾನಸಭಾ ಕ್ಷೇತ್ರದ ಮಾಜಿ ಶಾಸಕ ಜಿ.ಸೋಮಶೇಖರ ರೆಡ್ಡಿ ಅವರು ಶ್ರೀ ವೈಕುಂಠ ಆಂಜನೇಯ ಸ್ವಾಮಿಗೆ ಪ್ರಾರ್ಥನೆ ಸಲ್ಲಿಸಿದರು.

ಹೊಸಪೇಟೆಯ ತುಂಗಭದ್ರ ಅಣೆಕಟ್ಟು ಮೇಲ್ಭಾಗದ ಗುಡ್ಡದಲ್ಲಿರುವ ಶ್ರೀ ವೈಕುಂಠ ಆಂಜನೇಯ ಸ್ವಾಮಿ ದೇವಸ್ಥಾನಕ್ಕೆ ತೆರಳಿ, ತುಂಗಭದ್ರ ಜಲಾಶಯವು ಸಂಪೂರ್ಣ ಭರ್ತಿಯಾಗಲಿ, ತುಂಗಭದ್ರಾ ಜಲಾಶಯ ಆಶ್ರಿತ ಜನ–ಜಾನುವಾರುಗಳ ಬದುಕು ಹಸನಾಗಲಿ ಎಂಬ ಸಂಕಲ್ಪದೊಂದಿಗೆ 108 ಬಾರಿ ಹನುಮಾನ್ ಚಾಲೀಸಾ ಪಠಿಸಿ ವಿಶೇಷ ಪ್ರಾರ್ಥನೆ ಸಲ್ಲಿಸಿದರು.

ತುಂಗಭದ್ರ ಜಲಾಶಯದ ನೀರಿನ ಮಟ್ಟ ಉತ್ತಮವಾಗಿದ್ದರೆ ವಿಜಯನಗರ, ಬಳ್ಳಾರಿ, ಕೊಪ್ಪಳ ಸೇರಿದಂತೆ ಜಲಾಶಯದ ಅಚ್ಚುಕಟ್ಟು ಪ್ರದೇಶದ ಸಾವಿರಾರು ರೈತರಿಗೆ ಅನುಕೂಲವಾಗಲಿದೆ. ಕೃಷಿ ಚಟುವಟಿಕೆಗಳಿಗೆ ಅಗತ್ಯ ನೀರು ದೊರೆಯುವುದರ ಜತೆಗೆ ಕುಡಿಯುವ ನೀರಿನ ಸಮಸ್ಯೆಯೂ ಕಡಿಮೆಯಾಗಲಿದೆ ಎಂಬ ಆಶಯ ವ್ಯಕ್ತವಾಗಿದೆ.

ಪ್ರಸ್ತುತ ಮಳೆ ಪ್ರಮಾಣ ಹೆಚ್ಚಾಗಿ ಜಲಾಶಯಕ್ಕೆ ಒಳಹರಿವು ಹೆಚ್ಚಾಗುವ ನಿರೀಕ್ಷೆಯಿದ್ದು, ರೈತರು ಉತ್ತಮ ಮಳೆಯ ನಿರೀಕ್ಷೆಯಲ್ಲಿದ್ದಾರೆ. ಜಲಾಶಯ ಭರ್ತಿಯಾಗಿ ಕಾಲುವೆಗಳಿಗೆ ಸಮರ್ಪಕವಾಗಿ ನೀರು ಹರಿದರೆ ಅಚ್ಚುಕಟ್ಟು ಪ್ರದೇಶದಲ್ಲಿ ಕೃಷಿ ಚಟುವಟಿಕೆಗಳು ಮತ್ತಷ್ಟು ಚುರುಕುಗೊಳ್ಳಲಿವೆ.

ಈ ಸಂದರ್ಭದಲ್ಲಿ ಮಾತನಾಡಿದ ಜಿ. ಸೋಮಶೇಖರ ರೆಡ್ಡಿ, ತುಂಗಭದ್ರ ಜಲಾಶಯದ ನೀರಿನ ಮೇಲೆ ಅವಲಂಬಿತರಾಗಿರುವ ರೈತರು, ಜಾನುವಾರುಗಳು ಹಾಗೂ ಜನರ ಬದುಕು ಸಮೃದ್ಧಿಯಾಗಲಿ. ಉತ್ತಮ ಮಳೆಯಾಗಿ ಜಲಾಶಯ ಭರ್ತಿಯಾಗುವ ಮೂಲಕ ಈ ಭಾಗದಲ್ಲಿ ಹಸಿರು ವಾತಾವರಣ ನಿರ್ಮಾಣವಾಗಲಿ ಎಂದು ಆಶಿಸಿದರು.

ತುಂಗಭದ್ರ ತಾಯಿ ಕೃಪೆಯಿಂದ ಡ್ಯಾಂ ತುಂಬಿ ತುಳುಕಲಿ, ಕಾಲುವೆಗಳಲ್ಲಿ ನೀರು ಹರಿಯಲಿ, ಬಯಲು ಸೀಮೆಯ ಬರಡು ಭೂಮಿ ಹಸಿರಾಗಲಿ, ರೈತರ ಹೊಲಗಳಲ್ಲಿ ಸಮೃದ್ಧಿಯ ಬೆಳೆ ನಳನಳಿಸಲಿ ಎಂಬುವ ಪ್ರಾರ್ಥನೆ ಮಾಡಿದ ಜಿ.ಸೋಮಶೇಖರ ರೆಡ್ಡಿ ಅವರು ಈ ಹಿಂದೆಯೂ ಬಳ್ಳಾರಿ ನಗರಸಭೆ ಅಧ್ಯಕ್ಷರು, ಮಹಾನಗರ ಪಾಲಿಕೆ ಮೇಯರ್ ಮತ್ತು ಶಾಸಕರಾಗಿದ್ದಾಗಲೂ ಇದೇ ರೀತಿ ಪ್ರಾರ್ಥನೆ ಮಾಡಿದ್ದರು.

## ‘ಭಜ ಮನ’ ಕಾರ್ಯಾಗಾರಕ್ಕೆ ಭರ್ಜರಿ ಸ್ಪಂದನೆ

● ವಿಕ್ರಮ ವಾಹಿನಿ । ಬೆಂಗಳೂರು

ದಾಸ ಸಾಹಿತ್ಯ ಹಾಗೂ ಭಕ್ತಿಗೀತೆಗಳನ್ನು ಹೊಸ ತಲೆಮಾರಿಗೆ ಪರಿಚಯಿಸುವ ಉದ್ದೇಶದಿಂದ ‘ಪರಮ್ ಕಲ್ಚರ್’ ಸಂಸ್ಥೆಯು ‘ಹರಿವಂಶ ಗ್ರೂಪ್’ ಮತ್ತು ಜಯನಗರದ ‘ಯುವಕ ಸಂಘ’ದ ಸಹಯೋಗದಲ್ಲಿ ಆಯೋಜಿಸಿದ್ದ ಎರಡು ದಿನಗಳ ‘ಭಜ ಮನ’ ಗಾಯನ ಕಾರ್ಯಾಗಾರಕ್ಕೆ ಸಂಗೀತಾಸಕ್ತರಿಂದ ಉತ್ತಮ ಸ್ಪಂದನೆ ದೊರೆಯಿತು.

ಜಯನಗರದ ಯುವಕ ಸಂಘದಲ್ಲಿ ಆಗಸ್ಟ್ 6 ಮತ್ತು 7ರಂದು ನಡೆದ ಕಾರ್ಯಾಗಾರವನ್ನು ಖ್ಯಾತ ಶಾಸ್ತ್ರೀಯ ಸಂಗೀತ ವಿದ್ವಾಂಸ ಹಾಗೂ ಹರಿದಾಸ ಸಾಹಿತ್ಯದ ಖ್ಯಾತ ಗಾಯಕರಾದ ಡಾ. ವಿದ್ಯಾಭೂಷಣ್ ಮತ್ತು ಅವರ ಪುತ್ರಿ ಮೇಧಾ ವಿದ್ಯಾಭೂಷಣ್ ಮುನ್ನಡೆಸಿದರು. ನೂರಾರು ಸಂಗೀತಾಸಕ್ತರು ಹಾಗೂ ವಿದ್ಯಾರ್ಥಿಗಳು ಕಾರ್ಯಾಗಾರದಲ್ಲಿ ಭಾಗವಹಿಸಿ ದಾಸರ ಪದಗಳು ಮತ್ತು ಭಜನೆಗಳನ್ನು ಕಲಿತರು.

ಕಾರ್ಯಾಗಾರದಲ್ಲಿ ಡಾ. ವಿದ್ಯಾಭೂಷಣ್ ಅವರು ತಮ್ಮ ದೀರ್ಘಕಾಲದ ಸಂಗೀತಾನುಭವ, ಭಕ್ತಿಪೂರ್ವಕ ಗಾಯನದ ಶೈಲಿ ಹಾಗೂ ದಾಸ ಸಾಹಿತ್ಯದ ಗಾಯನ ಪರಂಪರೆಯ ಕುರಿತು ಭಾಗವಹಿಸಿದವರಿಗೆ ಮಾರ್ಗದರ್ಶನ ನೀಡಿದರು.



ಶಿಬಿರಾರ್ಥಿಗಳಿಗೆ ವಿಶೇಷ ಕಲಿಕಾ ಸಾಮಗ್ರಿಗಳನ್ನೂ ವಿತರಿಸಲಾಯಿತು.

ಕಾರ್ಯಾಗಾರದಲ್ಲಿ ಉತ್ತಮ ಪ್ರದರ್ಶನ ನೀಡಿದ ಆಯ್ದ ಶಿಬಿರಾರ್ಥಿಗಳಿಗೆ ಡಾ. ವಿದ್ಯಾಭೂಷಣ್ ಅವರೊಂದಿಗೆ ವೇದಿಕೆ ಹಂಚಿಕೊಳ್ಳುವ ಅಪರೂಪದ ಅವಕಾಶ ದೊರೆಯಿತು. ಆಗಸ್ಟ್ 8ರಂದು ಎನ್‌ಎಂಕೆಆರ್‌ವಿ ಕಲಾಕ್ಷೇತ್ರದ ಮಂಗಳ ಮಂಟಪದಲ್ಲಿ ನಡೆದ ಬೃಹತ್ ಸಂಗೀತ ಕಛೇರಿಯಲ್ಲಿ ಅವರು ಡಾ. ವಿದ್ಯಾಭೂಷಣ್ ಅವರೊಂದಿಗೆ ದಾಸರ ಪದಗಳನ್ನು ಪ್ರಸ್ತುತಪಡಿಸಿದರು.

ಕಳೆದ ನಾಲ್ಕು ದಶಕಗಳಿಂದ ದಾಸರ ಪದಗಳನ್ನು ದೇಶ–ವಿದೇಶಗಳಲ್ಲಿ ಪಸರಿಸುತ್ತಿರುವ ಡಾ. ವಿದ್ಯಾಭೂಷಣ್, ‘ಭಜ ಮನ’ದಂತಹ ಕಾರ್ಯಾಗಾರಗಳ ಮೂಲಕ ಭಕ್ತಿಗಾಯನದ ಪರಂಪರೆಯನ್ನು ಯುವ ಪೀಳಿಗೆಗೆ ತಲುಪಿಸುವ ಕಾರ್ಯದಲ್ಲಿ ತೊಡಗಿದ್ದಾರೆ.

## ಕರ್ನಾಟಕಕ್ಕೆ ಮಳೆ ಕೊಂಚ ವಿರಾಮ

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದ ದಕ್ಷಿಣ ಒಳನಾಡಿನ ಮೈಸೂರಿನ ಒಂದೆರಡು ಕಡೆ ಚಾಮರಾಜನಗರ, ರಾಮನಗರ, ಬೆಂಗಳೂರು ಗ್ರಾಮಾಂತರ ಹಾಗೂ ನಗರ ಚಿಕ್ಕಬಳ್ಳಾಪುರ, ಪಾವಗಢ, ಚಿತ್ರದುರ್ಗ, ದಾವಣಗೆರೆ, ವಿಜಯನಗರ ಜಿಲ್ಲೆಗಳ ಅಲ್ಲಲ್ಲಿ ಒಂದೆರಡು ಸಾಮಾನ್ಯ ಮಳೆಯ ಮುನ್ಸೂಚನೆ ಇದೆ.

ಈಗಿನಂತೆ ರಾಜ್ಯದ ದಕ್ಷಿಣ ಒಳನಾಡು ಜಿಲ್ಲೆಗಳಲ್ಲಿ ಆಗಸ್ಟ್ 12ರ ತನಕ ಅಲ್ಲಲ್ಲಿ ಮಳೆ ಮುಂದುವರಿಯುವ ಲಕ್ಷಣಗಳಿವೆ. ಮಧ್ಯಮ ಸ್ತರದಲ್ಲಿ ಅತಿ ಪ್ರಭಲವಾಗಿರುವ ಜಪಾನ್ ಚಂಡಮಾರುತವು ಅರಬ್ಬಿ ಸಮುದ್ರ ಹಾಗೂ ಬಂಗಾಳಕೊಲ್ಲಿಯ ಮಾರುತಗಳನ್ನು ತನ್ನತ್ತ ಸೆಳೆಯುತ್ತಿರುವುದರಿಂದ ಹಾಗೂ ಪಶ್ಚಿಮ ಬಂಗಾಳ, ಜಾರ್ಖಂಡ್, ಬಿಹಾರ ರಾಜ್ಯಗಳಲ್ಲಿ ಮೇಲ್ಮೈ ಸುಳಿಗಾಳಿ ಉಂಟಾಗಿದ್ದರ ಪರಿಣಾಮದಿಂದ ಮುಂಗಾರು ಚುರುಕಾಗಿದೆ.

**ಕರಾವಳಿ:** ಕಾಸರಗೋಡು, ದಕ್ಷಿಣ ಕನ್ನಡ, ಉಡುಪಿ ಹಾಗೂ ಉತ್ತರ ಕನ್ನಡ ಜಿಲ್ಲೆಗಳ ಘಟ್ಟದ ಕೆಳಗಿನ ಪ್ರದೇಶಗಳಲ್ಲಿ ಬಿಸಿಲು, ಮೋಡ ಹಾಗೂ ಬಿಟ್ಟು ಬಿಟ್ಟು ಸಾಮಾನ್ಯ ಮಳೆಯ ಮುನ್ಸೂಚನೆ ಇದೆ. ಬಿಡುವಿನ ಅವಧಿ ಸ್ವಲ್ಪ ಹೆಚ್ಚಿರಬಹುದು. ಕರಾವಳಿ ಭಾಗಗಳಲ್ಲಿ ಬಿಸಿಲು, ಮೋಡ ಹಾಗೂ ಅಲ್ಲಲ್ಲಿ ಎರಡು, ಮೂರು ಸಾಮಾನ್ಯ ಮಳೆಯ ಸಾಧ್ಯತೆಗಳಿವೆ.

ಈಗಿನಂತೆ ಆಗಸ್ಟ್ 10ರಿಂದ ಮಳೆ ಮತ್ತೂ ಕಡಿಮೆಯಾಗುವ ಲಕ್ಷಣಗಳಿವೆ. ಆದರೆ ಘಟ್ಟದ ಕೆಳಗಿನ ಪ್ರದೇಶಗಳಲ್ಲಿ ದಿನದಲ್ಲಿ ಒಂದೆರಡು ಸಾಮಾನ್ಯ ಮಳೆ ಮುಂದುವರಿಯುವ ಲಕ್ಷಣಗಳಿವೆ.

**ಮಲೆನಾಡು:** ಕೊಡಗು, ಹಾಸನದ ಸಕ್ಲೇಶ್ಪುರ ಸುತ್ತಮುತ್ತ, ಚಿಕ್ಕಮಗಳೂರು ಜಿಲ್ಲೆಗಳ ಕರಾವಳಿ ಜಿಲ್ಲೆಗಳಿಗೆ ಹೊಂದಿಕೊಂಡಿರುವ ಪ್ರದೇಶಗಳಲ್ಲಿ ಅಲ್ಲಲ್ಲಿ ಒಂದೆರಡು ಸಾಮಾನ್ಯ ಮಳೆಯ ಮುನ್ಸೂಚನೆ ಇದೆ. ಉಳಿದ ಭಾಗಗಳಲ್ಲಿ ಬಿಸಿಲು ಹಾಗೂ ಅಲ್ಲಲ್ಲಿ ಮೋಡ ದೊಂದಿಗೆ ಒಂದೆರಡು ತುಂತುರು ಮಳೆಯ ಸಾಧ್ಯತೆಗಳಿವೆ.

ಈಗಿನಂತೆ ಆಗಸ್ಟ್ 10ರಿಂದ ಮಳೆ ಮತ್ತೂ ಕಡಿಮೆಯಾಗುವ ಲಕ್ಷಣಗಳಿವೆ.

**ಉತ್ತರ ಒಳನಾಡು:** ರಾಜ್ಯದ ಉತ್ತರ ಒಳನಾಡಿನ ಹಾವೇರಿ, ಬಳ್ಳಾರಿ ಜಿಲ್ಲೆಗಳ ಅಲ್ಲಲ್ಲಿ ಸಾಮಾನ್ಯ ಮಳೆಯ ಮುನ್ಸೂಚನೆ ಇದೆ. ಉಳಿದ ಜಿಲ್ಲೆಗಳಲ್ಲಿ ಬಿಸಿಲು ಹಾಗೂ ಅಲ್ಲಲ್ಲಿ ಮೋಡದ ವಾತಾವರಣ ಇರಲಿದ್ದು ಒಂದೆರಡು ಕಡೆ ತುಂತುರು ಮಳೆಯ ಸಾಧ್ಯತೆಯೂ ಇದೆ.

ಈಗಿನಂತೆ ರಾಜ್ಯದ ಉತ್ತರ ಒಳನಾಡು ಜಿಲ್ಲೆಗಳಲ್ಲಿ ಆಗಸ್ಟ್ 14ರ ತನಕ ಅಲ್ಲಲ್ಲಿ ಸಾಮಾನ್ಯ ಮಳೆಯ ಸಾಧ್ಯತೆಗಳಿವೆ.

## ಪಿ.ಓ.ಪಿ ಗಣೇಶ ವಿಗ್ರಹಗಳಿಗೆ ನಿಷೇಧ: ಸುಷಮಾ ಗೋಡಬೋಲೆ

● ವಿಕ್ರಮ ವಾಹಿನಿ । ಬೆಂಗಳೂರು

ಜಿಬಿಎ ವ್ಯಾಪ್ತಿಯಲ್ಲಿ ಪ್ಲಾಸ್ಟರ್ ಆಫ್ ಪ್ಯಾರಿಸ್(ಪಿ.ಓ.ಪಿ) ಹಾಗೂ ರಾಸಾಯನಿಕ ಗುಣಗಳುಳ್ಳ ವಸ್ತುಗಳನ್ನು ಬಳಸಿ ತಯಾರಿಸಲಾದ ಗಣೇಶ ವಿಗ್ರಹಗಳ ಉತ್ಪಾದನೆ, ಸಂಗ್ರಹ, ಮಾರಾಟ ಮತ್ತು ವಿಸರ್ಜನೆಯನ್ನು ನಿಷೇಧಿಸಲಾಗಿದೆ ಎಂದು ಎಫ್.ಇ.ಸಿಸಿ ವಿಶೇಷ ಆಯುಕ್ತರಾದ ಸುಷಮಾ ಗೋಡಬೋಲೆ ರವರು ಸುತ್ತೋಲೆ ಹೊರಡಿಸಿದ್ದಾರೆ.

ರಾಜ್ಯಾದ್ಯಂತ ನೀರಿನ ಯಾವುದೇ ಮೂಲಗಳು ಮಾಲಿನ್ಯಗೊಳಗಾಗದಂತೆ ಸಂರಕ್ಷಿಸುವ ಉದ್ದೇಶದಿಂದ ಭಾರ ಲೋಹಮಿಶ್ರಿತ ರಾಸಾಯನಿಕಯುಕ್ತ ಬಣ್ಣದಿಂದ ಅಲಂಕೃತ ಗೊಂಡಂತಹ ಯಾವುದೇ ರೀತಿಯ ಪ್ಲಾಸ್ಟರ್ ಆಫ್ ಪ್ಯಾರಿಸ್ ನಿಂದ ತಯಾರಿಸಿದ ಗಣೇಶ ವಿಗ್ರಹಗಳು ಹಾಗೂ ನೀರಿನ ಮೂಲಗಳಲ್ಲಿ ವಿಸರ್ಜಿಸನೆ ಮಾಡುವುದನ್ನು ರಾಜ್ಯಾದಾದ್ಯಂತ ಸಂಪೂರ್ಣವಾಗಿ ನಿಷೇಧಿಸಿ ಪರಿಸರ ಸಂರಕ್ಷಣಾ ಕಾಯ್ದೆ 1986, ಸೆಕ್ಷನ್ (5) ರಡಿಯಲ್ಲಿ ಕೇಂದ್ರ ಸರ್ಕಾರದಿಂದ ಪ್ರತ್ಯಾಯೋಜಿಸಿರುವ ಅಧಿಕಾರದಡಿ ಸರ್ಕಾರವು 15ನೇ ಸೆಪ್ಟೆಂಬರ್ 2023 ರಲ್ಲಿ ಆದೇಶ ಹೊರಡಿಸಿದೆ. ಇದು ನಗರ ಸ್ಥಳೀಯ ಸಂಸ್ಥೆಗಳಿಗೂ ಅನ್ವಯವಾಗುತ್ತದೆ.

ಮುಂದುವರೆದು, ಮಾನ್ಯ ರಾಜಾಜಿನಗರ ವಿಧಾನಸಭಾ ಕ್ಷೇತ್ರದ ಶಾಸಕರಿಂದಲೂ ಸಹ ಪರಿಸರಕ್ಕೆ ಹಾಗೂ ಮುಖ್ಯವಾಗಿ ಜಲಮೂಲಗಳಿಗೆ ಹಾನಿಯನ್ನು ತಡೆಗಟ್ಟಲು ಪ್ಲಾಸ್ಟರ್ ಆಫ್ ಪ್ಯಾರೀಸ್ ಇಂದ ವಿಗ್ರಹಗಳನ್ನು ತಯಾರಿಸದಂತೆ ಹಾಗೂ ಮಾರಾಟ ಮಾಡದಂತೆ ಕ್ರಮಕೈಗೊಳ್ಳಲು ಕೋರಿಕೆ ಸಲ್ಲಿಸಿ ಪರಿಸರ ಹಾನಿ ಕುರಿತು ಕಳಕಳಿ ವ್ಯಕ್ತಪಡಿಸಿರುತ್ತಾರೆ.

ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಗೆ ಬರುವಂತಹ ಪ್ರದೇಶಗಳಲ್ಲಿ ಪ್ರತಿ ವರ್ಷ ಹಬ್ಬ–ಹರಿದಿನಗಳಂದು ಪೂಜಿಸಲ್ಪಟ್ಟ ವಿಗ್ರಹಗಳನ್ನು ಕೆರೆ, ಬಾವಿ ಹಾಗೂ ಇತರೆ ನೀರಿನ ಮೂಲಗಳಲ್ಲಿ ವ್ಯಾಪಕವಾಗಿ ವಿಸರ್ಜನೆ ಮಾಡಲಾಗುತ್ತಿದೆ. ಈ ವಿಗ್ರಹಗಳಿಗೆ ಭಾರೀ ಲೋಹಗಳನ್ನೊಳಗೊಂಡ ರಾಸಾಯನಿ ಬಣ್ಣಗಳನ್ನು ಅಳವಡಿಸಿ ಮತ್ತು ಕೃತಕ ಅಲಂಕಾರಿಕ ವಸ್ತುಳಿಂದ ಶೃಂಗರಿಸಲಾಗುತ್ತದೆ. ಜಾಗರೂಕತೆ ಹಾಗೂ ಕಾಳಜಿ ವಹಿಸದೆ ವಿಗ್ರಹಗಳ ವಿಸರ್ಜನೆ ಮಾಡಲಾಗುತ್ತದೆ. ಇದರಿಂದ ಜಲ ಹಾಗೂ ಭೂಮಿ ಕಲುಷಿತಗೊಂಡು ಪರಿಸರಕ್ಕೆ ಹಾನಿಯಾಗುತ್ತದೆ.

2026 ನೇ ಸಾಲಿನ ಗಣೇಶ ಚತುರ್ಥಿ ಹಬ್ಬದ ಸಂದರ್ಭದಲ್ಲಿ ಭಾರಲೋಹ ಮಿಶ್ರಿತ ರಾಸಾಯನಕಯುಕ್ತ ಬಣ್ಣದಿಂದ ಅಲಂಕೃತಗೊಂಡಂತಹ ಯಾವುದೇ ರೀತಿಯ ಪ್ಲಾಸ್ಟ್ ಆಫ್ ಪ್ಯಾರಿಸ್, ಇತರೆ ಕೃತಕ/ ಸಹಜವಾಗಿ ಜೈವಿಕವಾಗಿ ವಿಘಟನವಾಗದ ಪದಾರ್ಥಗಳಿಂದ ತಯಾರಿಸಿದ ಗಣೇಶ ವಿಗ್ರಹಗಳು ಹಾಗೂ ಇತರ ಯಾವುದೇ ವಿಗ್ರಹಗಳ ಉತ್ಪಾದನೆ, ಮಾರಾಟ ಮತ್ತು ಯಾವುದೇ ನೀರಿನ ಮೂಲಗಳಲ್ಲಿ ಅವುಗಳನ್ನು ವಿಸರ್ಜಿಸುವುದನ್ನು ನಿಷೇಧಿಸಿದೆ. ಕೇಂದ್ರ ಸರ್ಕಾರದ ಪರಿಸರ ಸಂಗಕ್ಷಣಾ ಕಾಯ್ದೆ 1986ರ ಉಲ್ಲಂಘನೆ ದಂಡನೀಯ ಅಪರಾಧವಾಗಿದೆ.

## ಗೋದಾಮುಗಳ ಮೇಲೂ ಎಫ್‌ಡಿಎ ದಾಳಿ

**ಅವಧಿ ಮುಗಿಯುವ ಹಂತದಲ್ಲಿದ್ದ 70 ಕೆಜಿ ಸಾಸ್, 10 ಲೀಟರ್ ಪಾನೀಯ ಜಪ್ತಿ; 18 ಆಹಾರ ಮಾದರಿ ಪ್ರಯೋಗಾಲಯಕ್ಕೆ ರವಾನೆ. ಅಧಿಕಾರಿಗಳು 5 ಮಾಂಸದ ಮಾದರಿ ಸೇರಿದಂತೆ ಒಟ್ಟು 18 ಆಹಾರ ಮಾದರಿಗಳನ್ನು ಪ್ರಯೋಗಾಲಯ ಪರೀಕ್ಷೆಗೆ ಕಳುಹಿಸಿದ್ದು, ನಿಯಮ ಉಲ್ಲಂಘಿಸಿದವರ ವಿರುದ್ಧ ಕಠಿಣ ಕ್ರಮದ ಎಚ್ಚರಿಕೆ ನೀಡಿದ್ದಾರೆ.**

● ವಿಕ್ರಮ ವಾಹಿನಿ । ಬೆಂಗಳೂರು

ನಗರದ ಪ್ರಮುಖ ಸ್ಟಾರ್ ಹೋಟೆಲ್‌ಗಳ ಅಡುಗೆಮನೆಗಳಲ್ಲಿ ಕೊಳೆತ ಮಾಂಸ, ಹಾಲು ಹಾಗೂ ತರಕಾರಿ ಪತ್ತೆಯಾದ ಬೆನ್ನಲ್ಲೇ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆ (ಎಫ್‌ಡಿಎ) ತನ್ನ ಕಾರ್ಯಾಚರಣೆಯನ್ನು ಮತ್ತಷ್ಟು ತೀವ್ರಗೊಳಿಸಿದೆ. ಹೋಟೆಲ್‌ಗಳು ಹಾಗೂ ಕ್ಯಾಟರರ್‌ಗಳಿಗೆ ಆಹಾರ ಪದಾರ್ಥಗಳನ್ನು ಪೂರೈಸುವ ಗೋದಾಮುಗಳು ಮತ್ತು ವಿತರಣಾ ಕೇಂದ್ರಗಳ ಮೇಲೆ ಶನಿವಾರ ದಿಢೀರ್ ದಾಳಿ ನಡೆಸಿ, ಅವಧಿ ಮುಗಿಯುವ ಹಂತದಲ್ಲಿದ್ದ ಆಹಾರ ಪದಾರ್ಥಗಳನ್ನು ಜಪ್ತಿ ಮಾಡಲಾಗಿದೆ.

ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆ–2006ರ ಅಡಿಯಲ್ಲಿ ಜಿಬಿಎ ವ್ಯಾಪ್ತಿ ಸೇರಿದಂತೆ ಬೆಂಗಳೂರು ನಗರ ಜಿಲ್ಲೆಯಾದ್ಯಂತ 30 ವಿಶೇಷ ತಂಡಗಳು ಏಕಕಾಲದಲ್ಲಿ ತಪಾಸಣೆ ನಡೆಸಿದವು.

ಪ್ರಮುಖ ಆಹಾರ ವಿತರಣಾ ಸಂಸ್ಥೆಗಳಾದ ಕೋಲ್ಡ್‌ಮ್ಯಾನ್ ಲಾಜಿಸ್ಟಿಕ್ಸ್ ಪ್ರೈವೇಟ್ ಲಿಮಿಟೆಡ್ ಹಾಗೂ ರಾಧಾಕೃಷ್ಣ ಫುಡ್‌ಲ್ಯಾಂಡ್ ಲಿಮಿಟೆಡ್ ಕೇಂದ್ರಗಳಲ್ಲೂ ಪರಿಶೀಲನೆ ನಡೆಸಲಾಯಿತು.

ತಪಾಸಣೆ ವೇಳೆ ಅವಧಿ ಮುಗಿಯುವ ಹಂತದಲ್ಲಿದ್ದ ಸುಮಾರು 70 ಕೆಜಿ ಸೋಯಾ ಸಾಸ್ ಹಾಗೂ ಇತರ ಸಾಸ್‌ಗಳನ್ನು ಅಧಿಕಾರಿಗಳು ವಶಪಡಿಸಿಕೊಂಡು ನಾಶಪಡಿಸಿದ್ದಾರೆ. ಜೊತೆಗೆ ಎಕ್ಸ್‌ಪೈರಿ ದಿನಾಂಕ ಸಮೀಪಿಸಿದ್ದ 10 ಲೀಟರ್ ಸ್ಟ್ರಾಬೆರಿ ಫ್ಲೇವರ್ ಸೇರಿದಂತೆ ವಿವಿಧ ಪಾನೀಯಗಳನ್ನು ಜಪ್ತಿ ಮಾಡಲಾಗಿದೆ.

ಆಹಾರದ ಗುಣಮಟ್ಟ ಪರಿಶೀಲನೆಗಾಗಿ 5 ಮಾಂಸದ



ಮಾದರಿ ಹಾಗೂ 13 ಇತರ ಆಹಾರ ಮಾದರಿಗಳನ್ನು ಸಂಗ್ರಹಿಸಿ ಪ್ರಯೋಗಾಲಯ ಪರೀಕ್ಷೆಗೆ ಕಳುಹಿಸಲಾಗಿದೆ. ಈ ಸಂಸ್ಥೆಗಳು ನಗರದ ಹಲವು ಪ್ರತಿಷ್ಠಿತ ಸ್ಟಾರ್ ಹೋಟೆಲ್‌ಗಳಿಗೆ ಆಹಾರ ಪದಾರ್ಥಗಳನ್ನು ಪೂರೈಸುತ್ತವೆ ಎಂದು ಇಲಾಖೆ ತಿಳಿಸಿದೆ.

ಹೋಟೆಲ್‌ಗಳು ಮತ್ತು ಆಹಾರ ವಿತರಣಾ ಕೇಂದ್ರಗಳಲ್ಲಿ ಕೋಲ್ಡ್‌ಚೈನ್ ವ್ಯವಸ್ಥೆ, ಆಹಾರ ಸಂಗ್ರಹಣೆ, ಸ್ವಚ್ಛತೆ ಹಾಗೂ ನೈರ್ಮಲ್ಯ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಲಾಗುತ್ತಿದೆಯೇ ಎಂಬುದನ್ನು ಪರಿಶೀಲಿಸಲಾಗುತ್ತಿದೆ. ಆಹಾರ ಸುರಕ್ಷತಾ ನಿಯಮ ಉಲ್ಲಂಘಿಸುವವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಫ್‌ಡಿಎ ಎಚ್ಚರಿಕೆ ನೀಡಿದೆ.

## ಜಾಬ್‌ಕಾರ್ಡ್ ಮೇಳಕ್ಕೆ ಖಂಡ್ರೆ ಸೂಚನೆ

● ವಿಕ್ರಮ ವಾಹಿನಿ । ಬೆಂಗಳೂರು

ಮನ್ರೇಗಾದ ಬದಲಾದ ರೂಪ ವಿಬಿಜಿ ರಾಮ್ ಜಿಯಡಿ ಅರ್ಹ ಫಲಾನುಭವಿಗಳಿಗ ಉದ್ಯೋಗ ನೀಡಲು ಒಂದು ವಾರದೊಳಗೆ ಜಾಬ್ ಕಾರ್ಡ್ ಮೇಳ ನಡೆಸುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಸೂಚಿಸಿದ್ದಾರೆ. ಇಲಾಖೆಯ ಕಾರ್ಯದರ್ಶಿಯವರಿಗೆ ಲಿಖಿತ ಸೂಚನೆ ನೀಡಿರುವ ಅವರು, ನಿಷ್ಕ್ರಿಯ ಉದ್ಯೋಗದ ಚೀಟಿ ಗಳನ್ನು ರದ್ದು ಮಾಡಲಾಗಿದೆ.

ಹೊಸದಾಗಿ ಉದ್ಯೋಗ ಬಯಸುವ ಅರ್ಹ ಗ್ರಾಮೀಣ ಕುಟುಂಬಗಳ ಫಲಾನುಭವಿಗಳಿಗೆ ಅಂದರೆ ಪರಿಶಿಷ್ಟ ಜಾತಿ, ಪಂಗಡದವರು, ಅಲ್ಪಸಂಖ್ಯಾತರು, ವಿಶೇಷ ಚೇತನರು, ಮಹಿಳಾ ನೇತೃತ್ವದ ಕುಟುಂಬದವರು, ಭೂ ರಹಿತ ಕೂಲಿ ಕಾರ್ಮಿಕರು ಸೇರಿದಂತೆ ಉದ್ಯೋಗ ಕೇಳುವ ಎಲ್ಲ ಅರ್ಹರಿಗೆ ತತ್ ಕ್ಷಣವೇ ಜಾಬ್ ಕಾರ್ಡ್ ನೀಡಲು 5927 ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಒಂದು ವಾರದೊಳಗಾಗಿ ಜಾಬ್ ಕಾರ್ಡ್ ಮೇಳ ನಡೆಸಿ, ಉದ್ಯೋಗ ನೀಡಿ ಎಂದು ನಿರ್ದೇಶನ ನೀಡಿದ್ದಾರೆ.

ವಿ ಬಿಜಿ ರಾಮ್ ಜಿ ಅಡಿ ಕೇಂದ್ರದ ಶೇ.60ರಷ್ಟು ಅನುದಾನ 1700 ಕೋಟಿ ರೂ. ಹಾಗೂ ರಾಜ್ಯದ ಶೇ.40ರಷ್ಟು ಅನುದಾನ 1200 ಕೋಟಿ ರೂ. ಸೇರಿ ಒಟ್ಟು 2900 ಕೋಟಿ ರೂ.ಗಳನ್ನು ಒದಗಿಸಲಾಗಿದ್ದು, ಈ ಪೈಕಿ ಕೂಲಿ ನೀಡಿಕೆಗಾಗಿ ರಾಜ್ಯದ ಎಲ್ಲ ಗ್ರಾಮ ಪಂಚಾಯತಿಗಳಿಗೆ 1000 ಕೋಟಿ ರೂ.ಗಳನ್ನು ಬಿಡುಗಡೆ ಮಾಡಲಾಗಿದೆ ಎಂದೂ ತಿಳಿಸಿದ್ದಾರೆ.



**ವಿಬಿಜಿ ರಾಮ್ ಜಿ ಯೋಜನೆಯಡಿ ಅರ್ಹ ಗ್ರಾಮೀಣ ಕುಟುಂಬಗಳಿಗೆ ಉದ್ಯೋಗ ಒದಗಿಸಲು ರಾಜ್ಯದ 5,927 ಗ್ರಾಮ ಪಂಚಾಯಿತಿಗಳಲ್ಲಿ ಒಂದು ವಾರದೊಳಗೆ ಜಾಬ್ ಕಾರ್ಡ್ ಮೇಳ ನಡೆಸುವಂತೆ ಸಚಿವ ಈಶ್ವರ ಬಿ. ಖಂಡ್ರೆ ಸೂಚಿಸಿದ್ದಾರೆ. ನಿಷ್ಕ್ರಿಯ ಜಾಬ್ ಕಾರ್ಡ್‌ಗಳನ್ನು ರದ್ದುಪಡಿಸಿದರೂ ಬಡ ಕುಟುಂಬಗಳಿಗೆ ಅನ್ಯಾಯವಾಗದಂತೆ ಹೊಸದಾಗಿ ಅರ್ಹರಿಗೆ ತಕ್ಷಣ ಜಾಬ್ ಕಾರ್ಡ್ ನೀಡಿ ಉದ್ಯೋಗ ಕಲ್ಪಿಸುವಂತೆ ನಿರ್ದೇಶಿಸಿದ್ದಾರೆ.**

ಹಣದ ಕೊರತೆ ಇಲ್ಲದಿದ್ದಾಗ್ಯೂ ಕೆಲವು ಗ್ರಾಮ ಪಂಚಾಯತಿಗಳಲ್ಲಿ ವಿಬಿಜಿ ರಾಮ್ ಜಿ ಅನುಷ್ಠಾನ ತೃಪ್ತಿದಾಯಕವಾಗಿಲ್ಲ ಎಂಬುದು ಸರ್ಕಾರದ ಗಮನಕ್ಕೆ ಬಂದಿದ್ದು, ಇದನ್ನು ಗಂಭೀರವಾಗಿ ಪರಿಗಣಿಸಲಾಗಿದೆ ಎಂದಿರುವ ಈಶ್ವರ ಖಂಡ್ರೆ, ಗ್ರಾಮೀಣ ಜನತೆಗೆ ಉದ್ಯೋಗ ಖಾತ್ರಿ ಒದಗಿಸುವಂತೆ ಸೂಚಿಸಿದ್ದಾರೆ.

www.VIKRAMAVAHINI.com
|| ಕನ್ನಡ ದಿನಪತ್ರಿಕೆ ||
PRGI NO: KARKAN/2018/78481
ವಿಕ್ರಮ ವಾಹಿನಿ

# ಶಿವಂ ಅಸೋಸಿಯೇಟ್ಸ್ ಮಾಲೀಕನಿಗೆ ಇಡಿ ಶಾಕ್; 2ನೇ ದಿನವೂ ಶೋಧ

● ವಿಕ್ರಮ ವಾಹಿನಿ | ಬೆಳಗಾವಿ

ಶಿವಂ ಅಸೋಸಿಯೇಟ್ಸ್ ಮಾಲೀಕ ಶಿವಾನಂದ ನೀಲಣ್ಣವರ್ ವಿರುದ್ಧ ದಾಖಲಾಗಿರುವ ಅಕ್ರಮ ಹಣ ವರ್ಗಾವಣೆ ಪ್ರಕರಣಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯ (ಇಡಿ) ಅಧಿಕಾರಿಗಳ ಶೋಧ ಕಾರ್ಯಾಚರಣೆ ಎರಡನೇ ದಿನವೂ ಮುಂದುವರಿದಿದೆ.

ನಗರದ ಶಿವಬಸವ ನಗರದ ಎಂ.ಎಚ್. ಟವರ್‌ನಲ್ಲಿ ಇಡಿ ಅಧಿಕಾರಿಗಳು ವಿವಿಧ ದಾಖಲೆಗಳು ಹಾಗೂ ಹಣಕಾಸು ವ್ಯವಹಾರಗಳಿಗೆ ಸಂಬಂಧಿಸಿದ ಮಾಹಿತಿಯನ್ನು ಪರಿಶೀಲಿಸುತ್ತಿದ್ದಾರೆ. ಸಿಆರ್‌ಪಿಎಫ್ ಸಿಬ್ಬಂದಿಯ ಬಿಗಿ ಭದ್ರತೆಯಲ್ಲಿ ಕಾರ್ಯಾಚರಣೆ ನಡೆಯುತ್ತಿದ್ದು, ಗೋವಾ ಹಾಗೂ ಮಂಗಳೂರಿನಿಂದ ಬಂದಿರುವ ಇಡಿ ಅಧಿಕಾರಿಗಳ ತಂಡಗಳು ಪರಿಶೀಲನೆಯಲ್ಲಿ ಭಾಗಿಯಾಗಿವೆ.

ಪ್ರಕರಣದ ತನಿಖೆಯ ಭಾಗವಾಗಿ ಶಿವಾನಂದ ನೀಲಣ್ಣವರ್ ಅವರ ನಿವಾಸ ಸೇರಿದಂತೆ ಸಂಬಂಧಿತ ಸ್ಥಳಗಳಲ್ಲೂ ಶೋಧ ನಡೆಸಲಾಗಿದೆ. ಹಣಕಾಸು ವ್ಯವಹಾರ, ಹೂಡಿಕೆ ಹಾಗೂ ಇತರ ವಹಿವಾಟುಗಳ ಕುರಿತು ಶಿವಾನಂದ ನೀಲಣ್ಣವರ್ ಅವರನ್ನು ಅಧಿಕಾರಿಗಳು ವಿಚಾರಣೆ ನಡೆಸುತ್ತಿದ್ದಾರೆ ಎನ್ನಲಾಗಿದೆ. ಅವರ ಪತ್ನಿ ಹಾಗೂ ಸಹೋದರರಿಂದಲೂ ಮಾಹಿತಿ ಪಡೆಯಲಾಗುತ್ತಿದೆ.

ಎರಡನೇ ದಿನವೂ ದಾಖಲೆಗಳ ಪರಿಶೀಲನೆ ಮತ್ತು ವಿಚಾರಣೆ ಮುಂದುವರಿದಿದ್ದು, ಶೋಧ ಕಾರ್ಯಾಚರಣೆ ಪೂರ್ಣಗೊಂಡ ಬಳಿಕ ಪ್ರಕರಣಕ್ಕೆ ಸಂಬಂಧಿಸಿದಂತೆ ಹೆಚ್ಚಿನ ಮಾಹಿತಿ ಹೊರಬೀಳುವ ಸಾಧ್ಯತೆಯಿದೆ.

# ಜ್ಞಾನಭಾರತಿ ರಸ್ತೆ ಅಪಘಾತದಲ್ಲಿ ವಿದ್ಯಾರ್ಥಿನಿ ಸಾವು: ಕುಟುಂಬಕ್ಕೆ ಸರ್ಕಾರದಿಂದ 10 ಲಕ್ಷ ರೂ. ಪರಿಹಾರ

● ವಿಕ್ರಮ ವಾಹಿನಿ | ಬೆಂಗಳೂರು

ಬೆಂಗಳೂರು ವಿಶ್ವವಿದ್ಯಾಲಯದ ಜ್ಞಾನಭಾರತಿ ಕ್ಯಾಂಪಸ್‌ನಲ್ಲಿ ರಸ್ತೆ ದಾಟುತ್ತಿದ್ದ ವೇಳೆ ಆಟೋರಿಕ್ಷಾ ಡಿಕ್ಕಿ ಹೊಡೆದು ಗಾಯಗೊಂಡು, ಕಳೆದ ಗುರುವಾರ (ಆ.6) ಮೃತಪಟ್ಟ ವಿದ್ಯಾರ್ಥಿನಿ ಮಾನಸ ಅವರ ಕುಟುಂಬಕ್ಕೆ ಸರ್ಕಾರದಿಂದ 10 ಲಕ್ಷ ರೂ. ಪರಿಹಾರ ನೀಡಲಾಗಿದೆ.

ಮುಖ್ಯಮಂತ್ರಿ ಪರಿಹಾರ ನಿಧಿಯಿಂದ 3 ಲಕ್ಷ ರೂ. ಹಾಗೂ ಚಿಕಿತ್ಸಾ ವೆಚ್ಚವಾಗಿ ಬೆಂಗಳೂರು ವಿಶ್ವವಿದ್ಯಾಲಯದಿಂದ 7 ಲಕ್ಷ ರೂ. ಸೇರಿದಂತೆ ಒಟ್ಟು 10 ಲಕ್ಷ ರೂ. ವಿದ್ಯಾರ್ಥಿನಿಯ ಪೋಷಕರಿಗೆ ನೀಡಲಾಗಿದೆ.

ಮೈಸೂರು ಜಿಲ್ಲೆಯ ನಂಜನಗೂಡು ಮೂಲದ ಮಾನಸ (23) ಅವರು ಬೆಂಗಳೂರು ವಿಶ್ವವಿದ್ಯಾಲಯದ ದೃಶ್ಯ ಕಲಾ ವಿಭಾಗದಲ್ಲಿ ಪ್ರಥಮ ವರ್ಷದ ಸ್ನಾತಕೋತ್ತರ ಪದವಿ ವ್ಯಾಸಂಗ ಮಾಡುತ್ತಿದ್ದರು.

ಜುಲೈ 30 ರಂದು ಜ್ಞಾನಭಾರತಿ ಕ್ಯಾಂಪಸ್‌ನ ಗಾಂಧಿ ಮಾರ್ಗದ ಕ್ಯಾಂಟೀನ್ ಸಮೀಪ ರಸ್ತೆ ದಾಟುತ್ತಿದ್ದ ವೇಳೆ ವೇಗವಾಗಿ ಬಂದ ಆಟೋರಿಕ್ಷಾ ಮಾನಸ ಅವರಿಗೆ ಡಿಕ್ಕಿ ಹೊಡೆದಿತ್ತು.

ಅಪಘಾತದಲ್ಲಿ ಗಂಭೀರವಾಗಿ ಗಾಯಗೊಂಡ ಅವರನ್ನು ನಾಗರಭಾವಿಯ ಖಾಸಗಿ ಆಸ್ಪತ್ರೆಗೆ ದಾಖಲಿಸಿ ತೀವ್ರ ನಿಗಾ ಘಟಕದಲ್ಲಿ ಚಿಕಿತ್ಸೆ ನೀಡಲಾಗುತ್ತಿತ್ತು. ಆದರೆ, ಚಿಕಿತ್ಸೆ ಫಲಕಾರಿಯಾಗದೆ ಅವರು ಮೃತಪಟ್ಟಿದ್ದರು.

ವಿದ್ಯಾರ್ಥಿನಿಯ ಕುಟುಂಬದ ಆರ್ಥಿಕ ಸಂಕಷ್ಟವನ್ನು ಪರಿಗಣಿಸಿ ಸರ್ಕಾರ ಪರಿಹಾರ ನೀಡಿದ್ದು, ಚಿಕಿತ್ಸೆಗೆ ತಗಲಿದ ವೆಚ್ಚವನ್ನೂ ವಿಶ್ವವಿದ್ಯಾಲಯದ ವತಿಯಿಂದ ಭರಿಸಲಾಗಿದೆ.

ಜ್ಞಾನಭಾರತಿ ಕ್ಯಾಂಪಸ್‌ನಲ್ಲಿ ವಿದ್ಯಾರ್ಥಿನಿ ಅಪಘಾತಕ್ಕೀಡಾಗಿ ಮೃತಪಟ್ಟ ಘಟನೆ ವಿದ್ಯಾರ್ಥಿಗಳು ಹಾಗೂ ವಿಶ್ವವಿದ್ಯಾಲಯದ ಸಮುದಾಯದಲ್ಲಿ ಆತಂಕ ಮೂಡಿಸಿದೆ. ಕ್ಯಾಂಪಸ್‌ನ ರಸ್ತೆಗಳಲ್ಲಿ ವಾಹನಗಳ ವೇಗ ನಿಯಂತ್ರಣ ಹಾಗೂ ವಿದ್ಯಾರ್ಥಿಗಳ ಸುರಕ್ಷತೆಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ಒತ್ತಾಯ ಕೇಳಿಬಂದಿದೆ.

ವಿದ್ಯಾರ್ಥಿನಿಯ ಅಕಾಲಿಕ ನಿಧನಕ್ಕೆ ಸಂತಾಪ ಸೂಚಿಸಿ, ಸಂಕಷ್ಟದಲ್ಲಿರುವ ಕುಟುಂಬಕ್ಕೆ ನೆರವಾಗುವ ನಿಟ್ಟಿನಲ್ಲಿ ಸರ್ಕಾರ ಪರಿಹಾರ ಒದಗಿಸಿದೆ.

# ಹಿತವಾದದ್ದೇ ಪ್ರಿಯವಾದರೆ ದೇಹಕ್ಕೂ ಮನಸ್ಸಿಗೂ ಹಿತ: ರಾಮಚಂದ್ರಾಪುರ ಶ್ರೀ

● ವಿಕ್ರಮ ವಾಹಿನಿ | ಗೋಕರ್ಣ

ಊಟ ಮಾಡದೆಯೇ ಋಷಿಗಳಂತೆ ತಪಸ್ಸನ್ನು ಆಚರಿಸುವುದು ಒಂದು ವಿಧವಾದರೇ, ಸರಿಯಾದ ಕ್ರಮದಲ್ಲಿ ಊಟ ಮಾಡುವ ಮೂಲಕವೂ ತಪಸ್ಸಿನ ಫಲವನ್ನು ಪಡೆಯಬಹುದು ಎಂದು ಯೋಗಶಾಸ್ತ್ರ ಹೇಳಿದೆ. ಹಾಗಾಗಿ ಭೋಜನವೆಂಬುದು ತಪಸ್ಸು ಎಂದು ಶ್ರೀರಾಮಚಂದ್ರಾಪುರ ಮಠದ ಜಗದ್ಗುರು ಶಂಕರಾಚಾರ್ಯ ಶ್ರೀಶ್ರೀ ರಾಘವೇಶ್ವರ ಭಾರತೀ ಮಹಾಸ್ವಾಮಿಗಳು ತಿಳಿಸಿದರು.

ಗೋಕರ್ಣದ ಅಶೋಕೆಯ ಮೂಲಮಠದ ಪರಿಸರದಲ್ಲಿ ನಡೆಯುತ್ತಿರುವ 'ಅನ್ನಬ್ರಹ್ಮ ಚಾತುರ್ಮಾಸ್ಯ'ದ ಧರ್ಮಸಭೆಯಲ್ಲಿ 08.08.2026 ರಂದು 'ಅನ್ನಂ ಬ್ರಹ್ಮ' ಮಾಲಿಕೆಯಲ್ಲಿ ಪ್ರವಚನ ಅನುಗ್ರಹಿಸಿದ ಶ್ರೀಗಳು,

ಪಾಪದ ದಾರಿಗಳಲ್ಲಿ ಆಹಾರವೇ ಪ್ರಧಾನವಾಗಿದ್ದು, ಪಾಪ ನಮ್ಮೊಳಗೆ ಸೇರಿದ ನಂತರ ಬಾಧೆಯನ್ನು ನೀಡಲು ಆರಂಭಿಸುತ್ತದೆ. ಸರಿಯಾದ ಭೋಜನ ಕ್ರಮದಿಂದ ರೋಗ ಹಾಗೂ ಪಾಪ ಎರಡನ್ನೂ ನಾಶ ಮಾಡಬಹುದು. ಯಾವುದು ಒಳ್ಳೆಯದೋ ಅದು ಹಿತ ಹಾಗೂ ಯಾವುದು ಇಷ್ಟವೋ ಅದು ಪ್ರಿಯ. ಹಿತವಾದದ್ದೇ ಪ್ರಿಯವಾದರೆ ದೇಹಕ್ಕೂ ಮನಸ್ಸಿಗೂ ಹಿತ ಎಂದು ಅಭಿಪ್ರಾಯಪಟ್ಟರು.



ದೇಹದ ಒಳಗೆ ಹೋಗುವ ಶ್ವಾಸ ಹಾಗೂ ಆಹಾರದಿಂದಲೇ ದೇಹದ ಒಳಗಿನ ಪಾಪವನ್ನು ನಾಶಮಾಡಲು ಸಾಧ್ಯ. ವಿಧಿಪೂರ್ವಕವಾದ ಪ್ರಾಣಾಯಾಮ ಹಾಗೂ ಸಮರ್ಪಕ ಆಹಾರ ಕ್ರಮದಿಂದ ದೇಹದ ಪಾಪವನ್ನು ತೊಳೆದುಕೊಳ್ಳಬಹುದು ಎಂದರು.

ಹಿತ ~ ಮಿತ ~ ಮೇಧ್ಯಾ ಎಂಬ ಸೂತ್ರದ ಮೂಲಕ

ಭೋಜನವನ್ನು ತಪಸ್ಸೆಂದು ಹೇಳಿದ್ದು, ಆಹಾರದಲ್ಲಿ ಹಿತ ~ ಮಿತ ಎಂಬುದು ವ್ಯಕ್ತಿಗತವಾಗಿದ್ದು, ವೃತ್ತಿ ಪ್ರವೃತ್ತಿ, ಹಿನ್ನೆಲೆ ಇತ್ಯಾದಿಗಳನ್ನು ಆಧರಿಸಿ ವ್ಯಕ್ತಿಯ ಹಿತ ಮಿತಗಳು ನಿರ್ಧಾರವಾಗುತ್ತದೆ.

ಯಜ್ಞಕ್ಕೆ ಯೋಗ್ಯವಾದ ಆಹಾರಕ್ಕೆ ಮೇಧ್ಯಾ ಎಂಬ ಹೆಸರಿದ್ದು, ಅಂತಹ ಉತ್ಕೃಷ್ಟ ಆಹಾರವನ್ನು ಸ್ವೀಕರಿಸುವುದರಿಂದ ನಮ್ಮೊಳಗಿನ ಅಗ್ನಿಯನ್ನು ಜಾಗೃತ ಗೊಳಿಸಬಹುದು. ದೇಹವೆಂಬ ಪೆಟ್ಟಿಗೆಯಲ್ಲಿ ಇರುವ ಎಲ್ಲಾ ಸಮಸ್ಯೆಗಳಿಗೂ ಅಗ್ನಿಜಾಗರಣ ಉತ್ತರವಾಗಿದೆ ಎಂದು ತಿಳಿಸಿದರು.

ಮಂಗಳೂರು ಉತ್ತರ ಕ್ಷೇತ್ರದ ಶಾಸಕ ಡಾ. ಭರತ್ ಶೆಟ್ಟಿ, ಕರ್ಣಾಟಕ ಬ್ಯಾಂಕಿನ ಸಿಒಡಿ ಬಿ.ಎಸ್ ರಾಜಾ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದು, ಶ್ರೀಗಳಿಂದ ಆಶೀರ್ವಾದ ಪಡೆದರು.

ರಾಮಮೂರ್ತಿ ಕೆ.ಬಿ. ದಂಪತಿಗಳು ಶ್ರೀಗುರುಭಿಕ್ಷಾ ಸೇವೆ ಸಮರ್ಪಿಸಿದರು. ಸುರೇಶ ಕಲ್ಲಬ್ಬೆ, ಉದಯ ಭಟ್, ಕಿರಣ ಹೆಗಡೆ, ದಿನ ಪ್ರಧಾನರಾದ ಗುಂಡಿ ಮಂಜಪ್ಪ ದಂಪತಿಗಳು ಉಪಸ್ಥಿತರಿದ್ದರು.

## ಹಾಲಕ್ಕಿ ಸಮಾಜದಿಂದ ಸ್ವರ್ಣಪಾದುಕಾ ಪೂಜೆ

ಪರಂಪರಾಗತವಾಗಿ ಶ್ರೀರಾಮಚಂದ್ರಾಪುರ ಮಠಕ್ಕೆ ನಡೆದುಕೊಳ್ಳುತ್ತಿರುವ ಹಾಲಕ್ಕಿ ಸಮಾಜದವರು ಸಮರ್ಪಿಸಿದ ಸ್ವರ್ಣಪಾದುಕಾ ಪೂಜೆಯನ್ನು ಸ್ವೀಕರಿಸಿ ಮಾತನಾಡಿದ ಶ್ರೀಗಳು, ಹಾಲಕ್ಕಿ ಸಮಾಜದವರು ಶ್ರೀಮಠದ ಕೆಕ್ಕಾರು ಶಾಖಾ ಮಠಕ್ಕೆ ಪರಂಪರೆಯಿಂದ ತಮ್ಮ ಶ್ರದ್ಧಾಭಕ್ತಿಗಳನ್ನು ಸಲ್ಲಿಸುತ್ತಾ ಬಂದಿದ್ದು. ಅದರಲ್ಲಿ ತಮ್ಮ ಹಿತವನ್ನು ಕಂಡಿದ್ದಾರೆ. ಹಾಲಕ್ಕಿ ಸಮಾಜದ ಜೊತೆ ಶ್ರೀಮಠ ಸದಾ ಜೊತೆಗಿರಲಿದ್ದು, ಸರ್ಕಾರವೂ ಕೂಡ ಈ ಸಮಾಜಕ್ಕೆ ಸಲ್ಲಬೇಕಾದ ಸೌಕರ್ಯಗಳನ್ನು ಒದಗಿಸಬೇಕು.

ಅನ್ನಬ್ರಹ್ಮ ಚಾತುರ್ಮಾಸ್ಯದಲ್ಲಿ ಹಾಲಕ್ಕಿ ಸಮಾಜಕ್ಕೆ ಅಕ್ಕಿಯನ್ನು ಆಶೀರ್ವಾದ ಪೂರ್ವಕವಾಗಿ ಕೊಡಲಾಗಿದೆ. ಆ ಸಮಾಜಕ್ಕೆ ಒಳಿತಾಗಲಿ ಎಂದು ಆಶೀರ್ವದಿಸಿದರು.

ಹಾಲಕ್ಕಿ ಸಮಾಜದ ಪರವಾಗಿ ಮಾತನಾಡಿದ ಡಾ. ಹನುಮಂತ ಗೌಡರು, ನಾವು ತಲೆತಲಾಂತರದಿಂದ ಶ್ರೀಮಠಕ್ಕೆ ನಡೆದುಕೊಳ್ಳುತ್ತಾ ಬಂದಿದ್ದು, ಶ್ರೀಗುರು ಪರಂಪರೆಯ ಆಶೀರ್ವಾದದಿಂದ ನಮ್ಮ ಸಮಾಜ ಉತ್ತಮ ಮಾರ್ಗದಲ್ಲಿ ಸಾಗುತ್ತಿದೆ. ನಾವು ಇದರಲ್ಲಿ ನೆಮ್ಮದಿ ಕಂಡಿದ್ದೇವೆ ಎಂದರು.

ಹಾಲಕ್ಕಿ ಜಾನಪದ ಹಾಡಿನ ಮೂಲಕ ಶ್ರೀಗುರು ಪೀಠದ ಕುರಿತಾಗಿ ತಮಗಿರುವ ಭಕ್ತಿಯನ್ನು ಸಮರ್ಪಿಸಿದರು. ಬಿ.ಎಸ್ ಗೌಡರ್,

ಎಸ್. ಜಿ ಗೌಡರ್, ಮಂಜುನಾಥ ಗೌಡರ್ ಕೆಕ್ಕಾರು ಸೇರಿದಂತೆ ನೂರಾರು ಹಾಲಕ್ಕಿ ಗುರು ಬಂಧುಗಳು ಉಪಸ್ಥಿತರಿದ್ದರು.

# ಹನಿಟ್ರ್ಯಾಪ್ ಬಲೆಗೆ ವಿಂಗ್ ಕಮಾಂಡರ್?

● ವಿಕ್ರಮ ವಾಹಿನಿ | ನವದೆಹಲಿ

**ಸಾಮಾಜಿಕ ಜಾಲತಾಣದ ಮೂಲಕ ಮಹಿಳೆಯೊಬ್ಬರ ಸಂಪರ್ಕಕ್ಕೆ ಬಂದ ವಿಂಗ್ ಕಮಾಂಡರ್ ಸೂಕ್ಷ್ಮ ಸೇನಾ ಮಾಹಿತಿಯನ್ನು ಹಂಚಿಕೊಂಡಿದ್ದಾರೆಂಬ ಆರೋಪದ ಮೇಲೆ ಬಂಧನವಾಗಿದ್ದು, ಹನಿಟ್ರ್ಯಾಪ್ ಹಾಗೂ ಪಾಕ್ ಹ್ಯಾಂಡ್ಲರ್‌ಗಳ ನಂಟಿನ ಶಂಕೆಯಲ್ಲಿ ತನಿಖೆ ಮುಂದುವರಿದಿದೆ.**

ಪಾಕಿಸ್ತಾನದ ಗುಪ್ತಚರ ಜಾಲದೊಂದಿಗೆ ಸಂಪರ್ಕ ಹೊಂದಿದ್ದ ಆರೋಪದ ಮೇಲೆ ಭಾರತೀಯ ವಾಯುಪಡೆಯ ವಿಂಗ್ ಕಮಾಂಡರ್ ಒಬ್ಬರನ್ನು ದೆಹಲಿ ಪೊಲೀಸರು ಬಂಧಿಸಿರುವ ಪ್ರಕರಣದಲ್ಲಿ ಹನಿಟ್ರ್ಯಾಪ್ ಅಂಶವೂ ಬೆಳಕಿಗೆ ಬಂದಿದೆ. ಸಾಮಾಜಿಕ ಜಾಲತಾಣದ ಮೂಲಕ ಪರಿಚಯವಾದ ಮಹಿಳೆಯೊಬ್ಬರೊಂದಿಗೆ ಸಂಪರ್ಕ ಬೆಳೆಸಿಕೊಂಡಿದ್ದ ಅಧಿಕಾರಿಯು ಸೇನೆಗೆ ಸಂಬಂಧಿಸಿದ ಸೂಕ್ಷ್ಮ ಮಾಹಿತಿಯನ್ನು ಹಂಚಿಕೊಂಡಿದ್ದಾರೆ ಎಂಬ ಆರೋಪ ಕೇಳಿಬಂದಿದೆ.

ಭಾರತೀಯ ವಾಯುಪಡೆಯ ದೂರಿನ ಆಧಾರದ ಮೇಲೆ ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು, ಅಧಿಕಾರಿಯ ವಿರುದ್ಧ ಅಧಿಕೃತ ರಹಸ್ಯ ಕಾಯ್ದೆಯಡಿ ತನಿಖೆ ನಡೆಸುತ್ತಿದ್ದಾರೆ. ಮೇ 30ರಂದು ಬಂಧನ ನಡೆದಿದ್ದು, ತನಿಖೆಯ ಬಳಿಕ ಜುಲೈ 30ರಂದು ನ್ಯಾಯಾಲಯಕ್ಕೆ ಆರೋಪಪಟ್ಟಿ ಸಲ್ಲಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ತನಿಖೆಯ ಪ್ರಕಾರ, ಸಾಮಾಜಿಕ ಜಾಲತಾಣದ ಮೂಲಕ ಮಹಿಳೆಯೊಬ್ಬರು ಅಧಿಕಾರಿಯನ್ನು ಸಂಪರ್ಕಿಸಿ, ಚಾಟ್ ಮತ್ತು ವಿಡಿಯೋ ಕರೆಗಳ ಮೂಲಕ ಅವರ ವಿಶ್ವಾಸ ಗಳಿಸಿಕೊಂಡಿದ್ದಳು ಎನ್ನಲಾಗಿದೆ.

ಬಳಿಕ ಸೇನಾ ಸಿಬ್ಬಂದಿಯ ನಿಯೋಜನೆ, ಚಲನವಲನ, ಫೋಟೋಗಳು ಹಾಗೂ ವಿಡಿಯೋ ಸೇರಿದಂತೆ ಹಲವು ಸೂಕ್ಷ್ಮ ಮಾಹಿತಿಗಳನ್ನು ಡಿಜಿಟಲ್ ಮಾಧ್ಯಮದ ಮೂಲಕ ಹಂಚಿಕೊಳ್ಳಲಾಗಿದೆ ಎಂಬ ಆರೋಪವಿದೆ.

ಇದೇ ಪ್ರಕರಣದಲ್ಲಿ ಮತ್ತೊಬ್ಬ ಸಹೋದ್ಯೋಗಿಯ ಮೊಬೈಲ್‌ನಲ್ಲಿ ನಿರ್ದಿಷ್ಟ ಅಪ್ಲಿಕೇಶನ್ ಅಳವಡಿಸುವಂತೆ ಸೂಚಿಸಲಾಗಿತ್ತು ಎನ್ನಲಾಗಿದ್ದು, ಅದು ಡೇಟಾ ಸಂಗ್ರಹಣೆ ಮತ್ತು ಸ್ಥಳ ಮಾಹಿತಿ ಪತ್ತೆಹಚ್ಚಲು ಬಳಸಬಹುದಾದ ದುರುದ್ದೇಶಪೂರಿತ ಸಾಫ್ಟ್‌ವೇರ್ ಆಗಿರಬಹುದು ಎಂಬ ಶಂಕೆಯೂ ತನಿಖೆಯಲ್ಲಿ ವ್ಯಕ್ತವಾಗಿದೆ.

ಸಾಮಾಜಿಕ ಜಾಲತಾಣದ ಮೂಲಕ ಸಂಪರ್ಕಿಸಿದ್ದ ಮಹಿಳೆ ಪಾಕಿಸ್ತಾನ ಮೂಲದ ಹ್ಯಾಂಡ್ಲರ್‌ಗಳ ಸೂಚನೆಯಂತೆ ಕಾರ್ಯನಿರ್ವಹಿಸುತ್ತಿದ್ದಳೇ ಎಂಬ ಬಗ್ಗೆಯೂ ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ಪ್ರಕರಣವು ದೊಡ್ಡ ಗುಪ್ತಚರ ಜಾಲದೊಂದಿಗೆ ಸಂಬಂಧ ಹೊಂದಿದೆಯೇ ಎಂಬುದನ್ನು ಪತ್ತೆಹಚ್ಚಲು ತನಿಖೆ ಮುಂದುವರಿದಿದೆ.

# 12ನೇ ವಯಸ್ಸಿನಲ್ಲೇ ಎಐ ಉದ್ಯಮಿ

● ವಿಕ್ರಮ ವಾಹಿನಿ | ನವದೆಹಲಿ

ಸಾಮಾನ್ಯವಾಗಿ 12ನೇ ವಯಸ್ಸಿನಲ್ಲಿ ಮಕ್ಕಳು ಶಾಲೆ, ಆಟ ಹಾಗೂ ಸ್ನೇಹಿತರೊಂದಿಗೆ ಸಮಯ ಕಳೆಯುವುದರಲ್ಲಿ ನಿರತರಾಗಿರುತ್ತಾರೆ. ಆದರೆ ದೆಹಲಿಯ ಮನ ಜಂಪಲ್ ಎಂಬ ಬಾಲಕಿ ಇದೇ ವಯಸ್ಸಿನಲ್ಲಿ 'Voxa' ಎಂಬ ಕೃತಕ ಬುದ್ಧಿಮತ್ತೆ ಆಧಾರಿತ ಸ್ಟಾರ್ಟ್‌ಅಪ್ ಸ್ಥಾಪಿಸಿ ತಂತ್ರಜ್ಞಾನ ಕ್ಷೇತ್ರದಲ್ಲಿ ಗಮನ ಸೆಳೆದಿದ್ದಾಳೆ.



ಮನ ಜಂಪಲ್ ಅವರ ತಂತ್ರಜ್ಞಾನ ಆಸಕ್ತಿ ಕೇವಲ 9ನೇ ವಯಸ್ಸಿನಲ್ಲೇ ಆರಂಭವಾಗಿದ್ದು, ಆ ವಯಸ್ಸಿನಲ್ಲಿ Python ಕೋಡಿಂಗ್ ಕಲಿಯಲು ಶುರುಮಾಡಿದ್ದರು. 10ನೇ ವಯಸ್ಸಿನಲ್ಲಿ ವಿವಿಧ ತಂತ್ರಜ್ಞಾನಗಳ ಕುರಿತು ಆಸಕ್ತಿ ಬೆಳೆಸಿಕೊಂಡ ಅವರು, 11ನೇ ವಯಸ್ಸಿನಲ್ಲಿ ಎಐ ಆಧಾರಿತ ಉತ್ಪನ್ನಗಳನ್ನು ಅಭಿವೃದ್ಧಿಪಡಿಸಲು ಮುಂದಾದರು. ಇದರ ಮುಂದುವರಿದ ಭಾಗವಾಗಿ 12ನೇ ವಯಸ್ಸಿನಲ್ಲಿ ತಮ್ಮದೇ ಎಐ ಸ್ಟಾರ್ಟ್‌ಅಪ್ ಆರಂಭಿಸಿದ್ದಾರೆ.

ತಮ್ಮ ತಂದೆಯ ಕಚೇರಿಗೆ ಭೇಟಿ ನೀಡುತ್ತಿದ್ದ ವೇಳೆ ಉದ್ಯೋಗಿಗಳು ಗ್ರಾಹಕರ ಕರೆಗಳನ್ನು ನಿರ್ವಹಿಸಲು ಎದುರಿಸುತ್ತಿದ್ದ ಸಮಸ್ಯೆಗಳನ್ನು ಮನ ಗಮನಿಸಿದರು. ಪ್ರತಿಯೊಂದು ಕರೆಯನ್ನು ಸಮಯಕ್ಕೆ ಸರಿಯಾಗಿ ಸ್ವೀಕರಿಸಲು ಸಾಧ್ಯವಾಗದ ಕಾರಣ ಗ್ರಾಹಕರಿಗೆ ತೊಂದರೆಯಾಗುತ್ತಿರುವುದನ್ನು ಗಮನಿಸಿದ ಅವರು, ಇದಕ್ಕೆ ತಂತ್ರಜ್ಞಾನದ ಮೂಲಕ ಪರಿಹಾರ ಕಂಡುಕೊಳ್ಳುವ ಆಲೋಚನೆ ಮಾಡಿದರು. ಇದೇ ಆಲೋಚನೆಯಿಂದ 'Voxa' ರೂಪುಗೊಂಡಿತು.

ಗ್ರಾಹಕರ ಪ್ರಶ್ನೆಗಳಿಗೆ ಮಾಹಿತಿ ನೀಡುವುದು, ಅಪಾಯಿಂಟ್‌ಮೆಂಟ್ ಬುಕ್ ಮಾಡುವುದು, ರೆಸ್ಟೋರೆಂಟ್‌ಗಳಲ್ಲಿ ಆರ್ಡರ್ ಸ್ವೀಕರಿಸುವುದು ಹಾಗೂ ಫಾಲೋ-ಅಪ್ ಮಾಡುವಂತಹ ಕಾರ್ಯಗಳನ್ನು ಇದು ನಿರ್ವಹಿಸಬಹುದು. ಕೆನಡಾ, ಭಾರತ ಮತ್ತು ಕಾಂಬೋಡಿಯಾ ಸೇರಿದಂತೆ ವಿವಿಧ ದೇಶಗಳ ಕೆಲವು ವ್ಯವಹಾರಗಳು Voxa ಸೇವೆ ಬಳಸುತ್ತಿವೆ ಎಂದು ತಿಳಿದುಬಂದಿದೆ. ವಿಶೇಷವಾಗಿ ಸಣ್ಣ ಮತ್ತು ಮಧ್ಯಮ ಪ್ರಮಾಣದ ಉದ್ಯಮಗಳಿಗೆ ಗ್ರಾಹಕ ಸೇವೆಯನ್ನು ಸ್ವಯಂಚಾಲಿತಗೊಳಿಸಲು ಈ ತಂತ್ರಜ್ಞಾನ ನೆರವಾಗುತ್ತಿದೆ.

# ಅಕ್ರಮ ವಲಸಿಗರ ಪತ್ತೆಗೆ 'ಆಪರೇಷನ್ ಮುಕ್ತಾ'

● ವಿಕ್ರಮ ವಾಹಿನಿ | ಬೆಂಗಳೂರು

ರಾಜಧಾನಿಯಲ್ಲಿ ಸೂಕ್ತ ದಾಖಲೆಗಳಿಲ್ಲದೆ ಅಕ್ರಮವಾಗಿ ನೆಲೆಸಿರುವ ವಿದೇಶಿ ಪ್ರಜೆಗಳನ್ನು ಪತ್ತೆಹಚ್ಚಲು ಬೆಂಗಳೂರು ಪೊಲೀಸರು 'ಆಪರೇಷನ್ ಮುಕ್ತಾ' ಹೆಸರಿನಲ್ಲಿ ವಿಶೇಷ ಕಾರ್ಯಾಚರಣೆ ಆರಂಭಿಸಿದ್ದಾರೆ. ಶನಿವಾರ ಮುಂಜಾನೆ 6 ಗಂಟೆಯಿಂದ ಆರಂಭವಾದ ಕಾರ್ಯಾಚರಣೆಯಲ್ಲಿ 500ಕ್ಕೂ ಹೆಚ್ಚು ಪೊಲೀಸ್ ಸಿಬ್ಬಂದಿ ಪಾಲ್ಗೊಂಡಿದ್ದಾರೆ.

**ವೈಟ್‌ಫೀಲ್ಡ್ ವಿಭಾಗದಲ್ಲಿ ತೀವ್ರ ತಪಾಸಣೆ**

ವೈಟ್‌ಫೀಲ್ಡ್ ಡಿಸಿಪಿ ಸೈದುಲು ಅಡಾವತ್ ನೇತೃತ್ವದಲ್ಲಿ ವೈಟ್‌ಫೀಲ್ಡ್, ಕಾಡುಗೋಡಿ, ಮಾರತ್‌ಹಳ್ಳಿ, ಬೆಳ್ಳಂದೂರು ಹಾಗೂ ಮಹದೇವಪುರ ಸೇರಿದಂತೆ ಹಲವು ಪ್ರದೇಶಗಳಲ್ಲಿ ಪೊಲೀಸರು ತಪಾಸಣೆ ನಡೆಸಿದರು. ವಿದೇಶಿ ಪ್ರಜೆಗಳ ಪಾಸ್‌ಪೋರ್ಟ್, ವೀಸಾ, ಗುರುತಿನ ಚೀಟಿ ಸೇರಿದಂತೆ ಅಗತ್ಯ ದಾಖಲೆಗಳನ್ನು ಪರಿಶೀಲಿಸಲಾಯಿತು.

ಸೂಕ್ತ ದಾಖಲೆಗಳಿಲ್ಲದೆ ವಾಸಿಸುತ್ತಿರುವವರು ಪತ್ತೆಯಾದರೆ, ಅವರ ಮಾಹಿತಿಯನ್ನು ವಿದೇಶಿಗರ ಪ್ರಾದೇಶಿಕ ನೋಂದಣಿ ಕಚೇರಿಗೆ ನೀಡಲಾಗುವುದು. ಪರಿಶೀಲನೆ ಬಳಿಕ ಕಾನೂನುಬದ್ಧವಾಗಿ ಗಡಿಪಾರು ಮಾಡುವ ಕ್ರಮ ಕೈಗೊಳ್ಳಲಾಗುವುದು ಎಂದು ಪೊಲೀಸರು ತಿಳಿಸಿದ್ದಾರೆ.

ವಿದೇಶಿ ಪ್ರಜೆಗಳಿಗೆ ದಾಖಲೆ ಪರಿಶೀಲಿಸದೆ ಮನೆ ಅಥವಾ ವಸತಿ ಬಾಡಿಗೆಗೆ ನೀಡುವ ಮಾಲೀಕರ ವಿರುದ್ಧವೂ ಕಾನೂನು ಕ್ರಮ ಕೈಗೊಳ್ಳುವುದಾಗಿ ಪೊಲೀಸರು ಎಚ್ಚರಿಸಿದ್ದಾರೆ. ವೈಟ್‌ಫೀಲ್ಡ್ ವಿಭಾಗದಲ್ಲಿ ಈಗಾಗಲೇ ಇಂತಹ 10 ಪ್ರಕರಣಗಳು ದಾಖಲಾಗಿವೆ.

**ಎಲೆಕ್ಟ್ರಾನಿಕ್ ಸಿಟಿಯಲ್ಲಿ 15 ಬಾಂಗ್ಲಾದೇಶಿ ಪ್ರಜೆಗಳು**

ಎಲೆಕ್ಟ್ರಾನಿಕ್ ಸಿಟಿ ವಿಭಾಗದಲ್ಲಿ 1,909 ಶಂಕಿತ ವ್ಯಕ್ತಿಗಳ ದಾಖಲೆಗಳನ್ನು ಪರಿಶೀಲಿಸಲಾಗಿದ್ದು, 15 ಬಾಂಗ್ಲಾದೇಶಿ ಪ್ರಜೆಗಳು ಅಕ್ರಮವಾಗಿ ನೆಲೆಸಿರುವುದು ಪತ್ತೆಯಾಗಿದೆ. ಬೇಗೂರು ವ್ಯಾಪ್ತಿಯಲ್ಲಿ 8 ಹಾಗೂ ಪರಪ್ಪನ ಅಗ್ರಹಾರ ವ್ಯಾಪ್ತಿಯಲ್ಲಿ 7 ಮಂದಿಯನ್ನು ವಶಕ್ಕೆ ಪಡೆಯಲಾಗಿದೆ.

ಈ ಕಾರ್ಯಾಚರಣೆಯಲ್ಲಿ 295 ಪೊಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿಯನ್ನೊಳಗೊಂಡ 23 ವಿಶೇಷ ತಂಡಗಳು 29 ಆಯಕಟ್ಟಿನ ಸ್ಥಳಗಳಲ್ಲಿ ಪರಿಶೀಲನೆ ನಡೆಸಿವೆ. ನಿರ್ಮಾಣ ಪ್ರದೇಶಗಳು, ಶೆಡ್‌ಗಳು ಹಾಗೂ ಇತರೆ ಅನುಮಾನಾಸ್ಪದ ಸ್ಥಳಗಳಲ್ಲೂ ತಪಾಸಣೆ ಮುಂದುವರಿದಿದೆ.

ನಗರ ಪೊಲೀಸ್ ಆಯುಕ್ತರ ನಿರ್ದೇಶನದಂತೆ ಬೆಂಗಳೂರಿನ ವಿವಿಧ ಪೊಲೀಸ್ ವಿಭಾಗಗಳಲ್ಲೂ ಕಾರ್ಯಾಚರಣೆ ಮುಂದುವರಿದಿದ್ದು, ಅನುಮಾನಾಸ್ಪದ ವ್ಯಕ್ತಿಗಳ ಗುರುತು ಹಾಗೂ ದಾಖಲೆಗಳನ್ನು ಪರಿಶೀಲಿಸಲಾಗುತ್ತಿದೆ. ವಿದೇಶಿ ಪ್ರಜೆಗಳಿಗೆ ಮನೆ ಬಾಡಿಗೆಗೆ ನೀಡುವವರು ಹಾಗೂ ಉದ್ಯೋಗ ನೀಡುವವರು ಪಾಸ್‌ಪೋರ್ಟ್, ವೀಸಾ ಮತ್ತು ಇತರ ಅಧಿಕೃತ ದಾಖಲೆಗಳನ್ನು ಪರಿಶೀಲಿಸಬೇಕು. ದಾಖಲೆಗಳಿಲ್ಲದೆ ವಾಸಿಸುತ್ತಿರುವ ಅಥವಾ ಅನುಮಾನಾಸ್ಪದ ವ್ಯಕ್ತಿಗಳ ಬಗ್ಗೆ ಪೊಲೀಸರಿಗೆ ಮಾಹಿತಿ ನೀಡುವಂತೆ ಅಧಿಕಾರಿಗಳು ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ.

ಪೌರತ್ವ ಹಾಗೂ ದಾಖಲೆಗಳನ್ನು ಪರಿಶೀಲಿಸಿ, ಪತ್ತೆಯಾದ ವಿದೇಶಿ ಪ್ರಜೆಗಳ ಕುರಿತು ಈಖಖಔಗೆ ವರದಿ ಸಲ್ಲಿಸಲಾಗುವುದು ಎಂದು ಪೊಲೀಸರು ತಿಳಿಸಿದ್ದಾರೆ. ಸಾರ್ವಜನಿಕರು ವಿದೇಶಿ ಪ್ರಜೆಗಳಿಗೆ ಮನೆ ಬಾಡಿಗೆ ಅಥವಾ ಉದ್ಯೋಗ ನೀಡುವ ಮುನ್ನ ದಾಖಲೆಗಳನ್ನು ಕಡ್ಡಾಯವಾಗಿ ಪರಿಶೀಲಿಸಬೇಕು ಎಂದು ಪೊಲೀಸರು ಮನವಿ ಮಾಡಿದ್ದಾರೆ.

# ಕೆಪಿಟಿಸಿಎಲ್‌ನ 'ಡಾರ್ಕ್ ಫೈಬರ್' ವಾಣಿಜ್ಯ ಬಳಕೆಗೆ ರೂ 130 ಕೋಟಿ ಹೆಚ್ಚುವರಿ ಆದಾಯದ ನಿರೀಕ್ಷೆ


● ವಿಕ್ರಮ ವಾಹಿನಿ | ಬೆಂಗಳೂರು

ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ (ಕೆಪಿಟಿಸಿಎಲ್) ತನ್ನ ವ್ಯಾಪ್ತಿಯಲ್ಲಿರುವ 6,119 ಕಿಲೋಮೀಟರ್ ಉದ್ದದ ಆಪ್ಟಿಕಲ್ ಗ್ರೌಂಡ್ ವೈರ್ ಫೈಬರ್ ಜಾಲದಲ್ಲಿನ ಹೆಚ್ಚುವರಿ 'ಡಾರ್ಕ್ ಫೈಬರ್' ಅನ್ನು ವಾಣಿಜ್ಯ ಬಳಕೆಗೆ ಮುಕ್ತಗೊಳಿಸುವ ಮೂಲಕ ಸಂಸ್ಥೆಗೆ ಹೆಚ್ಚುವರಿ ಆದಾಯ ಸೃಷ್ಟಿಸುವ ಹಾಗೂ ರಾಜ್ಯದ ಡಿಜಿಟಲ್ ಮೂಲಸೌಕರ್ಯಕ್ಕೆ ಮತ್ತಷ್ಟು ಬಲ ತುಂಬುವ ಮಹತ್ವದ ನಿರ್ಧಾರ ಕೈಗೊಂಡಿದೆ.

ಈ ಯೋಜನೆಯಡಿ ಕೆಪಿಟಿಸಿಎಲ್ ತನ್ನ ವಿದ್ಯುತ್ ಪ್ರಸರಣ ಜಾಲದಲ್ಲಿರುವ 24 ಫೈಬರ್ ಜೋಡಿಗಳ ಪೈಕಿ 12 ಫೈಬರ್ ಜೋಡಿಗಳನ್ನು ತನ್ನ ಗ್ರಿಡ್ ಸಂವಹನ ವ್ಯವಸ್ಥೆಗಾಗಿ ಕಾಯ್ದಿರಿಸಿಕೊಂಡು, ಉಳಿದ 12 ಫೈಬರ್ ಜೋಡಿಗಳನ್ನು ಟೆಲಿಕಾಂ ಸೇವಾ ಸಂಸ್ಥೆಗಳು, ಡೇಟಾ ನೆಟ್‌ವರ್ಕ್ ಸಂಸ್ಥೆಗಳು ಹಾಗೂ ಇತರೆ ಪರವಾನಗಿ ಪಡೆದ ಸೇವಾ ಪೂರೈಕೆದಾರರಿಗೆ ಬಾಡಿಗೆ ಆಧಾರದ ಮೇಲೆ ಒದಗಿಸಲಿದೆ.

ಈ ಯೋಜನೆಗೆ ಸಂಬಂಧಿಸಿದ ಸ್ಪರ್ಧಾತ್ಮಕ ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡಿದ್ದು, 15 ವರ್ಷಗಳ ಒಪ್ಪಂದದ ಅವಧಿಯಲ್ಲಿ ಕೆಪಿಟಿಸಿಎಲ್‌ಗೆ ಸುಮಾರು □130 ಕೋಟಿ ಸ್ಥಿರ ಆದಾಯ ದೊರೆಯುವ ನಿರೀಕ್ಷೆಯಿದೆ. ಇದರ ಜೊತೆಗೆ, ಡಾರ್ಕ್ ಫೈಬರ್ ಲೀಸ್‌ನಿಂದ ಲಭಿಸುವ ಆದಾಯದಲ್ಲಿ ಶೇ.40ರಷ್ಟು ಪಾಲು ಹಾಗೂ ಉಪಕೇಂದ್ರಗಳಲ್ಲಿ ಕೋ-ಲೊಕೇಶನ್ ಶುಲ್ಕದ ರೂಪದಲ್ಲಿಯೂ ಹೆಚ್ಚುವರಿ ಆದಾಯ ಲಭ್ಯವಾಗಲಿದೆ.

ಯೋಜನೆಯಡಿ ಆಯ್ಕೆಯಾಗುವ ಸಂಸ್ಥೆಯು ಡಾರ್ಕ್ ಫೈಬರ್‌ಗಳ ಮಾರುಕಟ್ಟೆಗೊಳಿಸುವಿಕೆ, ಗ್ರಾಹಕರಿಗೆ ಲೀಸ್ ನೀಡುವುದು, ಸಂಪೂರ್ಣ ಒಪಿಜಿಡಬ್ಲ್ಯು ಜಾಲದ ಕಾರ್ಯಾಚರಣೆ ಮತ್ತು ನಿರ್ವಹಣೆ, ಗ್ರಾಹಕರ ಸೇರ್ಪಡೆ, ಬಿಲ್ಲಿಂಗ್, ಆದಾಯ ಸಂಗ್ರಹಣೆ ಹಾಗೂ ಸೇವಾ ಗುಣಮಟ್ಟದ ನಿರ್ವಹಣೆಯ ಜವಾಬ್ದಾರಿಯನ್ನು ವಹಿಸಿಕೊಳ್ಳಲಿದೆ.



"ಕೆಪಿಟಿಸಿಎಲ್ ಕೇವಲ ವಿದ್ಯುತ್ ಪ್ರಸರಣ ಸಂಸ್ಥೆಯಾಗಿರದೆ, ರಾಜ್ಯದ ಡಿಜಿಟಲ್ ಮೂಲಸೌಕರ್ಯ ನಿರ್ಮಾಣದಲ್ಲಿಯೂ ಮಹತ್ವದ ಪಾತ್ರವಹಿಸುತ್ತಿದೆ. ಬಳಕೆಯಾಗದೆ ಉಳಿದಿದ್ದ ಡಾರ್ಕ್ ಫೈಬರ್ ಅನ್ನು ವಾಣಿಜ್ಯ ಬಳಕೆಗೆ ತರಲಾಗುತ್ತಿರುವುದು ಸಾರ್ವಜನಿಕ ಸ್ವತ್ತಿನ ಸಮರ್ಥ ಬಳಕೆಗೆ ಉತ್ತಮ ಉದಾಹರಣೆಯಾಗಿದೆ. ಇದರಿಂದ ಕೆಪಿಟಿಸಿಎಲ್‌ಗೆ ದೀರ್ಘಾವಧಿಯ ಆದಾಯ ದೊರೆಯುವ ಜೊತೆಗೆ, ಕರ್ನಾಟಕದಲ್ಲಿ ವೇಗವಾದ ಡಿಜಿಟಲ್ ಸಂಪರ್ಕ ವ್ಯವಸ್ಥೆ ಹಾಗೂ ಡಿಜಿಟಲ್ ಆರ್ಥಿಕತೆಯ ಬೆಳವಣಿಗೆಗೂ ಹೊಸ ಉತ್ತೇಜನ ಸಿಗಲಿದೆ."



"ಕೆಪಿಟಿಸಿಎಲ್ ನಿರ್ಮಿಸಿರುವ ಒಪಿಜಿಡಬ್ಲ್ಯು ಜಾಲವು ನಮ್ಮ ವಿದ್ಯುತ್ ಪ್ರಸರಣ ವ್ಯವಸ್ಥೆಯ ಪ್ರಮುಖ ಡಿಜಿಟಲ್ ಆಧಾರವಾಗಿದೆ. ಗ್ರಿಡ್ ಸಂವಹನಕ್ಕೆ ಅಗತ್ಯವಿರುವ ಸಾಮರ್ಥ್ಯವನ್ನು ಕಾಯ್ದಿರಿಸಿಕೊಂಡು, ಹೆಚ್ಚುವರಿ ಡಾರ್ಕ್ ಫೈಬರ್ ಅನ್ನು ವಾಣಿಜ್ಯ ಬಳಕೆಗೆ ಮುಕ್ತಗೊಳಿಸುವ ಮೂಲಕ ಸಾರ್ವಜನಿಕ ಮೂಲಸೌಕರ್ಯದ ಮೌಲ್ಯವನ್ನು ಹೆಚ್ಚಿಸುವ ಕಾರ್ಯವನ್ನು ಕೈಗೊಂಡಿದ್ದೇವೆ. ಈ ಯೋಜನೆಯಿಂದ ಸಂಸ್ಥೆಗೆ ಸ್ಥಿರ ಆದಾಯ ಸೃಷ್ಟಿಯಾಗುವುದರ ಜೊತೆಗೆ, ರಾಜ್ಯದ ಟೆಲಿಕಾಂ, ಡೇಟಾ ಸೆಂಟರ್ ಹಾಗೂ ಭವಿಷ್ಯದ ಡಿಜಿಟಲ್ ಸಂಪರ್ಕ ವ್ಯವಸ್ಥೆಗಳಿಗೆ ವಿಶ್ವಾಸಾರ್ಹ ಫೈಬರ್ ಜಾಲ ಲಭ್ಯವಾಗಲಿದೆ."

15 ವರ್ಷಗಳ (10 ವರ್ಷ + 5 ವರ್ಷ ವಿಸ್ತರಣೆ ಅವಕಾಶ) ಈ ಒಪ್ಪಂದದ ಮೂಲಕ ಕೆಪಿಟಿಸಿಎಲ್‌ಗೆ ವಾರ್ಷಿಕ ನಿಗದಿತ ಶುಲ್ಕದ ಜೊತೆಗೆ ಆದಾಯ ಹಂಚಿಕೆ ವ್ಯವಸ್ಥೆಯೂ ಜಾರಿಯಾಗಲಿದೆ. ಈ ಮೂಲಕ ಸಾರ್ವಜನಿಕ ಮೂಲಸೌಕರ್ಯವನ್ನು ಸಮರ್ಥವಾಗಿ ಬಳಸಿಕೊಂಡು ದೀರ್ಘಾವಧಿಯ ಆರ್ಥಿಕ ಲಾಭ ಗಳಿಸುವ ಹೊಸ ಮಾದರಿಯನ್ನು ಕೆಪಿಟಿಸಿಎಲ್ ಅನುಸರಿಸುತ್ತಿದೆ.

ಈ ಉಪಕ್ರಮವು ರಾಜ್ಯದ ವಿದ್ಯುತ್ ಪ್ರಸರಣ ಮೂಲಸೌಕರ್ಯವನ್ನು ಡಿಜಿಟಲ್ ಆರ್ಥಿಕತೆಯೊಂದಿಗೆ ಸಂಪರ್ಕಿಸುವ ಮಹತ್ವದ ಹೆಜ್ಜೆಯಾಗಿದ್ದು, ಟೆಲಿಕಾಂ, ಡೇಟಾ ಸೆಂಟರ್‌ಗಳು, 5ಜಿ ಜಾಲ, ಕ್ಲೌಡ್ ಸೇವೆಗಳು, ಭವಿಷ್ಯದ ಡಿಜಿಟಲ್ ಸಂಪರ್ಕ ವ್ಯವಸ್ಥೆಗಳು ಹಾಗೂ ಸರ್ಕಾರಿ-ಖಾಸಗಿ ಡಿಜಿಟಲ್ ಮೂಲಸೌಕರ್ಯಗಳ ವಿಸ್ತರಣೆಗೆ ವಿಶ್ವಾಸಾರ್ಹ ಮತ್ತು ವೇಗದ ಫೈಬರ್ ಸಂಪರ್ಕ ಒದಗಿಸಲು ನೆರವಾಗಲಿದೆ.

# 'ಕರ್ನಾಟಕದ ಹೆಮ್ಮೆಯ ನಾಯಕ ನಿಜಲಿಂಗಪ್ಪ'

● ವಿಕ್ರಮ ವಾಹಿನಿ | ಬೆಂಗಳೂರು

"ನಮ್ಮ ಸಚಿವ ಸಂಪುಟದಲ್ಲಿ ಮಹಿಳೆಗೆ ಸ್ಥಾನ ಇದ್ದೇ ಇರುತ್ತದೆ. ನಾವು ಮಹಿಳೆಯರಿಗೆ ಹೆಚ್ಚು ಶಕ್ತಿ ನೀಡುತ್ತೇವೆ" ಎಂದು ಸಿಎಂ ಡಿ ಕೆ ಶಿವಕುಮಾರ್ ಅವರು ತಿಳಿಸಿದರು.

ವಿಧಾನಸೌಧ ಆವರಣದಲ್ಲಿ ಎಸ್ ನಿಜಲಿಂಗಪ್ಪ ಅವರ ಪುಣ್ಯಸ್ಮರಣೆ ಹಿನ್ನೆಲೆಯಲ್ಲಿ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿದ ಬಳಿಕ ಶಿವಕುಮಾರ್ ಅವರು ಮಾಧ್ಯಮಗಳ ಪ್ರಶ್ನೆಗಳಿಗೆ ಪ್ರತಿಕ್ರಿಯೆ ನೀಡಿದರು.

ರಾಹುಲ್ ಗಾಂಧಿ ಅವರು ಮಹಿಳಾ ಮೀಸಲಾತಿ ಮಸೂದೆ ಬಗ್ಗೆ ಚರ್ಚೆ ಮಾಡಿದ್ದಕ್ಕೆ ಕಿರಣ್ ರಿಜಿಜು ಅವರು ಕರ್ನಾಟಕ ಸಚಿವ ಸಂಪುಟದಲ್ಲಿ ಮಹಿಳೆಯರಿಲ್ಲ ಎಂಬ ಹೇಳಿಕೆ ಬಗ್ಗೆ ಕೇಳಿದಾಗ, "ಈ ಮಸೂದೆಯನ್ನು ರೂಪಿಸಿ, ಲೋಕಸಭೆಯಲ್ಲಿ ಪಾಸ್ ಮಾಡಿದ್ದವರು ಕಾಂಗ್ರೆಸ್ ನವರು. ಲೋಕಸಭೆ ಚುನಾವಣೆಯಲ್ಲಿ ಕರ್ನಾಟಕದಲ್ಲಿ ನಾವು ಮಹಿಳೆರಿಗೆ ಹೆಚ್ಚು ಸ್ಥಾನ ನೀಡಿದ್ದೆವು. ಸಧ್ಯದಲ್ಲೇ ಸಂಪುಟ ವಿಸ್ತರಣೆ ವಿಚಾರ ಬಗೆಹರಿಯಲಿದೆ. ರಿಜಿಜು ಅವರು ಕಾಂಗ್ರೆಸ್ ಪಕ್ಷದ ಬಗ್ಗೆ ಚಿಂತಿಸುವುದು ಬೇಡ, ಅವರು ತಮ್ಮ ಪಕ್ಷ ಹಾಗೂ ಸರ್ಕಾರದ ಬಗ್ಗೆ ಆಲೋಚಿಸಲಿ" ಎಂದರು.



ದೆಹಲಿಗೆ ಹೋಗುತ್ತಿದ್ದೀರಾ ಎಂದು ಕೇಳಿದಾಗ, "ಹೋಗಲೇಬೇಕಲ್ಲವೆ, ನಿಮಗೆ ಮಾಹಿತಿ ನೀಡಿಯೇ ಹೋಗುತ್ತೇವೆ" ಎಂದರು.

ಕರ್ನಾಟಕಕ್ಕೆ ಗೌರವ ತಂದ ಧೀಮಂತ ನಾಯಕ ನಿಜಲಿಂಗಪ್ಪ ಅವರು: "ಮಾಜಿ ಮುಖ್ಯಮಂತ್ರಿ ಎಸ್ ನಿಜಲಿಂಗಪ್ಪ ಅವರ ಪುಣ್ಯ ಸ್ಮರಣೆ ಅಂಗವಾಗಿ ನಾವೆಲ್ಲರೂ ಅವರಿಗೆ ಗೌರವ ಸಲ್ಲಿಸಿ ಸ್ಮರಿಸುತ್ತಿದ್ದೇವೆ. ನಾನು ಅನೇಕ ಬಾರಿ ನಿಜಲಿಂಗಪ್ಪ ಅವರ ಜೊತೆ ಚರ್ಚೆ ಮಾಡಿದ್ದೇನೆ. ನಾನು ಹಾಗೂ ಎಸ್ ಎಂ ಕೃಷ್ಣ ಅವರು ಹಲವು ಬಾರಿ ನಿಜಲಿಂಗಪ್ಪ ಅವರ ಜೊತೆಗೆ ಹೋಗಿದ್ದೇವೆ. ಸೋನಿಯಾ ಗಾಂಧಿ ಅವರು ಕೂಡ ನಿಜಲಿಂಗಪ್ಪ ಅವರನ್ನು ಭೇಟಿ ಮಾಡಬೇಕು ಎಂದು ಚಿತ್ರದುರ್ಗಕ್ಕೆ ಆಗಮಿಸಿದ್ದರು. ನಾನು ಎರಡನೇ ಬಾರಿಗೆ ಶಾಸಕನಾದಾಗಲೂ ಕರ್ನಾಟಕ ಭವನದಲ್ಲಿ ಅವರನ್ನು ಭೇಟಿ ಮಾಡಿದ್ದೆ" ಎಂದು ಸ್ಮರಿಸಿದರು.

"ನಿಜಲಿಂಗಪ್ಪ ಅವರು ಕರ್ನಾಟಕಕ್ಕೆ ಗೌರವ ತಂದ ಧೀಮಂತ ನಾಯಕ. ಕರ್ನಾಟಕದ ಏಕೀಕರಣಕ್ಕೆ ದೊಡ್ಡ ಹೋರಾಟ ಮಾಡಿದ್ದರು. ಮಹಾತ್ಮಾ ಗಾಂಧೀಜಿ ಅವರ ಚಿಂತನೆ ಅಳವಡಿಸಿಕೊಂಡ ನಾಯಕರು. ನಮ್ಮ ಕರ್ನಾಟಕದಿಂದ ಕಾಂಗ್ರೆಸ್ ಪಕ್ಷದ ಅಧ್ಯಕ್ಷರಾಗಿದ್ದವರು ನಿಜಲಿಂಗಪ್ಪ ಅವರು. ಅವರ ಬಳಿಕ ಇಂದು ಮಲ್ಲಿಕಾರ್ಜುನ ಖರ್ಗೆ ಅವರು ಅಧ್ಯಕ್ಷರಾಗಿದ್ದಾರೆ. ಕೇಂದ್ರದಲ್ಲಿ ಕನ್ನಡ ಹಾಗೂ ಕರ್ನಾಟಕದ ಏಕೀಕರಣಕ್ಕೆ ಧ್ವನಿ ಎತ್ತಿದ ನಾಯಕ" ಎಂದು ಬಣ್ಣಿಸಿದರು.

"ಸರಳತೆ ನಿಜಲಿಂಗಪ್ಪ ಅವರ ಆಸ್ತಿ. ಅವರ ಆಸ್ತಿ ಬೇರೆಯವರ ಪಾಲಾಗಬಾರದು ಎಂದು ಸಿದ್ದರಾಮಯ್ಯ ಅವರ ನೇತೃತ್ವದ ಸರ್ಕಾರ ಆಸ್ತಿಯನ್ನು ಸರ್ಕಾರದ ವಶಕ್ಕೆ ಪಡೆಯಲಾಗಿದೆ. ಇಂತಹ ನಾಯಕರ ಆಡಳಿತ ಜಾತ್ಯಾತೀತ ತತ್ವ ಬಸವಣ್ಣನವರ ಚಿಂತನೆಯನ್ನು ಪ್ರತಿಬಿಂಬಿಸಿದ ಧೀಮಂತ ನಾಯಕ, ಮುಖ್ಯಮಂತ್ರಿಯಾಗಿದ್ದರು. ನಾವೆಲ್ಲರೂ ಅವರ ಹಾದಿಯಲ್ಲಿ ಸಾಗಬೇಕು" ಎಂದು ಅಭಿಪ್ರಾಯಪಟ್ಟರು.

"ದೇಶದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿದ್ದಾಗ ಎಐಸಿಸಿ ಅಧ್ಯಕ್ಷರಾಗಿ ಅವರು ಕೊಟ್ಟ ಮಾರ್ಗದರ್ಶನಗಳು, ದಾಖಲೆಗಳಲ್ಲಿ ಇವೆ. 1924ರ ಬೆಳಗಾವಿ ಅಧಿವೇಶನ ಸಂದರ್ಭದಲ್ಲಿ ನಿಜಲಿಂಗಪ್ಪ ಅವರ ಪಾತ್ರ ದೊಡ್ಡದಾಗಿತ್ತು. ನೀರಾವರಿಗೆ ಭದ್ರಾ ಹಾಗೂ ಕೃಷ್ಣ ಮೇಲ್ದಂಡೆ ಯೋಜನೆ ಜಾರಿಗೆ ಪ್ರಮುಖ ಪಾತ್ರ ವಹಿಸಿದ ನಾಯಕರು.

ಅವರ ಕುಟುಂಬದವರಿಗೆ ಒಳ್ಳೆಯದನ್ನು ಮಾಡಲಿ. ನಿಜಲಿಂಗಪ್ಪ ಅವರು ಸಿಎಂ ಆಗಿದ್ದರೂ ಅವರ ಪುತ್ರಿ ನಾನು ಓದಿದ ಕಾಲೇಜಿನಲ್ಲಿ ಅಧ್ಯಾಪಕರಾಗಿ ಕೆಲಸ ಮಾಡುತ್ತಿದ್ದರು. ಅವರು ಸರಳ ಜೀವನ ನಡೆಸಿದ್ದರು. ಅವರ ಮಾರ್ಗದರ್ಶನ ನಮಗೆ ಸದಾ ಅಗತ್ಯ" ಎಂದು ತಿಳಿಸಿದರು.

Vikrama Vahini Kannada Daily, #204, Forest Layout, Jnanabharathi, Bangalore-560095
PRGI NO: KARKAN/2018/78481 vikramavahini@gmail.com 93535 91145
Printed by B.N. Murali Prasad, Published by Swarna Latha B.N., and Printed at Swarna Graphics, Forest Layout, Jnanabharathi, Bangalore -560059 and Published at Bangalore, Editor: B.N. Murali Prasad., Volume:9, Issue : 134,